ಸಂಪುಟ: 14 Volume | ಸಂಚಿಕೆ: 12 Issue | ಪುಟಗಳು 08 Pages | ಮಂಗಳವಾರ 14 ಏಪ್ರಿಲ್ 2026 | ₹4 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ವಿವೇಕಿಯಾದವನು ಬೇರೆಯವರ ತಪ್ಪನ್ನು ಕಂಡು ತನ್ನಲ್ಲಿರುವ ತಪ್ಪನ್ನು ತಿದ್ದಿಕೊಳ್ಳುತ್ತಾನೆ.
–ಸ್ವಾಮಿ ವಿವೇಕಾನಂದ

ಲಾರಿಗೆ ತಲೆಕೊಟ್ಟು ಅಪರಿಚಿತ ವ್ಯಕ್ತಿ ಆತ್ಮಹತ್ಯೆ 6
ನಿರಂತರ ಅಭ್ಯಾಸದಿಂದಲೇ ಯಶಸ್ಸು 7
ಗ್ಯಾರಂಟಿಗಳೂ ಒಂದು ವಿಧದ ಅಭಿವೃದ್ಧಿಯೇ 8



ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ರವರಿಗೆ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ರವರು ಆತ್ಮಿಯವಾಗಿ ಸತ್ಕರಿಸಿದರು. ಈ ಸಂದರ್ಭದಲ್ಲಿ ಮಾಜಿ ಕೆಎಂಎಫ ಅಧ್ಯಕ್ಷ ಮಲ್ಲಿಕಾರ್ಜುನ ಬಿರಾದಾರ ಉಪಸ್ಥಿತರಿದ್ದರು.

## ಸರ್ಕಾರದ ವಿರುದ್ಧ ಗೌಡರ ಗುಡುಗು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನನ್ನ 60 ವರ್ಷಗಳ ರಾಜಕೀಯ ಜೀವನದಲ್ಲಿ ಕರ್ನಾಟಕದಲ್ಲಿ ಈಗ ಇರುವಷ್ಟು ಕೆಟ್ಟ ಸರ್ಕಾರವನ್ನು ನಾನೆಂದೂ ನೋಡಿಲ್ಲ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಗುಡುಗಿದ್ದಾರೆ.

ಕೊಮ್ಮಘಟ್ಟದಲ್ಲಿ ಆಯೋಜಿಸಿದ್ದ ಜೆಡಿಎಸ್ ಜನತಾ ಸಮಾವೇಶಹಾಗೂ ಬೆಳ್ಳಿಹಬ್ಬದ ಸಂಭ್ರಮ ಸಮಾವೇಶದಲ್ಲಿ ಮಾತನಾಡಿ ಆದರೂ ಮುಂದೆಯೂ ತಾವೇ ಅಧಿಕಾರಕ್ಕೆ ಬರುತ್ತೇವೆಂದು ಮೆರೆಯುತ್ತಿದ್ದಾರೆ. ಈ ಸರ್ಕಾರದಿಂದ ಜನ ರೋಸಿ ಹೋಗಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸಲು ಜನರು ಕಾಯುತ್ತಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರ ಅನಿವಾರ್ಯವಾಗಿ ಜಿಬಿಎ ಚುನಾವಣೆ ಮಾಡುತ್ತಿದೆ. ಚುನಾವಣೆಗೆ ನಾವು ತಯಾರಿದ್ದೇವೆ ಎಂದಿದ್ದಾರೆ. ಐದು



ವಿಭಾಗಗಳನ್ನು ರಚಿಸಿ ಐವರು ಉಸ್ತುವಾರಿಗಳನ್ನು ಜೆಡಿಎಸ್ ಪಕ್ಷದಿಂದ ನೇಮಿಸಲಾಗಿದೆ. ಚುನಾವಣೆಗೆ ಹೆದರುವ ಜಾಯಮಾನ ನಮ್ಮ ಪಕ್ಷದ್ದಲ್ಲ ಎಂದು ರಾಜ್ಯ ಸರ್ಕಾರಕ್ಕೆ ಚಾಟಿ ಬೀಸಿದರು.ಸಿಎಂ ಸಿದ್ದರಾಮಯ್ಯ ಸಾಮಾಜಿಕ ನ್ಯಾಯದ ಪರ ಇಲ್ಲ. ಕೇವಲ ರಾಜಕೀಯ ಸ್ವಾರ್ಥಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಮಾಜಿಕ ನ್ಯಾಯದ ಜಪ ಮಾಡುತ್ತಿದ್ದಾರೆ ಎಂದು ದೂರಿದರು.

## ನಾರಿ ಶಕ್ತಿಯ ಬಣ್ಣಿಸಿದ ಪ್ರಧಾನಿ ಮೋದಿ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಅವರು, ನಾರಿ ಶಕ್ತಿ ವಂದನ ಅಧಿನಿಯಮವನ್ನು 21ನೇ ಶತಮಾನದ ಅತ್ಯಂತ ಮಹತ್ವದ ಬೆಳವಣಿಗೆಗಳಲ್ಲಿ ಒಂದು ಎಂದು ಬಣ್ಣಿಸಿದ್ದಾರೆ. ಇದು ಸಾಮಾಜಿಕ ನ್ಯಾಯದಲ್ಲಿ ಬೇರೂರಿರುವ ಸಮಾನತಾ ಸಮಾಜವನ್ನು ನಿರ್ಮಿಸುವ ಭಾರತದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರತಿಪಾದಿಸಿದ್ದಾರೆ.

ನಾರಿ ಶಕ್ತಿ ವಂದನ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಸಂಸತ್ತು ಈ ಹಿಂದಿನ ದೃಷ್ಟಿಕೋನಗಳನ್ನು ಸಾಕಾರಗೊಳಿಸುವ, ಭವಿಷ್ಯದ ನಿರ್ಣಯಗಳನ್ನು ಪೂರೈಸುವ ಹೊಸ ಇತಿಹಾಸವನ್ನು ಸೃಷ್ಟಿಸಲು ಹತ್ತಿರದಲ್ಲಿದೆ ಎಂದು ಹೇಳಿದ್ದಾರೆ.

ಮಹಿಳಾ ಮೀಸಲು ಕಾನೂನು ಸಾಮಾಜಿಕ



ನ್ಯಾಯವು ಕೇವಲ ಘೋಷಣೆಯಾಗಿರದೆ ಕೆಲಸದ ಸಂಸ್ಕೃತಿಯ ನೈಸರ್ಗಿಕ ಭಾಗವಾಗುವುದನ್ನು ಖಚಿತಪಡಿಸಿಕೊಳ್ಳುವ ರಾಷ್ಟ್ರೀಯ ಸಂಕಲ್ಪವನ್ನು ಪ್ರತಿನಿಧಿಸುತ್ತದೆ. ಪ್ರಜಾಪ್ರಭುತ್ವ ರಚನೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಒದಗಿಸುವ ಅಗತ್ಯವು ದೇಶಾದ್ಯಂತ ದಶಕಗಳಿಂದ ಅನುಭವಿಸಲ್ಪಟ್ಟಿದೆ ಎಂದು ತಿಳಿಸಿದ್ದಾರೆ.

### ರೈತನ ಮಗ 600 ಅಂಕಕ್ಕೆ 583 ಅಂಕ

**ಯಲಬುರ್ಗಾ:** ತಾಲೂಕಿನ ಬಂಡಿಹಾಳ ಗ್ರಾಮದ ಬಡ ರೈತ ಬಸಪ್ಪ ಬೂದಿಹಾಳ ತನ್ನ ಮಗನ ವಿದ್ಯಾಭ್ಯಾಸಕ್ಕಾಗಿ ತನ್ನ ಕಷ್ಟಗಳನ್ನು ದೂರತಳ್ಳಿಹಾಕಿ ಮಗನ ಓದಿಗಾಗಿ ಶ್ರಮಿಸಿದ್ದಾನೆ. ಗ್ರಾಮೀಣ ಭಾಗದ ವಿದ್ಯಾರ್ಥಿ ದರ್ಶನ ಇತನು



ಹಿರೇಸಿಂಧೋಗಿ ಮುರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ವಿಜ್ಞಾನ ಕಾಲೇಜಿಗೆ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ 600 ಅಂಕಗಳಲ್ಲಿ 583 ಅಂಕಗಳನ್ನು ಪಡೆದು 97.16 ಪ್ರತಿಶತ ಅಂಕಗಳನ್ನು ಪಡೆದು ಕೊಂಡು ಕಾಲೇಜಿಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾನೆ. ಶಾಲೆಯ ಶಿಕ್ಷಕ ವೃಂದ ಹಾಗೂ ಹಿರೇಸಿಂದೋಗಿಯ ಪ್ರಾಚಾರ್ಯರು ಮತ್ತು ಬಂಡಿಹಾಳ ಗ್ರಾಮದ ಗುರು ಹಿರಿಯರ ಸಂತಸ ವ್ಯಕ್ತಪಡಿಸಿದ್ದಾರೆ.

# ಮಂತ್ರಿಗಿರಿ ಲಾಬಿಗೆ ಶಾಕ್

## ಸಂಪುಟ ಪುನಾರಚನೆ | ಸಚಿವ ಸ್ಥಾನಕ್ಕೆ ದಿಲ್ಲಿಯಲ್ಲಿ ಬೀಡು ಬಿಟ್ಟ ಕಾಂಗ್ರೆಸ್ ಶಾಸಕರ ವಿರುದ್ಧ ಡಿಸಿಎಂ ಗರಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಂಪುಟ ಪುನಾರಚನೆ ಮತ್ತು ಮಂತ್ರಿ ಸ್ಥಾನಕ್ಕೆ ದೆಹಲಿಗೆ ತೆರಳಿರುವ ಕಾಂಗ್ರೆಸ್ ಶಾಸಕರಿಗೆ ಡಿಸಿಎಂ ಡಿಕೆ ಶಿವಕುಮಾರ್ ಶಾಕ್ ಕೊಟ್ಟಿದ್ದಾರೆ. ಅನಾವಶ್ಯಕ ಗೊಂದಲ ಸೃಷ್ಟಿಸದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ 3 ವರ್ಷ ತುಂಬಿದ ಹಿನ್ನಲೆಯಲ್ಲಿ ಸಂಪುಟ ಪುನಾರಚನೆ ಮಾಡಬೇಕು ಮತ್ತು ಬೇರೆ ಶಾಸಕರಿಗೂ ಮಂತ್ರಿಯಾಗುವ ಅವಕಾಶ ನೀಡಬೇಕು ಎಂದು ಆಗ್ರಹಿಸಿ ಕಾಂಗ್ರೆಸ್ ನ ಕೆಲ ಶಾಸಕರ ಗುಂಪು ದೆಹಲಿಗೆ ಹಾರಿದೆ.

**ಹೈಕಮಾಂಡ್ ಭೇಟಿ, ಮನವಿ:** ಮಾಜಿ ಸಚಿವ ಟಿಬಿ ಜಯಚಂದ್ರ, ಅಶೋಕ್ ಪಠಾಣ್, ಎಸ್.ನಾರಾಯಣಸ್ವಾಮಿ, ಮತ್ತು ಕೆ.ಷಡಕ್ಷರಿ ಸೇರಿದಂತೆ ಹಲವು ಶಾಸಕರು ದೆಹಲಿಗೆ ಹೋಗಿದ್ದು ಅಲ್ಲಿ ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಿ ತಮ್ಮ ಮನವಿ ಸಲ್ಲಿಸಲು ಮುಂದಾಗಿರುವುದು ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿದೆ.

**ಇದು ಪ್ರತಿನಿತ್ಯದ ಕೆಲಸ:** ಈ ಕುರಿತು ದೆಹಲಿಯಲ್ಲಿ ಪ್ರತಿಕ್ರಿಯೆ ನೀಡಿರುವ ಟಿಬಿ ಜಯಚಂದ್ರ ಅವರು, ಇದು ನನಗೆ ನಿತ್ಯದ ಕೆಲಸ. ನಾನು ದೆಹಲಿಯಲ್ಲಿ ರಾಜ್ಯ ಪ್ರತಿನಿಧಿ. ವಿಧಾನಸಭಾ ಚುನಾವಣೆಯ ನಂತರ ನಾನು ಇಲ್ಲಿದ್ದೇನೆ. ಈಗ, ಇಂದು ನಾನು ಮಾತ್ರ ಬಂದಿದ್ದೇನೆ. ಅನೇಕ ಶಾಸಕರು ಸಹ ಬರುತ್ತಿದ್ದಾರೆ ಎಂದು ವಿವರಿಸಿದ್ದಾರೆ.





### ಸಂಪುಟ: ಮನವೊಲಿಕೆ ಯತ್ನ

ನಾವು ಹೈಕಮಾಂಡ್ ಅನ್ನು ಭೇಟಿ ಮಾಡಿ ಪುನರ್ರಚನೆಗಾಗಿ ಮನವೊಲಿಸಲು ಬಯಸಿದ್ದೆವು. ಅದು ಅನೇಕ ಹಿರಿಯ ಶಾಸಕರ ಬೇಡಿಕೆಯಾಗಿದೆ. ಈ ಸರ್ಕಾರಕ್ಕೆ ಮೂರು ವರ್ಷಗಳ ಕಾಲ ಅವಕಾಶ ನೀಡಲಾಗಿದೆ. ಮೂರು ವರ್ಷಗಳು ಮುಗಿದಿವೆ. ಕೇವಲ ಎರಡು ವರ್ಷಗಳು ಮಾತ್ರ ಉಳಿದಿವೆ. ಅದಕ್ಕಾಗಿಯೇ ನಾವೆಲ್ಲರೂ ಹೆಚ್ಚಿನ ಬೇಡಿಕೆಯನ್ನು ಪೂರೈಸಲು ಬಯಸಿದ್ದೇವೆ ಎಂದಿದ್ದಾರೆ ಟಿಬಿ ಜಯಚಂದ್ರ.

### ಅನಗತ್ಯ ಹೇಳಿಕೆಗೆ ವಾರ್ನಿಂಗ್


ಪಕ್ಷದ ಶಾಸಕರು ಹೈಕಮಾಂಡ್ ವರಿಷ್ಠರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿಲ್ಲ. ಪಕ್ಷದ ಶಿಸ್ತನ್ನು ಎಲ್ಲಾ ಶಾಸಕರು ಕಾಪಾಡಬೇಕು. ಪಕ್ಷಕ್ಕೆ ಗೌರವ ನೀಡಬೇಕು. ಮಾಧ್ಯಮಗಳ ಮುಂದೆ ಪಕ್ಷದ ಗೌರವವನ್ನು ಹಾಳು ಮಾಡಬಾರದು. ಅನವಶ್ಯಕವಾಗಿ ಏನೇನೋ ಹೇಳಿಕೆ ನೀಡಿದರೆ ಶಿಸ್ತು ಕ್ರಮ ಜರುಗಿಸಲಾಗುವುದು. ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

### ಸಂಪುಟಕ್ಕೆ ವರಿಷ್ಠರ ಅಂಕಿತ

ಸಚಿವ ಸ್ಥಾನದ ಆಕಾಂಕ್ಷಿ ಶಾಸಕರು ನವದೆಹಲಿಗೆ ಭೇಟಿ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ. ಸಂಪುಟ ಪುನರ್ರಚನೆ ನಿರ್ಧಾರವನ್ನು ಹೈಕಮಾಂಡ್ ಕೈಗೊಳ್ಳಬೇಕಿದೆ. ಸಂಪುಟ ಪುನರ್ರಚನೆ ಕಾರ್ಯ ಬಾಕಿಯಿದೆ. ಐದು ರಾಜ್ಯಗಳ ಚುನಾವಣೆ, ಬಜೆಟ್ ಅಧಿವೇಶನ ಸಂಪುಟ ಪುನರ್ರಚನೆ ವಿಳಂಬಕ್ಕೆ ಕಾರಣವಿರಬಹುದು. ಚುನಾವಣೆಯ ಬಳಿಕ ಎಲ್ಲವೂ ಸರಿಹೋಗಲಿದೆ ಎಂದಿದ್ದಾರೆ ಮುಖ್ಯಮಂತ್ರಿ ಸಿದ್ದರಾಮಯ್ಯ.

### ಶಾಸಕರ ಪತ್ರಕ್ಕೆ ಬೇಕು ಮನ್ನಣೆ

ಮೊದಲ ಬಾರಿ ಶಾಸಕರಾದವರಿಗೂ ಸಚಿವ ಸ್ಥಾನ ಸಿಗಬೇಕು. ಇದರಲ್ಲಿ ಬದಲಾವಣೆ ಇಲ್ಲ. ಹೊಸಬರಿಗೆ ಮಂತ್ರಿಗಿರಿ ನೀಡುವಂತೆ ನಾನು ಸೇರಿದಂತೆ 38 ಶಾಸಕರು ಪತ್ರ ಬರೆದಿದ್ದು, ಐದು ಮಂದಿ ಹೊಸಬರಿಗೆ ಮಂತ್ರಿಗಿರಿ ನೀಡುವಂತೆ ಕೋರಿದ್ದೇವೆ. ಹೊಸದಾಗಿ ಶಾಸಕರಾದವರಿಗೆ ಸಚಿವ ಸ್ಥಾನ ಸಿಗಬೇಕು ಎಂಬ ತಮ್ಮ ಆಗ್ರಹದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದಿದ್ದಾರೆ ಶಾಸಕ ರವಿಕುಮಾರ್ ಗಣಿಗ.



ಉಗಾದಿ ವಿಶೇಷಾಂಕ ಲೋಕಾರ್ಪಣೆ ಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ.


### ಬಹೃತ್ ಸಾರ್ವಜನಿಕ ಸಭೆಗೆ ಅಸ್ತು

**ಸೇಡಂ:** ಕಲಬುರಗಿಯಲ್ಲಿ ಏ.19 ರಂದು ನಡೆಯಲಿರುವ ಬಸವ ಜಯಂತಿ 2026 ಪ್ರಯುಕ್ತ ಬೃಹತ್ ಸಾರ್ವಜನಿಕ ಸಭೆ ನಡೆಸಲು ನಿರ್ಧರಿಸಗಿದೆ. 893 ನೇ ಬಸವ ಜಯಂತ್ಯುತ್ಸವ, ಬೃಹತ್ ಮೆರವಣಿಗೆಯ ಕರಪತ್ರಗಳನ್ನು ಜಯಂತೋತ್ಸವ ಸಮಿತಿ ಜಿಲ್ಲಾ ಪದಾಧಿಕಾರಿಗಳು ಇಲ್ಲಿ ಬಿಡುಗಡೆ ಮಾಡಿದ್ದಾರೆ. ಶ್ರೀ ಕೊತ್ತಲ ಬಸವೇಶ್ವರ ದೇವಾಲಯದ ಆವರಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಜಯಂತೋತ್ಸವ ಸಮಿತಿಯ ಪದಾಧಿಕಾರಿಗಳು ಬಿಡುಗಡೆ ಮಾಡಿ ಮಾತನಾಡಿದ್ದಾರೆ. ಡಾ. ಸದಾಶಿವ ಮಹಾಸ್ವಾಮಿ, ಪಂಚಾಕ್ಷರಿ ಮಹಾಸ್ವಾಮಿ, ಸಚಿವ ಡಾ. ಶರಣಪ್ರಕಾಶ ಪಾಟೀಲ್ ಊಡಗಿ, ಬಿ.ಆರ್ ಪಾಟೀಲ್, ಬಿ.ಜಿ ಪಾಟೀಲ್ ಜೊತೆ ಅನೇಕರು ಉಪಸ್ಥಿತರಿದ್ದರು.

## ರಾಜಕೀಯ ಕಾರ್ಯದರ್ಶಿ ರಾಜಿನಾಮೆ ಶೀಘ್ರ..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನನ್ನ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ರಾಜೀನಾಮೆ ಕೊಟ್ಟಿಲ್ಲ. ಕೊಡಬಹುದು ಅಂದುಕೊಂಡಿದ್ದೇನೆ ಎಂದು ಸಿಎಂ ತಿಳಿಸಿದ್ದಾರೆ.



ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಟಿಕೆಟ್ ಸಿಗದ ಕಾರಣಕ್ಕೆ ಪ್ರಚಾರದಿಂದ ದೂರ ಉಳಿದಿದ್ದ ನಸೀರ್ ಅಹ್ಮದ್ ಅವರು ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಹೈಕಮಾಂಡ್ ತಾಕೀತು ಮಾಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಮುಖ್ಯಮಂತ್ರಿ ಈ ರೀತಿ ಪ್ರತಿಕ್ರಿಯಿಸಿದ್ದಾರೆ. ದಾವಣಗೆರೆ ಉಪಚುನಾವಣೆಯ ಉಸ್ತುವಾರಿಗೆ ಹೈಕಮಾಂಡ್ ಎಐಸಿಸಿ ಕಾರ್ಯದರ್ಶಿಯನ್ನು ನೇಮಿಸಿತ್ತು. ಆಡಳಿತಾರೂಢ ಪಕ್ಷ ಕಾಂಗ್ರೆಸ್ನ ಅಲ್ಪಸಂಖ್ಯಾತ ನಾಯಕರ ನಡುವೆ ಹೊತ್ತಿಕೊಂಡ 'ಹುನ್ನಾರದ ಕಿಡಿ' ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು ಸಿಎಂ ರಾಜಕೀಯ ನಸೀರ್ ಅಹಮದ್ ಅವರ ಸ್ಥಾನಕ್ಕೂ ಸಂಚಕಾರ ತಂದೊಡ್ಡಿದೆ.

## ರಾಜ್ಯದಾದ್ಯಂತ ಬಿ. ಆರ್ ಅಂಬೇಡ್ಕರ್ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ ಆರ್ ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ರಾಜ್ಯದಾದ್ಯಂತ ಇಂದಿನಿಂದ (ಏ.13) ರಿಂದ 20 ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ.



ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಾಬಾ ಸಾಹೇಬ್ ಅವರ ಜಯಂತಿ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಇಡೀ ರಾಜ್ಯಕ್ಕೆ ಎಲ್ಲ ಜಿಲ್ಲೆ ಮತ್ತು ತಾಲೂಕುಗಳಿಗೇ ಭಾರತೀಯ ಜನತಾ ಪಕ್ಷವತಿಯಿಂದ ಸೂಚನೆ ನೀಡಲಾಗಿದೆ ಎಂದಿದ್ದಾರೆ. ಅಂಬೇಡ್ಕರ್ ಅವರು ಕೇವಲ ಸಂವಿಧಾನ ಶಿಲ್ಪಿ ಮಾತ್ರ ಅಲ್ಲ. ಅವರು ಸಾಮಾಜಿಕ ನ್ಯಾಯದ ಹರಿಕಾರರೂ ಆಗಿದ್ದರು. ಸಮಾನತೆಯ ಸಂಕೇತದಂತಿದ್ದರು. ಹಲವು ವರ್ಷಗಳ ಹಿಂದೆಯೇ ಅಭಿವೃದ್ಧಿಶೀಲ ರಾಷ್ಟ್ರಕ್ಕೆ ಅಡಿಪಾಯ ಹಾಕಿದವರು ಎಂದಿದ್ದಾರೆ.

## ಸಿಬಿಪಿಯು ವಿದ್ಯಾರ್ಥಿಗಳ ಅದ್ಭುತ ಸಾಧನೆ

• ಪರಶುರಾಮ ಕರಣಂ, ಭಾಲ್ಕಿ

ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ಸಿಬಿ ಪಿಯು ಕಲಾ, ವಿಜ್ಞಾನ, ವಾಣಿಜ್ಯ ವಿದ್ಯಾರ್ಥಿಗಳು ದ್ವಿತೀಯ ಪಿಯು ಫಲಿತಾಂಶದಲ್ಲಿ ಅದ್ಭುತ ಸಾಧನೆ ಮಾಡಿದ್ದು, ಕಾಲೇಜಿನ ಕೀರ್ತಿಯನ್ನು ಉತ್ತುಂಗ ಮಟ್ಟಕ್ಕೆ ತೆಗೆದುಕೊಂಡು ಹೋಗಿದ್ದಾರೆ. ಕಲಾ ವಿಭಾಗದಲ್ಲಿ ಸೇವಂತಿ ಫಿಲಿಪ್ 600 ಕ್ಕೆ 583 ಅಂಕ ಪಡೆದು ಜಿಲ್ಲೆಯಲ್ಲಿ ದ್ವಿತೀಯ ಸ್ಥಾನವನ್ನು ಹೊಂದಿದ್ದಾಳೆ. ವಿಜ್ಞಾನ ವಿಭಾಗದಲ್ಲಿ ಸಾಧನ ಗುರು ಚರಣ 600 ಕ್ಕೆ 563 ಅಂಕಗಳನ್ನು ಪಡೆದು ಗಮನ ಸೆಳೆದಿದ್ದಾಳೆ.

ವಾಣಿಜ್ಯ ವಿಭಾಗದಲ್ಲಿ ಭಾಗ್ಯಶ್ರೀ ವಿನೋದ್ 600 ಕ್ಕೆ 568 ಅಂಕಗಳನ್ನು ಪಡೆದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಗೀತಾ ಈಶ್ವರ್ ಖಂಡ್ರೆ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ಸಂದರ್ಭದಲ್ಲಿ ಪ್ರಾಚಾರ್ಯರಾದ ಲಕ್ಷ್ಮಿಕಾಂತ ನಾಟೇಕರ್, ಉಪನ್ಯಾಸಕ ವೃಂದದವರು ಉಪಸ್ಥಿತರಿದ್ದರು.

**ಉಪನ್ಯಾಸಕ, ಪ್ರಿನ್ಸಿಪಾಲರ ಶ್ರೇಷ್ಠ ಬೋಧನೆ**



ಸಿಬಿಪಿಯು ಕಾಲೇಜಿನಲ್ಲಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳು ಅಮೋಘ ಸಾಧನೆ ಮಾಡಿದ್ದಾರೆ. ಪರಿಣಾಮಕಾರಿ ಶಿಕ್ಷಣವನ್ನು ನೀಡುತ್ತಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೋಸ್ಕರ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಅಕ್ಷರ ದಾಸೋಹವನ್ನು ಮಾಡುತ್ತಿದೆ. ವಿದ್ಯಾರ್ಥಿಗಳಿಗೂ, ಪ್ರಾಚಾರ್ಯರಿಗೂ, ಉಪನ್ಯಾಸಕ ವೃಂದದವರಿಗೂ ಅಭಿನಂದನೆಗಳು.
–ಸಾಗರ್ ಈಶ್ವರ್ ಖಂಡ್ರೆ, ಕಾರ್ಯದರ್ಶಿಗಳು
ಶಾಂತಿವರ್ಧಕ ಶಿಕ್ಷಣ ಸಂಸ್ಥೆ, ಭಾಲ್ಕಿ

ಗಡಿ ಭಾಗದಲ್ಲಿ ಕಡಿಮೆ ಶುಲ್ಕದಲ್ಲಿ ಗುಣಾತ್ಮಕ ಶಿಕ್ಷಣವನ್ನು ನೀಡಲಾಗುತ್ತಿದೆ. ನುರಿತ, ಅನುಭವಿ ಉಪನ್ಯಾಸಕರಿದ್ದು ಪರಿಣಾಮಕಾರಿ ಬೋಧನೆಯನ್ನು ಮಾಡಲಾಗುತ್ತಿದೆ. ಈ ವರ್ಷದ ಉತ್ತಮ ಫಲಿತಾಂಶದಲ್ಲಿ ಪ್ರಾಂಶುಪಾಲರ ಯೋಜನೆ ಪರಿಣಾಮಕಾರಿಯಾಗಿದೆ ಎಂದು ಭಾಲಕಿಯ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ನಿರ್ದೇಶಕರಾದ ಡಾ.ಗೀತಾ ಈಶ್ವರ್ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

## ಭಕ್ತಿ ಭಾವದ ಶ್ರೀಪಾದಂಗಳ ಶೋಭಯಾತ್ರೆ

• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ

ಪಟ್ಟಣದ ರಾಘವೇಂದ್ರ ಸ್ವಾಮಿಗಳವರ ಮಠದ 50ನೇ ವರ್ಷದ ಸುವರ್ಣ ಮಹೋತ್ಸವದ ನಿಮಿತ್ಯ ಮಂತ್ರಾಲಯದ ಡಾ.ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಶೋಭಯಾತ್ರೆ ನೆರವೇರಿತು. ಡೋಳ್ಳು, ಸಕಲ ವಾದ್ಯಗಳೊಂದಿಗೆ, ಮಹಿಳೆಯರು ಹಾಗೂ ವಿವಿಧ ಕಲಾವಿದರು ತಾಳಕ್ಕೆ ತಕ್ಕಂತೆ ಕುಣಿಯುತ್ತಾ, ನಲಿಯುತ್ತಾ ಆನಂದಮಯ ಲೋಕದಲ್ಲಿ ಭಕ್ತಿ ಭಾವದಿಂದ ಭಜನೆ ಮಾಡಿ ಗಮನ ಸೆಳೆದಿದ್ದಾರೆ. ಭಕ್ತಿಯ ಹಾಡುಗಳನ್ನು ಇಂಪಾಗಿ ಹಾಡುವ ಮೂಲಕ ಸಡಗರ ಸಂಭ್ರಮ, ವಿಜೃಂಭಣೆಯಿಂದ ಮೇರವಣಿಗೆಯು ಪಾಂಡುರಂಗ ದೇವಸ್ಥಾನದಿಂದ ಪ್ರಾರಂಭಗೊಂಡ ಮಂತ್ರಾಲಯದ ಡಾ.ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಶೋಭಯಾತ್ರೆ ಪಟ್ಟಣದ ಪ್ರಮುಖ ರಾಜ ಬೀದಿಗಳ ರಸ್ತೆಗಳ ಮೂಲಕ ಶೋಭಯಾತ್ರೆ ನಡೆಯಿತು.



### ಅಪಾರ ಭಕ್ತ ಸಮೂಹ ಪುನೀತ

ವಿವಿಧ ವೃತ್ತಗಳಲ್ಲಿ ಬಣ್ಣ ಬಣ್ಣದ ಚಿತ್ತಾರದ ಪಟಾಕಿಗಳು ಆಕಾಶದೆತ್ತರಕ್ಕೆ ಹಾರಿ ನೋಡುಗರ ಕಣ್ಮಣ ಸಳೆಯಿತು ನಂತರ ಮಂತ್ರಾಲಯದ ಡಾ.ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಶೋಭಯಾತ್ರೆಯು ರಾಘವೇಂದ್ರ ಸ್ವಾಮಿಗಳ ಮಠಕ್ಕೆ ತಲುಪಿತು. ಈ ವೇಳೆ ರಾಘವೇಂದ್ರ ಸ್ವಾಮಿಗಳ ಮಠದ ಸೇವಾ ಸಮಿತಿಯ ಸರ್ವ ಪದಾಧಿಕಾರಿಗಳು, ಅಪಾರ ಭಕ್ತ ಸಮೂಹ ಹಾಗು ವಿವಿಧ ಪಕ್ಷದ ರಾಜಕೀಯ ಮುಖಂಡರು, ಗುರುಹಿರಿಯರು, ಪತ್ರಕರ್ತರು ಭಾಗವಹಿಸಿ ಶ್ರೀಗಳ ಆಶೀರ್ವಾದ ಪಡೆದು ಪುನೀತರಾದರು.

**ಉದ್ಯೋಗ ಖಾತ್ರಿ ಯೋಜನೆಗೆ ಒಂದಿಷ್ಟು ಪರಿಷ್ಕರಣೆ ಮಾಡುವ ಕೆಲಸವನ್ನು ಪ್ರಧಾನಿ ಮಾಡಿದ್ದಾರೆ: ಸಂಸದ ಕೋಟ ಶ್ರೀನಿವಾಸ ಪೂಜಾರಿ**

# ಎಲ್ಲರಿಗು ಬೇಕು ಆರೋಗ್ಯದ ಕಾಳಜಿ



ಭಾಲ್ಕಿ ತಾಲೂಕಿನ ಭಾತಂಬ್ರಾ ಗ್ರಾಮದ ವೀರಭದ್ರೇಶ್ವರ ದೇವಸ್ಥಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಭೇಟಿ ನೀಡಿ ದರುಶನ ಪಡೆದುಕೊಂಡರು. ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ, ಮಹಾದೇವ ಬೇಲೂರೆ, ಕಾಶಿನಾಥ ಲದ್ದೆ, ವಿಶ್ವ ಹೂಗಾರ, ಸಂಜು ಚಿದ್ರೆ ಸೇರಿದಂತೆ ಹಲವರು ಇದ್ದರು.

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಪ್ರತಿಯೊಬ್ಬರು ತಮ್ಮ ಆರೋಗ್ಯವನ್ನು ಕಾಲಕಾಲಕ್ಕೆ ತಪಾಸಣೆ ಮಾಡಿಸಿಕೊಂಡು ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಗದ್ಗುರು ನಿರಂಜನ ಸಂಸ್ಥಾನ ಮಠದ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ಹೇಳಿದರು. ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ ಅಪೇಕ್ಸ್ ಡೆಂಟಲ್ ಕ್ಲಿನಿಕ್ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿನ ಜನ ಕಾಲ ಕಾಲಕ್ಕೆ ಆಸ್ಪತ್ರೆಗೆ ತೆರಳಿ ಆರೋಗ್ಯ ತಪಾಸಣೆ ಮಾಡುವುದು ವಿರಳ. ಜಾತ್ರಾ ಮಹೋತ್ಸವ ಅಂಗವಾಗಿ ಗ್ರಾಮೀಣ ಭಾಗದಲ್ಲಿ ಇಂತಹ ಶಿಬಿರ ಆಯೋಜಿಸಿರುವುದರಿಂದ ಬಡ ಜನರಿಗೆ ಅನುಕೂಲವಾಗಿದೆ ಎಂದು ತಿಳಿಸಿದರು.

ಜಗದ್ಗುರು ಗುರುಬಸವ ಸ್ವಾಮೀಜಿ ನೇತೃತ್ವ ವಹಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ವೀರಭದ್ರೇಶ್ವರ ದೇವಸ್ಥಾನದ ಅಧ್ಯಕ್ಷ ಮಹಾದೇವ ಬೇಲೂರೆ ಮಾತನಾಡಿ, ಗ್ರಾಮಸ್ಥರ ಸಹಕಾರದಿಂದ ಸೇವಾ ಮನೋಭಾವದಿಂದ ಈ ಶಿಬಿರ ಆಯೋಜಿಸಿದ್ದು, ನೂರಾರು ಜನ ಇದರ ಪ್ರಯೋಜನ ಪಡೆದಿದ್ದಾರೆ ಎಂದು ತಿಳಿಸಿದರು.

ಡಾ.ಅನಿಲ ಹನಪಟ್ಟೆ, ಡಾ.ಸುನಿಲ ಹನಪಟ್ಟೆ ಮತ್ತು ಶಿವಾಜಿ ಗುರ್ದಾಳೆ ಅವರು ಜನರ ಆರೋಗ್ಯ ತಪಾಸಣೆ ನಡೆಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಹಾಂತೇಶ ಪಾಟೀಲ್, ಪ್ರಮುಖರಾದ ಶ್ರೀಕಾಂತ ಭೋರಾಳೆ ಸೇರಿದಂತೆ ಹಲವರು ಇದ್ದರು.

ದರುಶನ ಪಡೆದ ಖಂಡ್ರೆ

ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವೀರಭದ್ರೇಶ್ವರ ದೇಗುಲಕ್ಕೆ ಭೇಟಿ ನೀಡಿ ದೇವರ ದರುಶನ ಪಡೆದರು. ಈ ಸಂದರ್ಭದಲ್ಲಿ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ, ದೇಗುಲದ ಅಧ್ಯಕ್ಷ ಮಹಾದೇವ ಬೇಲೂರೆ, ಪ್ರಮುಖರಾದ ಕಾಶಿನಾಥ ಲದ್ದೆ, ವಿಶ್ವ ಹೂಗಾರ, ಸಂಜಕುಮಾರ ಚಿದ್ರೆ ಸೇರಿದಂತೆ ಹಲವರು ಇದ್ದರು.

# ಜಾಗ ಅಕ್ರಮ ವಶಪಡಿಸಿಕೊಳ್ಳಲು ಯತ್ನ ಪ್ರಕರಣ ದಾಖಲಿಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ, ಬೀದರ್

ನಾವು 19 ಲಕ್ಷ ಹಣ ನೀಡಿ ಖರಿದಿಸಿದ ಜಾಗವನ್ನು ಅಕ್ರಮವಾಗಿ ವಶಪಡಿಸಿಕೊಂಡಿರುವ ನವಜೀವನ ಬುದ್ಧಿಮಾಂದ್ಯ ವಸತಿ ಶಾಲೆಯ ಮುಖ್ಯಸ್ಥರ ವಿರೂದ್ಧ ಪ್ರಕರಣ ದಾಖಲಿಸುವಂತೆ ದಿ.ಲಕ್ಷ್ಮೀ ನಾರಾಯಣ ನಾಗವಾರ ಸ್ಥಾಪಿತ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕಲಬುರಗಿ ವಿಭಾಗೀಯ ಸಂಚಾಲಕರಾದ ಉಮೇಶಕುಮಾರ ಸೊರಳ್ಳಿಕರ್ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಐಡಿಬಿ ವತಿಯಿಂದ ಮಂಜೂರಾದ ಜಾಗವನ್ನು ಅಕ್ರಮವಾಗಿ ವಶಪಡಿಸಿಕೊಳ್ಳಲು ಯತ್ನಿಸಿರುವುದಾಗಿ ಆರೋಪಿಸಿ ಸಂಬಂಧಪಟ್ಟವರ ಮೇಲೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಕೆಐಡಿಬಿ ಆದೇಶ ಸಂಖ್ಯೆ KIDB/13/BDR/DO/ALLOT/2020-21, ದಿನಾಂಕ 15-07-2020ರ ಪ್ರಕಾರ, ಬೀದರ ತಾಲೂಕಿನ ಕೊಳಾರ ಕೈಗಾರಿಕಾ ಪ್ರದೇಶದ ಕಮಠಾಣ ಹೋಬಳಿಯ ಬೆಳ್ಳೂರ ಗ್ರಾಮದ ಸರ್ವೆ ನಂ. 4(4)ರಲ್ಲಿ ಪ್ಲಾಟ್ ಸಂಖ್ಯೆ 301ಪಿ1 (1182.75 ಚ.ಅಡಿ) ಜಾಗವನ್ನು ಸಣ್ಣ ಉದ್ಯಮ ಸ್ಥಾಪನೆಗಾಗಿ ತಮ್ಮ ಹತ್ತಿರದ ಸಂಬಂಧಿ ನಗರದ ವಿದ್ಯಾನಗರ ಬಡಾವಣೆಯ ನಿವಾಸಿ ಸತ್ಯಶೀಲ ತಂದೆ: ಜೈರಾಮ ಮೀತ್ರ ಅವರಿಗೆ ಮಂಜೂರು ಮಾಡಲಾಗಿದೆ.

ಆದರೆ, ದಿನಾಂಕ 09-04-2026ರಂದು ರಾತ್ರಿವೇಳೆಯಲ್ಲಿ ಅನೀಲ ಬೆಲ್ದಾರ ಮತ್ತು ಇತರರು ಸೇರಿಕೊಂಡು "ನವಜೀವನ ಬುದ್ಧಿಮಾಂದ್ಯ ವಿಕಲಚೇತನರ ವಸತಿ ಶಾಲೆ" ಎಂಬ ಹೆಸರಿನಲ್ಲಿ ಜಾಗದ ಮೇಲೆ ಬೋರ್ಡ್ ಅಳವಡಿಸಿ, ಜಾಗ ತಮ್ಮದಾಗಿದೆ ಎಂದು ಹೇಳಿಕೊಳ್ಳುತ್ತಿರುವುದು ಗಂಭೀರ ಅಕ್ರಮವಾಗಿದೆ ಎಂದು ಅವರು ಆರೋಪಿಸಿದರು.

ಈ ಸಂಬಂಧವಾಗಿ 10-04-2026ರಂದು ಕೆಐಡಿಬಿ ಅಭಿವೃದ್ಧಿ ಅಧಿಕಾರಿ ಹಾಗೂ ನೌಬಾದ ಗ್ರಾಮೀಣ ಪೊಲೀಸ್ ಠಾಣೆಗೆ ದೂರು ಸಲ್ಲಿಸಲಾಗಿದ್ದು, 12-04-2026ರಂದು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಿಗೂ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು. ತಮ್ಮ ಕುಟುಂಬದವರು ಕಷ್ಟಪಟ್ಟು ಸಂಪಾದಿಸಿ ಸರ್ಕಾರದ ನಿಯಮಾನುಸಾರ ಖರೀದಿಸಿದ ಜಾಗವನ್ನು ಕಬಳಿಸಲು ಯತ್ನಿಸುತ್ತಿರುವವರ ವಿರುದ್ಧ ತಕ್ಷಣ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಪುನರೂಚ್ಚರಿಸಿದರು. ಸುಬ್ಬಣ್ಣ ಕರಕನಳ್ಳಿ ಹಾಗೂ ವಿಜಯಕುಮಾರ ಭಾವಿಕಟ್ಟಿ ಪತ್ರಿಕಾಗೋಷ್ಠಿಯಲ್ಲಿದ್ದರು.



# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ಡಾ. ಬಿ,ಆರ್ ಅಂಬೇಡ್ಕರ್ ಅವರ ಆದರ್ಶ ಪ್ರತಿಯೊಬ್ಬರೂ ಪಾಲಿಸಲೇಬೇಕು

ಭಾರತದ ಸಂವಿಧಾನ ಶಿಲ್ಪಿ, ಮಹಾನ್ ಸಮಾಜ ಸುಧಾರಕ ಹಾಗೂ ಶೋಷಿತರ ಧ್ವನಿಯಾಗಿದ್ದ ಡಾ. ಬಿ.ಆರ್ ಅಂಬೇಡ್ಕರ್ ರವರು ಕೇವಲ ವ್ಯಕ್ತಿಯಲ್ಲ, ಒಂದು ಯುಗಪುರುಷರು. ಅವರು ತೋರಿಸಿದ ದಾರಿ ಸಮಾನತೆ, ಶಿಕ್ಷಣ, ಹಕ್ಕು ಹಾಗೂ ಸ್ವಾಭಿಮಾನಗಳ ದಾರಿಯಾಗಿದೆ. ಇಂದು ದೇಶದಲ್ಲಿ ಪ್ರತಿಯೊಬ್ಬರೂ ಅವರ ಹೆಸರನ್ನು ಗೌರವದಿಂದ ಉಲ್ಲೇಖಿಸುತ್ತಾರೆ, ಆದರೆ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವವರು ಮಾತ್ರ ಅತಿ ಕಡಿಮೆ ಎಂಬುದು ನೋವಿನ ಸಂಗತಿ.

ಅಂಬೇಡ್ಕರ್ ಅವರು ಶಿಕ್ಷಣವನ್ನು ಶಸ್ತ್ರವೆಂದು ಕಂಡರು. ಶಿಕ್ಷಣವೇ ಮಾನವನ ಬದುಕು ಬದಲಿಸುವ ಅಸ್ತ್ರ, ಶಿಕ್ಷಣವೇ ದೌರ್ಜನ್ಯಕ್ಕೆ ಉತ್ತರ, ಶಿಕ್ಷಣವೇ ಸ್ವಾಭಿಮಾನದ ಬುನಾದಿ ಎಂದು ಅವರು ನಂಬಿದ್ದರು. ಆದ್ದರಿಂದ ಯುವಜನತೆ ಶಿಕ್ಷಣದ ಕಡೆಗೆ ತೊಡಗಿಸಿಕೊಳ್ಳುವುದು, ಸಮಾಜದ ಪ್ರಗತಿಗೆ ಶ್ರಮಿಸುವುದು ಹಾಗೂ ಅನ್ಯಾಯದ ವಿರುದ್ಧ ಧ್ವನಿ ಎತ್ತುವುದು ಕಾಲದ ಅಗತ್ಯವಾಗಿದೆ. ಇಂದು ಸಮಾಜದಲ್ಲಿ ಇನ್ನೂ ಜಾತಿ ಆಧಾರಿತ ಭೇದಭಾವ, ಶೋಷಣೆ, ಅಸಮಾನತೆ ಹಾಗೂ ಅನ್ಯಾಯಗಳು ಜೀವಂತವಾಗಿರುವುದು ದುರಂತದ ಸಂಗತಿ. ಡಾ. ಅಂಬೇಡ್ಕರ್ ಕನಸುಗಂಡ ಸಮಾನತೆಯ ಸಮಾಜ ಇನ್ನೂ ಸಂಪೂರ್ಣ ಸಾಕಾರವಾಗಿಲ್ಲ. ಜಾತಿ, ಧರ್ಮ, ವರ್ಗದ ಹೆಸರಿನಲ್ಲಿ ಸಮಾಜವನ್ನು ವಿಭಜಿಸುವ ಮನೋಭಾವಗಳು ದೇಶದ ಏಕತೆಗೆ ದೊಡ್ಡ ಅಪಾಯವಾಗಿವೆ. ಇಂತಹ ಸಂದರ್ಭದಲ್ಲಿ ಅಂಬೇಡ್ಕರ್ ಅವರ ತತ್ವಗಳು ಕೇವಲ ಆಚರಣೆಗಷ್ಟೇ ಸೀಮಿತವಾಗದೇ, ಪ್ರತಿಯೊಬ್ಬರ ಬದುಕಿನ ನಡೆ-ನುಡಿಯಲ್ಲಿ ಕಾಣಿಸಬೇಕು.

ಸಂವಿಧಾನವು ಎಲ್ಲರಿಗೂ ಸಮಾನ ಹಕ್ಕು ನೀಡಿದರೂ, ಆ ಹಕ್ಕುಗಳ ನಿಜವಾದ ಅರ್ಥ ಅರಿತು ಅವನ್ನು ಕಾಪಾಡುವುದು ಜನರ ಜವಾಬ್ದಾರಿಯಾಗಿದೆ. ಅಂಬೇಡ್ಕರ್ ಅವರ ಆದರ್ಶಗಳನ್ನು ಪಾಲಿಸುವುದು ಎಂದರೆ ಕೇವಲ ಅವರ ಭಾವಚಿತ್ರಕ್ಕೆ ಹೂಹಾಕುವುದಲ್ಲ; ಬದಲಾಗಿ ಸಮಾನತೆ, ನ್ಯಾಯ, ಶಿಕ್ಷಣ ಹಾಗೂ ಮಾನವೀಯತೆಗಾಗಿ ಬದುಕುವುದು. ಹೀಗಾಗಿ ದೇಶದ ಪ್ರತಿಯೊಬ್ಬ ನಾಗರಿಕನು ಡಾ. ಅಂಬೇಡ್ಕರ್ ಅವರ ಆದರ್ಶಗಳನ್ನು ತನ್ನ ಜೀವನದ ಮೌಲ್ಯವನ್ನಾಗಿ ಮಾಡಿಕೊಂಡಾಗ ಮಾತ್ರ ನ್ಯಾಯಸಮ್ಮತ, ಸಮಾನತೆಯ ಹಾಗೂ ಅಭಿವೃದ್ಧಿಯ ಭಾರತ ನಿರ್ಮಾಣ ಸಾಧ್ಯ. ಇಲ್ಲವಾದರೆ ಅವರ ಜಯಂತಿ ಆಚರಣೆಗಳು ಕೇವಲ ಔಪಚಾರಿಕತೆಯಾಗಿ ಉಳಿದು ಹೋಗುತ್ತವೆ.

# ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಡೆಗೆ ತುರ್ತು ಕ್ರಮ : ಶಾಸಕ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬೇಸಿಗೆಯ ತೀವ್ರತೆಯಿಂದಾಗಿ ನಮ್ಮ ಜನರು ಎದುರಿಸುವ ಪ್ರಮುಖ ಸಮಸ್ಯೆ ಎಂದರೆ ಕುಡಿಯುವ ನೀರಿನ ಅಭಾವ. ಇದು ಕೇವಲ ಒಂದು ಸಮಸ್ಯೆಯಲ್ಲ, ಜನರ ದೈನಂದಿನ ಬದುಕಿಗೆ ಸಂಬಂಧಿಸಿದ ಅತ್ಯಂತ ಮುಖ್ಯ ವಿಷಯವಾಗಿದೆ. ಆದ್ದ-ರಿಂದ ಈ ವಿಷಯವನ್ನು ನಾವು ಅತ್ಯಂತ ಗಂಭೀರವಾಗಿ ತೆಗೆದುಕೊಳ್ಳಬೇಕಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರ ಅಧ್ಯಕ್ಷತೆಯಲ್ಲಿ ನಡೆದ ಟಾಸ್ಕ್ ಫೋರ್ಸ್ ಸಭೆಯಲ್ಲಿ ಮಾತನಾಡಿದರು.

ನೀರಿನ ಸಮಸ್ಯೆ ನಿವಾರಣೆಗೆ ಸ್ಪಷ್ಟವಾದ ಮಾರ್ಗಸೂಚಿಗಳನ್ನು ತಯಾರಿಸಿ ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ತಕ್ಷಣ ಟ್ಯಾಂಕರ್ ವ್ಯವಸ್ಥೆ, ಹಳೆಯ ಪೈಪ್‌ಲೈನ್ ದುರಸ್ತಿ, ಹಾಗೂ ಹೊಸ ಮೂಲಗಳನ್ನು ಗುರುತಿಸುವ ಕೆಲಸಗಳನ್ನು ಪೂರ್ಣಗೊಳಿಸಬೇಕು. ಬೇಸಿಗೆ ಹಿನ್ನೆಲೆಯಲ್ಲಿ ಉಂಟಾಗುತ್ತಿರುವ ಕುಡಿಯುವ ನೀರಿನ ಸಮಸ್ಯೆ, ಸಾರ್ವಜನಿಕರ ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ಅಭಿವೃದ್ಧಿ ಕಾರ್ಯಗಳ ಪ್ರಗತಿ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಅಭಾವವನ್ನು ನಿವಾರಿಸಲು ತುರ್ತು ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಶಾಸಕರು ಸ್ಪಷ್ಟ ಸೂಚನೆ ನೀಡಿದರು.

ಜನಸಾಮಾನ್ಯರಿಗೆ ಯಾವುದೇ ತೊಂದರೆ ಉಂಟಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ನೀರಿನ ಸರಬರಾಜು ವ್ಯವಸ್ಥೆಯನ್ನು ಸುಧಾರಿಸಲು ಹಾಗೂ ಸಮಸ್ಯೆಗಳು ತ್ವರಿತವಾಗಿ ಪರಿಹಾರವಾಗಲು ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ತುರ್ತು ಪೂರೈಕೆ ವ್ಯವಸ್ಥೆ ಜಾರಿಗೊಳಿಸಲು ಸೂಚನೆ ನೀಡಿದರು.

ಅಭಿವೃದ್ಧಿ ಕಾಮಗಾರಿಗಳ ವೇಗ ಪ್ರಗತಿಯಲ್ಲಿ ಇರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ನಿರ್ದೇಶನ ನೀಡಿದರು. ಗ್ರಾಮೀಣ ಪ್ರದೇಶಗಳಿಗೆ ಸಮಾನ ಗಮನ ಎಲ್ಲೆಡೆ ಸಮರ್ಪಕ ಸೌಲಭ್ಯ ಒದಗಿಸಲು ಒತ್ತು ನೀಡಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಜನರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಬೇಕು ಎಂದು ತಿಳಿಸಿದರು. ಕಾಮಗಾರಿಗಳ ಪ್ರಗತಿ, ಗುಣಮಟ್ಟ ಹಾಗೂ ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸುವ ಅಗತ್ಯತೆ ಕುರಿತು ವಿವರವಾದ ಮಾಹಿತಿ ಪಡೆದರು.

ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಕಾರ್ಯಕ್ಷಮತೆಯನ್ನು ಹೆಚ್ಚಿಸುವಂತೆ ಸೂಚಿಸಿ, ಜನರಿಗೆ ಯಾವುದೇ ತೊಂದರೆ ಆಗದಂತೆ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ತಹಶೀಲ್ದಾರ್ ರವಿಂದ್ರ ದಾಮಾ,

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಇಇ ರಾಜಕುಮಾರ ದಸಾರೆ, ತಾಪಂ ಸಹಾಯಕ ನಿರ್ದೇಶಕರಾದ ಸಂಜುಕುಮಾರ ಕಾಡವಾದ, ಸುಧೇಶ ಎಲ್ಲಾ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ

• ಮಲ್ಲಮ್ಮ ನುಡಿ ವಾರ್ತೆ , ಬೀದರ



ಜಿಲ್ಲೆಯಲ್ಲಿ ದಿನಾಂಕ: 14-04-2026 ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ ಮಾಡಲಾಗುತ್ತಿದ್ದು, ಸದರಿ ಜಯಂತಿ ಆಚರಣೆ ಕಾಲಕ್ಕೆ ಯಾವುದೇ ಅಹಿತಕರ ಘಟನೆ ನಡೆ-ಯದಂತೆ ಶಾಂತಿಯುತವಾಗಿ ಆಚರಿಸಲು ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ.21 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಬೀದರ ಜಿಲ್ಲೆಯಾದ್ಯಂತ ದಿನಾಂಕ: 13-04-2026ರ ಮಧ್ಯರಾತ್ರಿ 12 ರಿಂದ ದಿನಾಂಕ: 15-04-2026ರ ಬೆಳಿಗ್ಗೆ 6 ಗಂಟೆಯವರೆಗೆ ಎಲ್ಲಾ ವಿಧದ ಮದ್ಯದಂಗಡಿಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶಿಸಿದ್ದಾರೆ.

# ಮಹಾಪುರುಷರ ಜಯಂತಿಯಲ್ಲಿ ಶಾಂತತೆ ಕಾಪಾಡಲು ಮನವಿ



ಭಾಲ್ಕಿ: ಪಟ್ಟಣದ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಡಾ।ಬಿ.ಆರ್.ಅಂಬೇಡ್ಕರ್ ಹಾಗು ಮಹಾತ್ಮಾ ಬಸವೇಶ್ವರ ಜಯಂತಿ ನಿಮಿತ್ಯ ಕರೆದ ಶಾಂತಿ ಸಭೆಯಲ್ಲಿ ಸಿಪಿಐ ಹನುಮರೆಡ್ಡೆಪ್ಪ ಮಾತನಾಡಿದರು.

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಡಾ।ಬಿ.ಆರ್.ಅಂಬೇಡ್ಕರ್ ಮತ್ತು ಮಹಾತ್ಮಾ ಬಸವೇಶ್ವರರ ಜಯಂತಿ ಮಹೋತ್ಸವದಲ್ಲಿ ಸಾರಾಯಿ ನಿಷೇಧ ಮಾಡಿ, ಶಾಂತತೆ ಕಾಪಾಡಿಕೊಳ್ಳುವಂತೆ ಗ್ರಾಮೀಣ ಪೊಲೀಸ್ ವೃತ್ತದ ಸಿಪಿಐ ಹನುಮರೆಡ್ಡೆಪ್ಪ ತಿಳಿಸಿದರು.

ಪಟ್ಟಣದ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಡಾ।ಬಿ.ಆರ್.ಅಂಬೇಡ್ಕರ್ ಜಯಂತಿ ಮತ್ತು ಕರ್ನಾಟಕ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿ ಮಹೋತ್ಸವ ನಿಮಿತ್ಯ ಅಬಕಾರಿ ಇಲಾಖೆಯ ಸಹಯೋಗದೊಂದಿಗೆ ಸೋಮವಾರ ಕರೆದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು. ಮಹಾಪುರುಷರ ಜಯಂತಿ ಮಹೋತ್ಸವಗಳಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ವೈನ್‌ಶಾಪ್ ಹಾಗು ಎಲ್ಲಾ ತರಹದ ಹೊಟೆಲ್ ಮಾಲಿಕರ ಶಾಂತಿಸಭೆ ಕರೆಯಲಾಗಿದೆ. ತಾಲೂಕಿನ ವೈನ್‌ಶಾಪ್, ಧಾಬಾ ಮತ್ತು ಹೊಟಲ್ ಮಾಲಿಕರು ಮಹಾಪುರುಷರ ಜಯಂತಿ ಮುಗಿಯುವವರೆಗೆ ಪ್ರತಿನಿತ್ಯ ರಾತ್ರಿ 10 ಗಂಟೆಯವರೆಗೆ ಮಾತ್ರ ತಮ್ಮ ವೈನ್‌ಶಾಪ್, ಹೋಟೆಲ್ ಮುಂಗಟ್ಟುಗಳನ್ನು ತೆರೆದಿಡಬೇಕು. ರಾತ್ರಿ 10 ಗಂಟೆಯ ನಂತರ ಕಡ್ಡಾಯವಾಗಿ ತಮ್ಮ ಅಂಗಡಿ ಮತ್ತು ಹೊಟೆಲುಗಳಿಗೆ ಬಾಗಿಲು ಹಾಕಬೇಕು. ಧಾಬಾಗಳಲ್ಲಿ ಯಾರೂ ಸರಾಯಿ ಕುಡಿಯಲು ಆಸ್ಪದ ನೀಡಬಾರದು. ಎಲ್ಲಾ ಹೊಟಲ್‌ಗಳಲ್ಲಿಯೂ ಸಿಸಿಟಿವಿ ಅಳವಡಿಸಬೇಕು. ಮಹಾಪುರುಷರ ಜಯಂತಿ ಮುಗಿಯುವವರೆಗೆ ಸರಾಯಿ ನಷೇಧಿಸಲಾಗಿದೆ. ಹೊಟೆಲ್ ಮಾಲಿಕರು ಸರಾಯಿ ಕುಡಿಯಲು ಆಸ್ಪದ ಕೊಟ್ಟರೆ ಅವರ ಮೇಲೆ ಕ್ರಿಮಿನಲ್ ಮೊಕ್ಕದ್ದಮ್ಮೆ ಹೂಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಒಟ್ಟಿನಲ್ಲಿ ಮಹಾಪುರಷರ ಜಯಂತಿ ಸಮಯದಲ್ಲಿ ಯಾವುದೇ ತರಹದ ಅಹಿತಕರ ಘನಟೆ ನಡೆಯದಂತೆ ಶಾಂತತೆ ಕಾಪಾಡಿಕೊಂಡು ಹೋಗಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಠಾಣೆಯ ಪಿಎಸ್‌ಐ ಅಶೋಕ ಪಾಟೀಲ, ಮೆಹಕರ ಪೊಲೀಸ್ ಠಾಣೆಯ ಪಿಎಸ್‌ಐ ಸುದರ್ಶನ ರೆಡ್ಡಿ, ಖಟಕಚಿಂಚೋಳಿ ಠಾಣೆಯ ಪಿಎಸ್‌ಐ ಪ್ರಭಾಕರ ಪಾಟೀಲ, ಧನ್ನೂರ ಠಾಣೆಯ ಪಿಎಸ್‌ಐ ರಾಜಕುಮಾರ ಜಾಮಗೊಂಡ ಉಪಸ್ಥಿತರಿದ್ದರು.

# ಗ್ರಾಮ ದೇವತೆಯ ಭವ್ಯ ಮೆರವಣಿಗೆ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ತಾಲೂಕಿನ ಕೊಟಗ್ಯಾಳ ಗ್ರಾಮದಲ್ಲಿ ಈಚೆಗೆ ನಡೆದ ಮಹಾದೇವ ಜಾತ್ರಾಮಹಾದೇವಜಾತ್ರಾಮಹೋತ್ಸವ, ಕಳಸಾರೋಹಣ ಮತ್ತು ಗ್ರಾಮ ದೇವತೆ ಮೆರವಣಿಗೆ ನಡೆಯಿತು.

ಜಾತ್ರಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತವೃಂದ ಬರಿಗಾಲಿನಲ್ಲಿ ನೆತ್ತಿ ಸುಡುವ ಬಿಸಿಲನ್ನು ಲೆಕ್ಕಿಸದೇ ಪರಸ್ಪರ ಭಂಡಾರ ಎರಚುತ್ತ ಗ್ರಾಮ ದೇವರಿಗೆ ಜೈಕಾರ ಹಾಕುತ್ತ ಬಸವೇಶ್ವರ ಮಂಟಪದವರೆಗೂ ಮೆರವಣಿಗೆ ನಡೆಸಿದರು. ಬೆಳಿಗ್ಗೆ ಸಕಲ ಸದ್ಭಕ್ತರು ಉಪಸ್ಥಿತಿಯಲ್ಲಿ ರಸ್ತೆ ಉದ್ದಕ್ಕೂ ಮೆರವಣಿಗೆಯಲ್ಲಿ ಪಾಲ್ಗೊಂಡು ಭಕ್ತಿಗೆ ಸಾಕ್ಷಿಯಾದರು. ಬೆಳಿಗ್ಗೆಯಿಂದ ಸಚಿಜೆಯವರೆಗೂ ಮಹಾಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು. ನಂತರ ನಡೆದ ಧಾರ್ಮಿಕ ಅರಿವು ಕಾರ್ಯಕ್ರಮದಲ್ಲಿ ಹಲಬುರ್ಗಾ ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯರು ಆರ್ಶೀವಚನ ಕಾರ್ಯಕ್ರಮ ನಡೆಯಿತು. ಗ್ರಾಮದ ಸದ್ಭಕ್ತರು, ಸೇರಿದಂತೆ ವಿವಿಧ ಗ್ರಾಮದಿಂದ ಆಗಮಿಸಿದ ಭಕ್ತರು ಪಾಲ್ಗೊಂಡು ದರ್ಶನ ಪಡೆದರು.



ಭಾಲ್ಕಿ :ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ ನಡೆದ ಉಚಿತ ಆರೋಗ್ಯ ಶಿಬಿರದಲ್ಲಿ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ಮಾತನಾಡಿದರು. ಜಗದ್ಗುರು ಗುರುಬಸವ ಸ್ವಾಮೀಜಿ, ಮಹಾದೇವ ಬೇಲೂರೆ, ಶ್ರೀಕಾಂತ ಭೋರಾಳೆ, ಡಾ.ಅನಿಲ ಹನಪಟ್ಟೆ, ಡಾ.ಸುನಿಲ ಹನಪಟ್ಟೆ ಸೇರಿದಂತೆ ಹಲವರು ಇದ್ದರು.

# ಕುಡಿಯುವ ನೀರಿನ ನಿರ್ವಹಣೆಗೆ ಅಧಿಕಾರಿ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಬೇಸಿಗೆ ಮುಗಿಯುವವರೆಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನಿಗಾ ವಹಿಸಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ್ ಸುಲ್ಫಿ ಸೂಚಿಸಿದರು.

ಇಲ್ಲಿನ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಗ್ರಾಮ ಪಂಚಾಯತ್ ನಿರುಗಂಟಿ ಸಿಬ್ಬಂದಿಯೊಂದಿಗೆ ಕುಡಿಯುವ ನೀರಿನ ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಆಯಾ ವಾ[illegible]9ಗಳಿಗೆ ನೀರು ಸಮಯಕ್ಕೆ ಸರಿಯಾಗಿ ಬಿಡುವುದು ಹಾಗೂ ಮೋಟಾರ್‌ಗಳನ್ನು ಸಮಯಕ್ಕೆ ಬಂದ್ ಮಾಡುವ ಮೂಲಕ ಯಾವುದೇ ದೂರು ಬರದಂತೆ ಜವಬ್ದಾರಿ ಯಿಂದ ಕಾರ್ಯ ನಿರ್ವಹಿಸಬೇಕು ಎಂದರು. ಕುಡಿಯುವ ನೀರಿನ ವಿಚಾರದಲ್ಲಿ ಸಿಬ್ಬಂದಿಗಳು ಹೆಚ್ಚಿನ ಕಾಳಜಿ ವಹಿಸಬೇಕು ಮತ್ತು ವಾರದಲ್ಲಿ ಕನಿಷ್ಠ ಒಂದು ಬಾರಿ ಆದರು ನೀರಿನ ಟ್ಯಾಂಕ್‌ರ್ ಸ್ವಚ್ಛಗೊಳಿಸಬೇಕು ಮತ್ತು ನೀರಿನ ಪೈಪ್‌ಗಳು ಹಾಳಾದಲ್ಲಿ ತಕ್ಷಣ ಜಿಪಿಎಸ್ ಫೋಟೋ ತೆಗೆದು ಸಂಬಂಧಿತ ಅಧಿಕಾರಿಗಳಿಗೆ ಕಳುಹಿಸಬೇಕು ಹಾಗೂ ಜೊತೆಗೆ ಕೊಳವೆ ಬಾವಿ ಮತ್ತು ಬಾವಿಗಳ ಸುತ್ತ ಮುತ್ತ ಸ್ವಚ್ಛತೆ ಕಾಪಾಡಬೇಕು ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಎಇಇ ಶಿವರಾಜ ಪಲ್ಲೇರಿ ಮಾತನಾಡಿ, ಕೊಳವೆ ಬಾವಿ ಮತ್ತು ಬಾವಿಗಳಿಗೆ ಹೊಲಸು ನೀರು ನುಗ್ಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಸಮಸ್ಯೆ ಕಂಡುಬಂದಲ್ಲಿ ಗ್ರಾಮದಲ್ಲಿನ ಖಾಸಗಿ ಬಾವಿ ಹಾಗೂ ಕೊಳವೆ ಬಾವಿಗಳನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳಬೇಕು. ಇದಕ್ಕಾಗಿ ಸರ್ಕಾರದಿಂದ ಅನುದಾನ ಲಭ್ಯವಿದೆ ಎಂದು ಹೇಳಿದರು. ನಂತರ ನಿರುಗುಂಟಿ ಸಿಬ್ಬಂದಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿನ ನೀರಿನ ಸಮಸ್ಯೆ ಕುರಿತು ಅಧಿಕಾರಿಗಳ ಗಮನಕ್ಕೆ ತಂದರು. ಸಭೆಯಲ್ಲಿ ವಿಷಯ ನಿರ್ವಾಹಕ ಮಲ್ಲಿಕಾರ್ಜುನ ಹಾಗೂ ಐಇಸಿ ಸಂಯೋಜಕ ವೀರಾರೆಡ್ಡಿ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿ ಇದ್ದರು.

# ಶಾಲಾ ಶಿಕ್ಷಕರ ಸಂಘ ಚುನಾವಣೆಗೆ ನಾಮಪತ್ರ ಸಲ್ಲಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಚಿಟಗುಪ್ಪ ತಾಲೂಕ ಕಾರ್ಯಕಾರಣಿ ಮಂಡಳಿಯ ಚುನಾವಣೆಗೆ ನಾಮಪತ್ರ ಸಲ್ಲಿಸಲು ಏಪ್ರಿಲ್ 12 ಸಾಯಂಕಾಲ 6ಘಂಟೆ ವರೆಗೆ ಸಲ್ಲಿಸಲು ಅವಕಾಶವಿತ್ತು. ಸಾಮಾನ್ಯ ವರ್ಗದಲ್ಲಿ 11ಜನ ಮಹಿಳಾ ಮಿಸಲಾತಿಯಲ್ಲಿ 6ಜನ ಒಟ್ಟು 17ಜನ ನಾಮಪತ್ರ ಸಲ್ಲಿಸಿದ್ದಾರೆ. ಏಪ್ರಿಲ್ 13ರಂದು ನಾಮಪತ್ರ ಪರಿಶೀಲನೆಯಲ್ಲಿ ಸತ್ಯನಾರಾಯಣ ಎಸ್, ಗಣಪತಿ, ಪಂಡಿತ, ವೀರಪ್ಪ, ಖಯಮೋದ್ದಿನ, ಮಹೇಶ್, ತಸ್ಲೀಮ್ ಬೇಗಂ, ಅಫ್ಸರ್ ಬೇಗಂ ಇವರುಗಳು ಸೂಕ್ತ ದಾಖಲೆಗಳು ಲಗತ್ತಿಸಿರುವುದಿಲ್ಲ ಎಂದು ಪರಿಶೀಲಿಸಿ ಇವರ ನಾಮಪತ್ರ ತಿರಸ್ಕರಿಸಲಾಗಿದೆ. ರಾಜಪ್ಪ, ರಮೇಶ ಕ್ಯಾತಾ, ವೈಜಿನಾಥ ನಾಶಿ, ಸಂಪತಿ, ಎಂ.ಡಿ. ಅಖೀಲ, ಪರಿಮಳ ರೆಡ್ಡಿ, ಲೂಸಿ ಗ್ರೇಸ್, ಮಾಯಾ ಇವರುಗಳು ಸೂಕ್ತ ದಾಖಲೆಗಳು ಲಗತ್ತಿಸಿರುತ್ತಾರೆ ಎಂದು ಪರಿಶೀಲಿಸಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ರತ್ನಪ್ಪ ನೆಲವಾಳಕರ್ ತಿಳಿಸಿದ್ದಾರೆ. ಸಹಾಯಕ ಚುನಾವಣಾಧಿಕಾರಿ ರಾಜಕುಮಾರ್ ಇದ್ದರು.

# ಕುಡಿಯುವ ನೀರಿನ ಸಮಸ್ಯೆ ಸಹಾಯವಾಣಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ , ರಾಯಚೂರು

ಪ್ರಸ್ತುತ ಬೇಸಿಗೆ ಕಾಲ ಇರುವ ಪ್ರಯುಕ್ತ ರಾಯಚೂರು ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ರಾಯಚೂರಿನ ತಾಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ ಎಂದು ಕೋರಲಾಗಿದೆ. ತಾಲೂಕು ಪಂಚಾಯತ್ ಕಚೇರಿಯ ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸೂಗೂರಪ್ಪ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಬಸಯ್ಯ ದೂರವಾಣಿ ಸಂಖ್ಯೆ: 08532-230023, 9483203052, ಮಧ್ಯಾಹ್ನ 2ರಿಂದ ಸಂಜೆ 5ರವರೆಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಚಾಂದಪಾಷ್ 8861979448ಗೆ ಸಂಪರ್ಕ ಮಾಡಬಹುದಾಗಿದೆ.

## ಬಸವನ ನಾಡು, ಸೂಫಿ ಸಂತರ ಬೀಡು

# 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಯಶಸ್ವಿ: ತಗಡೂರು

• ಮಲ್ಲಮ್ಮ ನುಡಿ ವಾರ್ತೆ, ಬೆಂಗಳೂರು




ಬೀದರನಲ್ಲಿ ಎರಡು ದಿನಗಳ ಕಾಲ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನ ಅರ್ಥಪೂರ್ಣವಾಗಿ ಮತ್ತು ಯಶಸ್ವಿಯಾಗಿ ನಡೆಯಲು ಕಾರಣರಾದ ಎಲ್ಲರಿಗೂ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ(ಕೆಯುಡಬ್ಲೂಣಟಿಜಜಜಿ )ಟಿಜಜಜೆ) ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಧನ್ಯವಾದಗಳನ್ನು ಸಲ್ಲಿಸಿದ್ದಾರೆ.

40ನೇ ಸಮ್ಮೇಳನ ಎಲ್ಲಕ್ಕಿಂತ ಭಿನ್ನವಾಗಿತ್ತು.ಗಾಂಧಿ ಮತ್ತು ಅಂಬೇಡ್ಕರ್ ಅವರು, ಪತ್ರಕರ್ತರಾಗಿ ಸಲ್ಲಿಸಿದ ಸೇವೆ ಬಗ್ಗೆ ಗೋಷ್ಠಿ ಆಯೋಜಿಸಿದ್ದು, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ ವಿಷಯ ಬಗ್ಗೆ ಚರ್ಚೆ ನಡೆದಿದ್ದು ಸಮ್ಮೇಳನವನ್ನು ಅರ್ಥಪೂರ್ಣಗಿಸಿತು. ಆರ್ಟಿಫಿಷಿಯಲ್ ಇಂಟಲಜೆನ್ಸಿ ಮತ್ತು ಡಿಜಿಟಲೀಕರಣ ಪ್ರಭಾವ ಬಗೆಗಿನ ಗೋಷ್ಠಿ ಸುದ್ದಿ ಮನೆಯಲ್ಲಿನ ಎಲ್ಲರಿಗೂ ಹೊಸ ಆಯಾಮಗಳ ಸಾಧ್ಯತೆಯನ್ನು ಉಣಬಡಿಸಿತು ಎಂದಿದ್ದಾರೆ. ಮಾಹಿತಿ ಹಕ್ಕು ಆಯೋಗ ಮತ್ತು ಪತ್ರಕರ್ತರು ಎಂಬ ವಿಷಯದ ಗೋಷ್ಠಿ ಪ್ರಸ್ತುತವಾಗಿತ್ತು. ಗಡಿ ಭಾಗದ ಸಮಸ್ಯೆ ಬಗ್ಗೆ ನಡೆದ ಉಪನ್ಯಾಸ, ಮಾಧ್ಯಮ ಮತ್ತು ಉದ್ಯಮ ಬಗ್ಗೆ ನಡೆದ ಚರ್ಚೆ ಎಲ್ಲವೂ ಸಮ್ಮೇಳನಕ್ಕೆ ಹೊಸ ಮೆರಗನ್ನು ನೀಡಿತು ಎಂದು ಹೇಳಿದ್ದಾರೆ.

ಚಾಮರಾಜನಗರದಿಂದ ಹಿಡಿದು, ಕಲಬುರ್ಗಿ, ಬಿಜಾಪುರದ ತನಕ ಎಲ್ಲಾ ಜಿಲ್ಲೆಯ ಪತ್ರಕರ್ತರು ಭಾಗವಹಿಸಿದ ಸಂಭ್ರಮ ಮತ್ತು ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದ ಕ್ಷಣ ಮರೆಯಲಾಗದು ಎಂದಿದ್ದಾರೆ.

ಸಿಎಂ, ಕೆವಿಪಿಗೂ ಧನ್ಯವಾದ:

ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟನೆ ಮಾಡಿಕೊಡುವ ಮೂಲಕ ಮಾಧ್ಯಮ ಸ್ನೇಯಿ ಸಿಎಂ ಎನ್ನುವುದನ್ನು ಮತ್ತೊಮ್ಮೆ ನಿರೂಪಿಸಿದರು. ಸಂಘಟನೆ ಮತ್ತು ಸರ್ಕಾರದ ನಡುವೆ ಕೊಂಡಿಯಾಗಿ ಕೆಲಸ ಮಾಡಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ನೀಡಿದ ಸಹಕಾರ ಅನನ್ಯವಾದದ್ದು ಎಂದು ತಗಡೂರು ಸ್ಮರಿಸಿದ್ದಾರೆ.

ಸ್ವಾಗತ ಸಮಿತಿಗೆ ಥ್ಯಾಂಕ್ಸ್:

ರಾಜ್ಯ ಮಟ್ಟದ ಸಮ್ಮೇಳನ ಸಂಘಟಿಸುವುದು ಕಷ್ಟದ ಮತ್ತು ಸವಾಲಿನ ಕೆಲಸ. ಕಡಿಮೆ ಅವಧಿಯಲ್ಲಿ ಈ ಸವಾಲನ್ನು ಸಾಧ್ಯವಾಗಿಸಿದ, ಬೀದರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ, ಮುಖ್ಯವಾಗಿ ಸ್ವಾಗತ ಸಮಿತಿ ಅಧ್ಯಕ್ಷರು ಮತ್ತು ಸಚಿವರಾದ

ಈಶ್ವರ ಖಂಡ್ರೆ ಅವರು, ಈ ನಿಟ್ಟಿನಲ್ಲಿ ಶ್ರಮಿಸಿದ ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಅವರ ನೇತೃತ್ವದ ತಂಡಕ್ಕೆ ಧನ್ಯವಾದ ತಿಳಿಸಿದ್ದಾರೆ.

ಬೀದರ ನೆಲದ ಹಬ್ಬ:

ಪತ್ರಕರ್ತರ ಸಮ್ಮೇಳನವನ್ನ ಬೀದರ ನೆಲದ ಹಬ್ಬವಾಗಿಸಿದ, ಊಟದಿಂದ ಹಿಡಿದು ಎಲ್ಲ ರೀತಿಯ ಆತಿಥ್ಯ ನೀಡಿದ ಬೀದರ ಜಿಲ್ಲಾ ಘಟಕಕ್ಕೆ, ಜಿಲ್ಲೆಯ ಸಮಸ್ತರಿಗೆ, ಉಪಸಮಿತಿಗಳ ಜವಾಬ್ದಾರಿ ಹೊತ್ತು ಕೆಲಸ ಮಾಡಿದ ತಂಡಗಳಿಗೆ, ಜಿಲ್ಲಾಡಳಿತಕ್ಕೆ ವಂದನೆಗಳನ್ನು ಸಲ್ಲಿಸಿದ್ದಾರೆ.

ಕಳೆಗಟ್ಟಿದ ಸಮ್ಮೇಳನ:

ಬಸವನ ನಾಡಿನಲ್ಲಿ ಈ ಸಮ್ಮೇಳನ ವಿಭಿನ್ನವಾಗಿ ಆಯೋಜಿಸಲು ಮತ್ತು ಅರ್ಥಪೂರ್ಣವಾಗಿಸಲು ನಿರಂತರವಾಗಿ ನಮ್ಮ ಜೊತೆಯಲ್ಲಿ ಸದಾ ಸಾಥ್ ನೀಡಿದ ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಘಟಕಗಳು ಮತ್ತು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದಗಳನ್ನು ಸಲ್ಲಿಸಿದ್ದಾರೆ. ಸಮ್ಮೇಳನ ಕಳೆಗಟ್ಟಲು ಸದಸ್ಯರೆಲ್ಲರೂ ಮುಖ್ಯ. ಈ ಸಮ್ಮೇಳನ ಸಲುವಾಗಿ ನಮ್ಮ ಪ್ರೀತಿಯ ಕರೆಗೆ ವಿಶ್ವಾಸವಿಟ್ಟು ಬೀದರಗೆ ಬಂದವರಿಗೆ ಯಾವುದಾದರೂ ಕಾರಣಕ್ಕಾಗಿ ಬೇಸರವಾಗಿದ್ದರೆ ಕ್ಷಮೆ ಇರಲಿ. ಸವಿನೆನಪುಗಳು ಮಾತ್ರವೇ ನಿಮ್ಮ ಹೃದಯದಲ್ಲಿರಲಿ ಎಂದು ತಗಡೂರು ತಿಳಿಸಿದ್ದಾರೆ

# ಬೀದಿ ಬದಿ ವ್ಯಾಪಾರಿಗಳು ಗುರುತಿನ ಚೀಟಿ ಪಡೆಯಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಡೇ-ನಲ್ಮ್ ಯೋಜನೆಯಡಿ ಕಲಬುರಗಿ ನಗರದಲ್ಲಿ ಬೀದಿ ಬದಿ ವ್ಯಾಪಾರಿಗಳೆಂದು ಹೆಸರು ನೊಂದಾಯಿಸಿಕೊಂಡು ವ್ಯಾಪಾರ ಮಾಡುತ್ತಿರುವ ಬೀದಿ ವ್ಯಾಪಾರಿಗಳಿಗೆ ಈಗಾಗಲೇ ತಾತ್ಕಾಲಿಕವಾಗಿ ಪ್ರಮಾಣಪತ್ರ ಮತ್ತು ಗುರುತಿನ ಚೀಟಿಯನ್ನು ನೀಡಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಈ ಬೀದಿ ಬದಿ ವ್ಯಾಪಾರಿಗಳಿಗೆ ಡಿಜಿಟಲ್ ಜಿಯೋ ಟ್ಯಾಗ್ ಹೊಂದಿದ ಪ್ರಮಾಣ ಪತ್ರ ಮತ್ತು ಗುರುತಿನ ಚೀಟಿ ಪಡೆಯಲು ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಿಂದ ಸುಮಾರು ಬಾರಿ ಫೋನ್ ಮುಖಾಂತರ ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸಿ ತಿಳಿಸಿದ್ದರೂ ಸಹ ಇನ್ನೂ ಕೆಲವು ಜನ ಬೀದಿ ವ್ಯಾಪಾರಿಗಳು ತೆಗೆದುಕೊಂಡು ಹೋಗಿರುವುದಿಲ್ಲ.

ನಿಗದಿತ ಸ್ಥಳಗಳಲ್ಲಿ ವ್ಯಾಪಾರ ಮಾಡಲು ನಿಯಮಾನುಸಾರ ತೊಂದರೆಯನ್ನು ತಪ್ಪಿಸಲು ಸಂಬಂಧಪಟ್ಟ ಬೀದಿ ವ್ಯಾಪಾರಿಗಳು ಡೇ-ನಲ್ಮ್ ಶಾಖೆಯ ಕೋಣೆ ಸಂಖ್ಯೆ:47ರಲ್ಲಿ ಸಂಪರ್ಕಿಸಿ, ಡೇ-ನಲ್ಮ್ ಸಿಬ್ಬಂದಿಗಳು/ಸಮುದಾಯ ಸಂಪನ್ಮೂಲ ವ್ಯಕ್ತಿಗಳಲ್ಲಿ ನಿಗದಿತ ಶುಲ್ಕ ಭರಿಸಿ ತಮ್ಮ ಗುರುತಿನ ಚೀಟಿ ಮತ್ತು ಪ್ರಮಾಣ ಪತ್ರವನ್ನು ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಏ, 14ಕ್ಕೆ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ

# ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಕಲಬುರಗಿ ಗುಲಬರ್ಗಾ ವಿಶ್ವವಿದ್ಯಾಲಯ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಏಪ್ರಿಲ್ 14 ರಂದು ಮಂಗಳವಾರ ಬೆಳಿಗ್ಗೆ 10.30 ಗಂಟೆಗೆ ಗುಲಬರ್ಗಾ ವಿಶ್ವವಿದ್ಯಾಲಯದ ಕಾರ್ಯಸೌಧದಲ್ಲಿನ ಮಹಾತ್ಮಗಾಂಧಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಬೆಂಗಳೂರಿನ ಮುಕ್ತಿ ಒಕ್ಕೂಟದ ಸಂಚಾಲಕರು, ಗ್ಲೋಬಲ್ ಕನ್ಸರ್ನ್ಸ್ ಇಂಡಿಯಾ ಸಂಸ್ಥಾಪಕರು ಹಾಗೂ ಖ್ಯಾತ ಸಮಾಜ ಚಿಂತಕರಾದ ಬೃಂದಾ ಅಡಿಗೆ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ. ಶ್ರೀದೇವಿ ಕಟ್ಟಿಮನಿ ಹಾಗೂ ವಿದ್ಯಾವಿಷಯಕ ಪರಿಷತ್ ಸದಸ್ಯರಾದ ಪ್ರತಿಮಾ ಮಠದ್ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಗುಲಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಕುಲಸಚಿವ ಡಾ. ನಿಂಗಣ್ಣ ಕಣ್ಣೂರ ಹಾಗೂ ಹಣಕಾಸು ಅಧಿಕಾರಿ ಜಯಾಂಬಿಕ ಅವರು ಗೌರವ ಉಪಸ್ಥಿತಿವಹಿಸುವರು.

## ಶರಣಬಸವೇಶ್ವರ ಪುರಾಣ ಕಾರ್ಯಕ್ರಮ

# ಜೋಡೆತ್ತುಗಳಿಗೆ ಶೃಂಗಾರ ಮಾಡಿ ಬಿತ್ತನೆ ಕಾರ್ಯ



ಕ್ಯಾದಿಗೆಹಾಳ್ ಗ್ರಾಮದಲ್ಲಿ ರವಿವಾರ ಸಂಜೆ ಶರಣಬಸವೇಶ್ವರ ಪುರಾಣ ಕಾರ್ಯಕ್ರಮದಲ್ಲಿ ಜೋಡೆತ್ತುಗಳೊಂದಿಗೆ ಬಿತ್ತನೆ ಕಾರ್ಯಕ್ರಮ ನೆರವೇರಿತು.

• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು


ಸಮೀಪದ ಕ್ಯಾದಿಗೆಹಾಳ್ ಗ್ರಾಮದಲ್ಲಿ ಶ್ರೀ ಈಶ್ವರ ದೇವಸ್ಥಾನ ಸೇವಾ ಸಮಿತಿ ವತಿಯಿಂದ ಈಶ್ವರ ದೇವಸ್ಥಾನದ ಆವರಣದಲ್ಲಿ ಶರಣಬಸವೇಶ್ವರ ಪುರಾಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಪುರಾಣದ ಸನ್ನಿವೇಶದ ಅಂಗವಾಗಿ, ರಂಟೆ, ಕುಂಟೆಯನ್ನು ಶೃಂಗಾರ ಮಾಡಿದ ಜೋಡೆತ್ತುಗಳಿಗೆ ಕಟ್ಟಿ, ನಾಡಿನ ರೈತ ಪರಂಪರೆಯ ಪ್ರತೀಕವಾದ ಸಾಂಪ್ರದಾಯಿಕ ಪದ್ಧತಿಯಾದ ಬಿತ್ತನೆ ಕಾರ್ಯವನ್ನು ಸಾಂಕೇತಿಕವಾಗಿ ನೆರವೇರಿಸಿದರು.

ಬಿತ್ತನೆ ಕಾರ್ಯದ ನೇತೃತ್ವ ವಹಿಸಿ ಮಾತನಾಡಿದ ಗಂಗಾಧರ ತಾತನವರು, ಭಾರತ ದೇಶವು ಕೃಷಿ ಪ್ರಧಾನ ದೇಶವಾಗಿದ್ದು ನಮ್ಮ ಸಾಂಪ್ರದಾಯಿಕ ಕೃಷಿ ಪದ್ಧತಿಯಲ್ಲಿ ವೈಜ್ಞಾನಿಕತೆಯ ಜೊತೆಗೆ ಆಹಾರದ ಶ್ರೇಷ್ಠ ಗುಣಮಟ್ಟ ಕಾಯ್ದುಕೊಳ್ಳುವ ವ್ಯವಸ್ಥೆ ಸಮರ್ಪಕವಾಗಿದೆ. ಇಂದಿನ ಆಧುನಿಕ ದಿನಮಾನಗಳಲ್ಲಿ ವ್ಯವಸಾಯ ಪದ್ದತಿ ಯಾಂತ್ರಿಕ ಕಾರಣವಾಗಿದ್ದು ಇದರ ಮಧ್ಯೆ ಸಂಸ್ಕೃತಿ ಸಂಪ್ರದಾಯವನ್ನು ಮುಂದಿನ ಪೀಳಿಗೆಗೆ ಇಂತಹ ಕಾರ್ಯಕ್ರಮಗಳ ಮೂಲಕ ಕೊಂಡೊಯ್ಯಬಹುದಾಗಿದೆ' ಎಂದರು.

ಶರಣಬಸವೇಶ್ವರರ ಪ್ರತಿಯೊಂದು ಪವಾಡವು ಜೀವನದಲ್ಲಿ ಎದುರಾಗುವ ಸಮಸ್ಯೆಗಳಿಗೆ ಪರಿಹಾರವಾಗಿದೆ. ಅವರ ಆದರ್ಶಮಯ ಜೀವನ ಎಲ್ಲರೂ ಅರಿಯಬೇಕು. ಕೃಷಿಗೆ ಶರಣಬಸವೇಶ್ವರರು ನೀಡಿದ ಆದ್ಯತೆ ನಾವು ಎಲ್ಲಿಯೂ ಕಾಣಲಾರೆವು. ನಾವುಗಳು ಸದ್ಗತಿ ಹೊಂದಲು ಶರಣರ ಜೀವನ ಚರಿತ್ರೆ ಕೇಳಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಪುರಾಣ ಪ್ರವಚನಕಾರರಾದ ಶರಣಯ್ಯಶಾಸ್ತ್ರೀ ಹಿರೇಮಠ, ಗವಾಯಿಗಳಾದ ಯಶವಂತ ಕುಮಾರ್, ತಬಲವಾದಕ ಶಂಕ್ರಯ್ಯಸ್ವಾಮಿ ಹಿರೇಮಠ, ಗ್ರಾಮದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಭಾಗವಹಿಸಿದ್ದರು, ನಂತರ ಅನ್ನ ದಾಸೋಹ ನಡೆಯಿತು.

# ಸಂಗೀತ ಪಾಟೀಲ್ ಸಾಧನೆ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಬೇಕು



• ಮಲ್ಲಮ್ಮ ನುಡಿ ವಾರ್ತೆ, ಕುಕನೂರ

ತಾಲೂಕಿನ ಮಂಗಳೂರು ಗ್ರಾಮದ ಗ್ರಾಮೀಣ ಪ್ರತಿಭೆ ಸಂಗೀತ ಶೇಖರಗೌಡ ಪಾಟೀಲ್ ಕೃಷಿಕ ಕುಟುಂಬದಲ್ಲಿ ಜನಿಸಿ ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆ ಶಿಖರ ಏರಿದ್ದಾಳೆ ,ವಿಜಯನಗರ ಜಿಲ್ಲೆಯ ಕೊಟ್ಟೂರಿನ ಹಿಂದೂ ಪಿಯುಸಿ ಕಾಲೇಜಿನಲ್ಲಿ 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ಸಾಧನೆಮಾಡಿ ಗ್ರಾಮಕ್ಕೆ ಹಾಗು ಪಾಲಕ ಕುಟುಂಬದವರಿಗೆ ಹಾಗು ಶಾಲಾ ಕಾಲೇಜಿನ ಗುರುಗಳಿಗೆ ಮತ್ತು ಜಿಲ್ಲಾ,ರಾಜ್ಯಕ್ಕೆ ಕೀರ್ತಿ ತಂದಿದ್ದು ಸಂತಸವಾಗಿದೆ ಎಂದು ಶ್ರೀ ಗಾನಲಹರಿ ಸಂಗೀತ ಪಾಠ ಶಾಲೆಯ ಸಂಸ್ಥಾಪಕ ಶ್ರೀಶೈಲಪ್ಪ ಹಳ್ಳಿಕೇರಿ ಅವರು ಮಾತನಾಡಿ,ಕು.ಸಂಗೀತಾ ವಿದ್ಯಾರ್ಥಿನಿಗೆ ಅವರ ನಿವಾಸದಲ್ಲಿ 11 ಸಾವಿರ ಚೆಕ್ಕು ನೀಡಿ ಸನ್ಮಾನಿಸಿ ಗೌರವಿಸಿದರು. ಈ ವೇಳೆ ಪತ್ರಕರ್ತರು ಹಾಗು ಪಂಚಮಸಾಲಿ ಸಮಾಜದ ಹಿರಿಯರು ಸನ್ಮಾನಿಸಿ ಮಾತನಾಡಿ ಶುಭ ಕೊರಿದರು. ಹಿರಿಯ ಪತ್ರಕರ್ತ ಶರಣಬಸಪ್ಪ ದಾನಕೈ, ಶಿವಮೂರ್ತಿ ಇಟಗಿ,ವ್ಹಿ.ಎಸ್.ಶಿವಪ್ಪಯ್ಯನಮಠ,ವೀರಣ್ಣ ತೋಟದ ,ಸಿ.ಎ.ಆದಿ ಸನ್ಮಾನಿಸಿದರು. ಪಂಚಮಸಾಲಿ ಸಮಾಜದ ಮುಖಂಡರಾದ ಕೆ.ಜಿ.ಪಲ್ಲೇದ, ಮಂಜುನಾಥ ಅಧಿಕಾರಿ,ಸುರೇಶಗೌಡ ಶಿವನಗೌಡ್ರ, ಅಕ್ಕಮಹಾದೇವಿ ಪಾಟೀಲ , ದಾನನಗೌಡ ತೊಂಡಿಹಾಳ,ಚೆನ್ನಪ್ಪ ನೆರೇಗಲ್ಲ, ಶರಣಗೌಡ ಕೊಡಗಲಿ,ಸಿದ್ದಪ್ಪ ಹಕ್ಕಿಗೋಣಿ ,ಮಂಜು ಮ್ಯೆ.ಹಳ್ಳಿಕೇರಿ ಮಹಾಂತೇಶ ಭಾಸ್ಕರ, ಕಲ್ಲಪ್ಪ ಸಾದರಖಾನ , ಶರಣಪ್ಪ ಗೋಣಿ ಸೇರಿದಂತೆ ಇತರರು ಇದ್ದರು.

# ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಏಪ್ರಿಲ್ 17ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಕಲಬುರಗಿ ಸರ್ಕಾರಿ ಐ.ಟಿ.ಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಸ್ಟ್ರಿಡ್ಸ್ ಫಾರ್ಮಾ ಸೈನ್ಸ್ ಪ್ರೈ.ಲಿ. ದಲ್ಲಿ ಅಪ್ರೆಂಟಿಸ್ ಟ್ರೇನಿ ಹುದ್ದೆಗೆ ಪಿಯುಸಿ /ಡಿಪ್ಲೋಮಾ ಬಿ.ಎ, ಬಿ.ಕಾಂ. ಬಿ.ಎಸ್.ಸಿ (1 & 2 ವರ್ಷ) ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 24 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೆಸ್ಯೂಮ್ (ಬಯೋಡೆಟಾ) ಭಾವಚಿತ್ರಗಳು ಹಾಗೂ ಆಧಾರಕಾರ್ಡದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಹಾಗೂ ಮೊಬೈಲ್ ಸಂಖ್ಯೆ 08472-274846, ಮೊಬೈಲ್ ಸಂಖ್ಯೆ 9036263305 ಗೆ ಸಂಪರ್ಕಿಸಲು ಕೋರಲಾಗಿದೆ.

# ಏ,15 ಕ್ಕೆ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ವ್ಯಾಪ್ತಿಯಲ್ಲಿ ರಾಜಾಪೂರ ಫೀಡರ್ ವ್ಯಾಪ್ತಿಯ ಪ್ರದೇಶಗಳಲ್ಲಿ ಏಪ್ರಿಲ್ 15ರಂದು ಬುಧವಾರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನಿರ್ವಹಣಾ ಕಾರ್ಯಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜಾಪೂರ ಫೀಡರ್: ಬಸವೇಶ್ವರ ಆಸ್ಪತ್ರೆ ಸಿ.ಪಿ. ಎಮ್ ಕಾಲೇಜ್, ಆಂಜನೇಯ ನಗರ, ರಾಜಾಪುರ ಸರ್ವೋದಯ ನಗರ, ಪಾವನ ಗಂಗಾ ಕಾಲೋನಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

# ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

ರಾಯಚೂರು: ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ 2026-27 ನೇ ಸಾಲಿಗಾಗಿ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ರಾಯಚೂರು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ ದಾಖಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಜಿಲ್ಲೆಗೆ 65 ಗುರಿ ನಿಗಧಿಪಡಿಸಲಾಗಿದೆ. ಜಿಲ್ಲೆಯ ಪ್ರತಿಭಾವಂತ ಪರಿಶಿಷ್ಟ ವರ್ಗದ 5ನೇ ತರಗತಿಯಲ್ಲಿ ಶೇ.60 ಅಂಕ ಪಡೆದ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಅರ್ಹತಾ ಪರೀಕ್ಷೆ ಮೂಲಕ ಆಯ್ಕೆ ಮಾಡಿ ನಿಯಮಗಳನ್ವಯ ದಾಖಲು ಮಾಡಿಕೊಳ್ಳಲಾಗುವುದು.

ಈ ಪ್ರತಿಷ್ಠಿತ ಶಾಲೆಗಳಲ್ಲಿ ಉಚಿತವಾಗಿ ವಸತಿ, ಭೋಜನಾ ವೆಚ್ಚ, ಶಾಲೆಯ ಕಡ್ಡಾಯ ಶುಲ್ಕ, ಸಮವಸ್ತ್ರ, ಪಠ್ಯ ಪುಸ್ತಕ ಹಾಗೂ ಇತರೆ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನಿಗಧಿಪಡಿಸಿದಂತೆ ಸೌಲಭ್ಯ ನೀಡಲಾಗುವುದು.ವಿದ್ಯಾರ್ಥಿಗಳು ಸಂಬಂಧಪಟ್ಟ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಸಲ್ಲಿಸಬೇಕು. ಅರ್ಜಿಯೊಂದಿಗೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರದ ಪ್ರತಿಗೆ ಪತ್ರಾಂಕಿತ ಅಧಿಕಾರಿ ಅವರಿಂದ ದೃಢೀಕರಿಸಿದ ಪ್ರಮಾಣ ಪತ್ರ ಲಗತ್ತಿಸಬೇಕು.




ಬಸವಕಲ್ಯಾಣದಲ್ಲಿ ವಚನ ವಿಶ್ವವಿದ್ಯಾಲಯ ಸ್ಥಾಪನೆಗೆ ಭೂಮಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಬೀದರ ನಗರದಲ್ಲಿ ಸತ್ಕರಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಭಾಲ್ಕಿಯ ಪೂಜ್ಯ ಶ್ರೀ ಬಸವಲಿಂಗ ಪಟ್ಟದೇವರು, ಸಚಿವರಾದ ಈಶ್ವರ ಖಂಡ್ರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಜೈಭವಾನಿ ಮಾತಾಜಿಯ ಸೇವಾರ್ಥ ಅನ್ನದಾಸೋಹ


# ಜೈ ಭವಾನಿ ಮಾತೆಯ ಮಹಿಮೆ ಅಪಾರ ಮಾತೆಯ ಕೃಪೆಯಿಂದ ಎಲ್ಲವೂ ಸಾಧ್ಯ

ಭಾಲ್ಕಿ: ಜೈಭವಾನಿ ಮಾತೆಯ ಮಹಿಮೆ ಅಪಾರವಾಗಿದೆ. ಮಾತೆಯ ಕೃಪೆಯಿಂದ ಅಸಾಧ್ಯವೂ ಸಾಧ್ಯವಾಗುತ್ತದೆ ಎಂದು ಖಟಕಚಿಂಚೋಳಿ ಹುಗ್ಗೆಳ್ಳಿ ಹಿರೇಮಠದ ಶ್ರೀ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಜಾಧವ ಆಸ್ಪತ್ರೆಯ ಹತ್ತಿರದ ಜೈಭವಾನಿ ಮಾತಾ ಸೇವಾ ಸಂಘದಲ್ಲಿ ಕನಕದಾಸ ರೂರಲ್ ಡೆವಲಪಮೆಂಟ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಜೈಭವಾನಿ ಅನ್ನದಾಸೋಹ ಹಾಗು ಸಾಂಸ್ಕೃತಿಕ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು. ಭವಾನಿ ಮಾತೆಯು ಆದಿಶಕ್ತಿಯಾಗಿದ್ದಾಳೆ,

ದುಷ್ಟರನ್ನು ಸಂಹರಿಸಿ, ಶಿಷ್ಟರಕ್ಷಳಾಗಿ ಮಾತೆ ಭವಾನಿ ನಮ್ಮನ್ನೆಲ್ಲ ಕಾಪಾಡುವ ಶಕ್ತಿ ಹೊಂದಿದ್ದಾಳೆ, ಅವಳ ಹೆಸರಿನಲ್ಲಿ ಕನಕದಾಸ ರೂರಲ್ ಡೆವಲಪಮೆಂಟ್ ಚಾರಿಟೇಬಲ್ ಟ್ರಸ್ಟ ವತಿಯಿಂದ ಪ್ರತಿವರ್ಷ ಅನ್ನದಾಸೋಹ ನಡೆಸಿಕೊಂಡು ಬರುತ್ತಿರುವುದು ಮೆಚ್ಚುವಂತಹ ಸಂಗತಿಯಾಗಿದೆ ಎಂದು ಹೇಳಿದರು.

ಕಮರಿಮಠ ರುದನೂರಿನ ಶ್ರೀ ದಯಾನಂದ ಸ್ವಾಮೀಜಿ ಮಾತನಾಡಿ, ಭವಾನಿ ಮಾತೆಯ



ಭಾಲ್ಕಿ: ಪಟ್ಟಣದಲ್ಲಿ ಕನಕದಾಸ ರೂರಲ್ ಡೆವಲಪಮೆಂಟ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಜೈಭವಾನಿ ಅನ್ನದಾಸೋಹ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಉತ್ತಮ ಪ್ರದರ್ಶನ ನೀಡಿದ ಕಲಾತಂಡದವರಿಗೆ ಶ್ರೀಗಳು ಪ್ರಶಸ್ತಿ ಪತ್ರ ವಿತರಿಸಿದರು.

ಕೃಪೆ ನಮ್ಮೆಲ್ಲರ ಮೇಲೆ ಇರುವುದರಿಂದ ನಾವೆಲ್ಲರೂ ಇಲ್ಲಿ ಸುಖವಾಗಿ ಬಾಳುತ್ತಿದ್ದೇವೆ ಎಂದು ಹೇಳಿದರು. ಕಲ್ಲೂರಿನ ಹಿರೇಮಠ ಸಂಸ್ಥಾನದ ಚರಮೂರ್ತಿ ಶ್ರೀ ಮೃತ್ಯುಂಜಯ ಶಿವಯೋಗಿಗಳು ಭವಾನಿ ಮಾತೆಯ ಕೃಪೆ

ಮತ್ತು ಟ್ರಸ್ಟ್‌ನ ಪದಾಧಿಕಾರಿಗಳ ಕಾರ್ಯಕ್ಷಮತೆಯ ಬಗ್ಗೆ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷೆ ಕವಿತಾ ರೇವಪ್ಪ ನರಸಗೊಂಡ ತರನಳ್ಳಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಡೊಣಗಾಪುರದ ಬಾಲತಪಸ್ವಿ ನಾಗಲಿಂಗ ಅವಧೂತರು, ಕಪಲಾಪೂರದ ಮಾತೆ ನೀಲಾಂಬಿಕಾ ತಾಯಿ, ಪ್ರಭು ಕುಶನೂರೆ ನಾಗರಾಳ, ಜ್ಯೋತಿಬಾ ಘುಲೆ ಉಪಸ್ಥಿತರಿದ್ದರು.

ಇದೇವೇಳೆ ಸ್ವಾತಿ,

ಗಣಪತಿ, ಕಾಳಗೊಂಡ ರವರಿಂದ ಜಾನಪದ ಗೀತೆ ಮತ್ತು ನೃತ್ಯ, ಪ್ರಭು ಕುಶನೂರೆಯವರಿಂದ ಭಜನಾಪದ, ಕಾಶಿನಾಥ ಗುಂಡಪ್ಪ ಮೇತ್ರೆಯವರಿಂದ ತತ್ವಪದ, ಪ್ರೀತಿ ರೇವಪ್ಪ ರವರಿಂದ ಸಾಂಸ್ಕೃತಿ ನೃತ್ಯ, ಶಿವಾನಂದೇಶ್ವರ ಸಂಘದಿಂದ ಕೋಲಾಟ, ಜ್ಯೋತಿಬಾ, ಸೇವಂತಿಯವರಿಂದ ಸೋಬಾನ ಪದ, ಕೀರ್ತಿ ಮತ್ತು ಶಿವಕುಮಾರ ತಂಡದವರಿಂದ ಕೋಲಾಟ ಪ್ರದರ್ಶನ

ನಡೆಸಲಾಯಿತು. ಹಾಗು ಕಲೆಯಲ್ಲಿ ಉತ್ತಮ ಸಾಧನೆ ಮಾಡಿದ ಕಲಾವಿದರಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು. ಕವಿತಾ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಗುಂಡಪ್ಪ ಮೇತ್ರೆ ವಂದಿಸಿದರು.

# ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಏಪ್ರಿಲ್ 17ರ ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

# ನಾಗರಾಜಗೆ ಡಾ. ಬಿ.ಆರ್. ಅಂಬೇಡ್ಕರ್ ರತ್ನ ಪ್ರಶಸ್ತಿ

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಸಾಮಾಜಿಕಕ್ಷೇತ್ರದಲ್ಲಿನ ಗಣನೀಯ ಸೇವೆಯನ್ನು ಗುರುತಿಸಿ, ಯಾದಗಿರಿಯ ನಾಗರಾಜ ಎಂ. ಬೀರನೂರ ಅವರಿಗೆ ಈ ವರ್ಷದ ಪ್ರತಿಷ್ಠಿತ "ಡಾ. ಬಿ.ಆರ್. ಅಂಬೇಡ್ಕರ್ ರತ್ನ" ಪ್ರಶಸ್ತಿಯನ್ನು ಘೋಷಿಸಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯ ಅಂಗವಾಗಿ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ನಾಗರಾಜ ಬೀರನೂರ ಅವರ ಸಮಾಜ ಸೇವೆಯನ್ನು ಪರಿಗಣಿಸಿ ಎ. ಅಮೃತ ರಾಜ್ ಅವರು ಈ ಆಯ್ಕೆಯನ್ನು ಮಾಡಿದ್ದಾರೆ.

ಪ್ರಶಸ್ತಿ ಪ್ರದಾನ ಸಮಾರಂಭವು ಏಪ್ರಿಲ್ 15, ಬುಧವಾರ ಸಂಜೆ 5:00 ಗಂಟೆಗೆ ಸರ್. ಪುಟ್ಟಣ್ಣ ಚೆಟ್ಟಿ ಪುರಭವನ (ಟೌನ್ ಹಾಲ್), ಬೆಂಗಳೂರು. ನಾಗರಾಜ ಬಿರನೂರ ಅವರು ಸಮಾಜದ ವಿವಿಧ ಸ್ತರಗಳಲ್ಲಿ ಗುರುತಿಸಿಕೊಂಡು, ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದನ್ನು ಮೆಚ್ಚಿ ಸಂಘವು ಈ ಗೌರವಕ್ಕೆ ಅವರನ್ನು ಪಾತ್ರರನ್ನಾಗಿಸಿದೆ. ಏಪ್ರಿಲ್ 15 ರಂದು ಬೆಂಗಳೂರಿನಲ್ಲಿ ಪ್ರಶಸ್ತಿಯನ್ನು ಸ್ವೀಕರಿಸಲಿದ್ದಾರೆ.

ನಾಗರಾಜ ಅವರಿಗೆ ಪ್ರಶಸ್ತಿ ಲಭಿಸಿರುವುದಕ್ಕೆ ಅವರ ಅಭಿಮಾನಿಗಳು ಹಾಗೂ ಜಿಲ್ಲೆಯ ಗಣ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

# ಶರಣ ಉರಿಲಿಂಗಪೆದ್ದಿಗೆ ಅವಮಾನ: ಖಂಡನೆ

- ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ



ಶರಣ ಉರಿಲಿಂಗಪೆದ್ದಿಗೆ ಮೇಲಿಂದ ಮೇಲೆ ಅವಮಾನ ಮಾಡಲಾಗುತ್ತಿದೆ. ಇದನ್ನು ಖಂಡಿಸುವರು ಯಾರು ಇಲ್ಲ ಎಂದು ತಿಳಿದಿರುವರೇ ತಪ್ಪಿನ ಮೇಲೆ ತಪ್ಪು ಮಾಡುವ ಮೂಲಕ ಶರಣ ಉರಿಲಿಂಗಪೆದ್ದಿಯವರಿಗೆ ಅವಮಾನ ಮಾಡಲಾಗುತ್ತದೆ. ನಿನ್ನೆ ನಡೆದ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ದೇವರ ದಾಸಿಮಯ್ಯ ಮತ್ತು ಕಾಯಕ ಶರಣರ ಜಯಂತಿಯನ್ನು ಆಚರಿಸಲಾಗಿದೆ

ಒಂದು ವಿಶ್ವವಿದ್ಯಾಲಯ ಉನ್ನತ ಶೋಧನೆ, ಅಧ್ಯಯನ, ಮಾಡುವ ಮೂಲಕ ಉನ್ನತ ವಿಚಾರ ಹೇಳಬೇಕು. ಅದನ್ನು ಬಿಟ್ಟು ಕೆಳಮಟ್ಟದ ವಿಚಾರ ಪ್ರಚಾರ ಮಾಡುತ್ತಿರುವುದು ಇದ್ಯಾವ ವಿದ್ವಾಂಸರು? ಇದರ ಸಂಚಾಲಕರು ಪ್ರೊ.ಎಚ್.ಟಿ.ಪೋತೆಯವರಿಗೆ ಅರ್ಥ ವಾಗುವುದಿಲ್ಲವೇ? ವಿಶ್ವವಿದ್ಯಾಲಯದ ನೇತಾರ, ವಿದ್ವಾಂಸ, ಡೀನ್, ಕನ್ನಡ ವಿಭಾಗ ನಿರ್ದೇಶಕ, ಪ್ರಸಾರಾಂಗ ನಿರ್ದೇಶಕ, ವಿಶ್ವವಿದ್ಯಾ ಲಯದ ಪ್ರಾಧ್ಯಾಪಕರ ಸಂಘದ ಅಧ್ಯಕ್ಷ ಹಲವು ಪೀಠಗಳ ಸಂಚಾಲಕ ಇವರು ಏತಕ್ಕಾಗಿ ಇದ್ದಾರೆ? ಕಾಟಾಚಾರಕ್ಕೆ ಕಾರ್ಯಕ್ರಮ ಮಾಡಿ, ಹಣ ಎತ್ತಿ ಲೂಟಿ ಮಾಡುತ್ತಿದ್ದಾರೆ. ಶರಣರಿಗೆ ಮಾಡುವ ಅಪಮಾನವಲ್ಲವೇ? ಜಯಂತಿ ಎಂದು ಆಗಿದೆ, ಇವರು ಮಾಡುವ ದಿನ ಯಾವುದು ? ಅಲ್ಲದೇ ಶರಣರು ಕಾಯಕ ಜೀವಿಗಳು. ಅವರಿಗೆ ವೈದಿಕರು ಕಲ್ಪೋತಿತವಾಗಿ ಚಿತ್ರಿಸಿರುವುದನ್ನು ಬರೆದಿರುವುದೇ ಸತ್ಯವಲ್ಲ. ಕಳ್ಳತನ ಮಾಡುವ ಮೂಟೆ ಹೊತ್ತ ಚಿತ್ರ ಹಾಕಿದ್ದು ಖಂಡನೀಯ ಎಂದು ಬೇಲೂರಿನ ಉರಿಲಿಂಗಪೆದ್ದಿ ಮಠದ ಪೀಠಾಧಿಪತಿ ಪೂಜ್ಯಶ್ರೀ ಪಂಚಾಕ್ಷರಿ ಸ್ವಾಮೀಜಿ ಉಗ್ರವಾಗಿ ಪ್ರತಿಭಟಿಸಿದ್ದಾರೆ.

ಹನ್ನೆರಡನೆಯ ಶತಮಾನದ ಶರಣ ಚಳವಳಿ ಹೋರಾಟದಲ್ಲಿ ವಚನ ಸಾಹಿತ್ಯ ರಚಿಸಿದ ಶರಣರು, ಉನ್ನತ ಮಟ್ಟದ ವಿದ್ವಾಂಸರು ಆಗಿದ್ದರು. ಪತ್ನಿ ಕಾಳವ್ವೆ ಕೂಡ ವಚನಕಾರ್ತಿ. "ಸತಿಪತಿಗಳು ಒಂದಾದ ಹಿತವಾಗಿಪ್ಪುದು ಶಿವಂಗೆ" ಎಂದು ಬಾಳಿದವರು. ಇಂದಿನವರು ಬಾಳದೇ ಅಮೃತದೊಳಗೆ ವಿಶ್ವ ಬೆರೆಸಿದಂತೆ ಬಾಳುವ ಜನರಿಗೆ ಏನನ್ನಬೇಕು.? ಶರಣ ಉರಿಲಿಂಗಪೆದ್ದಿ ಕಳ್ಳನಲ್ಲ !. ಆತ ಕಟ್ಟಿಗೆ ಕಾಯಕ ಮಾಡುವವರು. ಆದರೆ ನೀವು ಕಳ್ಳಂತೆ ಪೋಟೋ ಬಳಸಿದ್ದು ಅಮಾನವೀಯತೆ. ಕಾರ್ಯಕ್ರಮ ಸಂಚಾಲಕರು ತಮ್ಮ ನಿರ್ಲಕ್ಷ್ಯತನ ಇಲ್ಲಿ ಪ್ರದರ್ಶಿಸುವ ಕೆಲಸ ಮಾಡಿದ್ದಾರೆ. ಕೂಡಲೇ ತಪ್ಪು ಒಪ್ಪಿಗೆ ನೀಡಬೇಕು, ರಿಜಿಸ್ಟಾರ್ ಮತ್ತು ವೈಸ್ ಚಾನ್ಸಲರ್ ಇವರ ಬಗ್ಗೆ ಕಾನೂನು ಕ್ರಮ ಕೈಗೊಳ್ಳಬೇಕು. ಐದು ದಿನಗಳಲ್ಲಿ ಕ್ರಮ ಕೈಕೊಳ್ಳದಿದ್ದರೆ, ನಾವು ಈ ಮೂವರು ಮೇಲೆ ಪೋಲಿಸ್ ಸ್ಟೇಶನ್ ದಲ್ಲಿ ದೂರು ದಾಖಲಿಸಲಾಗುವುದು. ಇಡಿ ಶರಣ ಸಮುದಾಯ, ಭಕ್ತರು, ಸಾಹಿತಿಗಳು, ಉಗ್ರವಾದ ಹೋರಾಟ ಕೈಗೊಳ್ಳಲಾಗುವುದೆಂದು ಖಾರವಾಗಿ ವಿಶ್ವವಿದ್ಯಾಲಯಕ್ಕೆ ಎಚ್ಚರಿಕೆ ಪತ್ರಿಕಾ ಹೇಳಿಕೆ ಮೂಲಕ ರವಾನಿಸಿದ್ದಾರೆ. ವಿಶ್ವವಿದ್ಯಾಲಯಕ್ಕೂ ಪತ್ರ ಬರೆದು, ಉನ್ನತ ಶಿಕ್ಷಣ ಇಲಾಖೆ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು, ಕನ್ನಡ ಸಂಸ್ಕೃತಿ ಇಲಾಖೆ ಸಚಿವರು

ಸಮಾಜ ಕಲ್ಯಾಣ ಇಲಾಖೆ ಸಚಿವರು, ಮಾನವ ಹಕ್ಕುಗಳ ಆಯೋಗ, ಎಸ್.ಸಿ., ಎಸ್.ಟಿ ಸೆಲ್, ಉಪ ಮುಖ್ಯಮಂತ್ರಿ, ಮುಖ್ಯಮಂತ್ರಿಗಳು, ರಾಜ್ಯಪಾಲರು, ಎಐಸಿಸಿ ರಾಷ್ಟ್ರೀಯ ಅಧ್ಯಕ್ಷರಿಗೆ ಪತ್ರ ಬರೆದಿರುವುದಾಗಿ ಪತ್ರಿಕಾ ಪ್ರಕಟಣೆಯಲ್ಲಿ ಬೇಲೂರು ಶ್ರೀಗಳು ತಿಳಿಸಿದರು.

# ಕನಿಷ್ಠ ಕೂಲಿಯಲ್ಲಿ ಕಷ್ಟದ ಬದುಕು ನೇಕಾರರ ನೆರವಿಗೆ ಸರ್ಕಾರ ಮುಂದಾಗಲಿ

- ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಕೈಮಗ್ಗ ನೇಕಾರರ ಪ್ರತಿದಿನದ ಕೂಲಿ ತುಂಬಾ ಕನಿಷ್ಠ ಮಟ್ಟದಲ್ಲಿದ್ದು, ಅದರಿಂದ ಜೀವನ ನಡೆಸುವುದು ದುಸ್ತರವಾಗಿದೆ. ಈ ವೃತ್ತಿಯ ಮೇಲೆ ಅವಲಂಬಿತರಾಗಿರುವ ಕುಟುಂಬಗಳು ದಿನನಿತ್ಯದ ಅಗತ್ಯಗಳನ್ನು ಪೂರೈಸುವುದಕ್ಕೂ ಸಂಕಷ್ಟ ಅನುಭವಿಸುತ್ತಿವೆ.

ಇದಲ್ಲದೆ, ಪಟ್ಟಣದಲ್ಲಿರುವ ನೇಕಾರರಿಗೆ ಸಂಬಂಧಿಸಿದ ಕಾರ್ಯಚಟುವಟಿಕೆಗಳು ಕಳೆದ 10–12 ವರ್ಷಗಳಿಂದ ಸ್ಥಗಿತಗೊಂಡಿರುವುದು ಮತ್ತೊಂದು ದೊಡ್ಡ ಸಮಸ್ಯೆಯಾಗಿದೆ. ಇದರ ಪರಿಣಾಮವಾಗಿ ಸರ್ಕಾರದಿಂದ ದೊರೆಯಬೇಕಾದ ಅನೇಕ ಸೌಲಭ್ಯಗಳು ನೇಕಾರರಿಗೆ ತಲುಪದೆ ಉಳಿದಿವೆ.

ಈ ಕುರಿತು ಹಿರಿಯ ನೇಕಾರರಾದ ಬಲರಾಮ ಅವರು ಮಾತನಾಡಿ, "ಸರಿಯಾದ ಕೂಲಿ ಸಿಗದೆ ಅನೇಕ ಅನುಭವ ಹೊಂದಿದ ನೇಕಾರರು ವಯಸ್ಸಾಗಿ ವೃತ್ತಿಯನ್ನು ತೊರೆದಿದ್ದಾರೆ ಇನ್ನೂ ಕೆಲವರು ಮರಣ ಹೊಂದಿದ್ದಾರೆ. ಇಂದಿನ ಯುವ ಪೀಳಿಗೆಯವರು ಕನಿಷ್ಠ ಕೂಲಿಗೆ ಆಸಕ್ತಿ ತೋರದೇ ಬೇರೆ ಉದ್ಯೋಗಗಳತ್ತ ಮುಖ ಮಾಡುತ್ತಿದ್ದಾರೆ," ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ಸಂಬಂಧಿತ ಕಚೇರಿಗಳನ್ನು ಪುನರ್‌ಪ್ರಾರಂಭಿಸಿ, ನೇಕಾರರಿಗೆ ಅಗತ್ಯವಾದ ಸಾಲ, ಸಬ್ಸಿಡಿ, ನೂಲಿನ ಪೂರೈಕೆ, ಮಾರುಕಟ್ಟೆ ವ್ಯವಸ್ಥೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಬೇಕೆಂದು ನೇಕಾರರು ಒತ್ತಾಯಿಸುತ್ತಿದ್ದಾರೆ.



ನೇಕಾರರ ಜೀವನಮಟ್ಟವನ್ನು ಸುಧಾರಿಸಲು ಸರ್ಕಾರ ಸಮಗ್ರ ಯೋಜನೆಗಳನ್ನು ಜಾರಿಗೆ ತರಬೇಕು. ಕೈಮಗ್ಗ ಉದ್ಯಮ ಉಳಿಯಬೇಕಾದರೆ, ನೇಕಾರರ ಬದುಕು ಬಲಪಡಿಸುವ ಕ್ರಮಗಳನ್ನು ತಕ್ಷಣ ಕೈಗೊಳ್ಳುವುದು ಅತ್ಯಾವಶ್ಯಕವಾಗಿದೆ.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

- ಮಲ್ಲಮ್ಮ ನುಡಿ ವಾರ್ತೆ , ಕಲಬುರಗಿ

ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಏಪ್ರಿಲ್ 14 ರಂದು ಮಂಗಳವಾರ ಬೆಳಿಗ್ಗೆ 9 ಗಂಟೆಗೆ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ನಗರದ ಜಗತ್ ಸರ್ಕಲ್ ಹತ್ತಿರದ ಡಾ. ಬಿ. ಆರ್. ಅಂಬೇಡ್ಕರ್ ಪುತ್ಥಳಿ ಹತ್ತಿರದಲ್ಲಿ ಹಮ್ಮಿಕೊಳ್ಳಲಾದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ರವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ, ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 15 ರಂದು ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ರಾತ್ರಿ 8.45 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಜಯಂತಿ ಅಂಗವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ಮನವಿ

- ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಏಪ್ರಿಲ್ 14ರಂದು ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮುಖಂಡರು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ. ಅಂದು ಬೆಳಿಗ್ಗೆ 9:30 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಪೂಜೆ ಹಾಗೂ ಮಾಲಾರ್ಪಣೆ ಕಾರ್ಯಕ್ರಮ ನಡೆಯಲಿದೆ. ನಂತರ ರಂಗಮಂದಿರದವರೆಗೆ ಮೆರವಣಿಗೆ ಮಾಡಲಾಗುವುದು. ಬೆಳಿಗ್ಗೆ 11ಗಂಟೆಗೆ ಶ್ರೀ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಮತ್ತು ಕುವೆಂಪು ಕನ್ನಡ ಅಧ್ಯಯನದ ನಿರ್ದೇಶಕರಾದ ಡಾ.ಬಿ.ಎಂ.ಪುಟ್ಟಯ್ಯ ಅವರಿಂದ ಉಪನ್ಯಾಸ ಕಾರ್ಯಕ್ರಮವಿದ್ದು, ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು, ಸಮಾಜದ ಎಲ್ಲಾ ಮುಖಂಡರು, ವಿವಿಧ ಸಂಘ–ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರರದೆ.

# ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶಿಲ್ಪ ಉತ್ತಮ ಸಾಧನೆ

- ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಯಾದಗಿರಿ ತಾಲೂಕಿನ ಬಾಲ್ಚೇಡ್ ಗ್ರಾಮದ ಬಸಮ್ಮ ನಾಗೇಂದ್ರಪ್ಪ ಸಜ್ಜನ್ ದಂಪತಿಯ ಸುಪುತ್ರೀಯಾದ ಕುಮಾರಿ ಶಿಲ್ಪ ರವರು ಪಿಯುಸಿ ವಿಜ್ಞಾನ ವಿಭಾಗದಲ್ಲಿ 600 ಕ್ಕೆ 576 ಅಂಕ ಪಡೆದು ಪ್ರತಿಶತ 96% ಪಡೆದು ತಾಲೂಕ್ ಮತ್ತು ಗ್ರಾಮಕ್ಕೆ ಕೀರ್ತಿ ತಂದಿದ್ದಾಳೆ.

ಕನ್ನಡ–98 ಇಂಗ್ಲಿಷ್–86 ಭೌತಶಾಸ್ತ್ರ–96 ರಸಾಯನಶಾಸ್ತ್ರ–97 ಗಣಿತ–100 ಜೀವಶಾಸ್ತ್ರ–99 ಒಟ್ಟಾರೆಯಾಗಿ 600 ಕೆ 576 ಅಂಕಗಳನ್ನು ಪಡೆದಿದ್ದಾಳೆ ಶಿಲ್ಪ ಅವರು ಹತ್ತನೆಯ ತರಗತಿಯನ್ನು ಸೈದಾಪುರದ ಶ್ರೀ ಭಗವಾನ್ ಮಹಾವೀರ್ ಪ್ರೌಢಶಾಲೆಯಲ್ಲಿ ಮುಗಿಸಿ ಪ್ರಸ್ತುತ ಪಿಯುಸಿಯನ್ನು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ನಗರಬೆಟ್ಟದ ಆಕ್ಷರ್ಡ್ ಪಿಯು ಕಾಲೇಜಿನಲ್ಲಿ ವ್ಯಾಸಂಗ ಮಾಡಿದ್ದು ಮೊಮ್ಮಗಳ ಸಾಧನೆಗೆ ಅಜ್ಜಿ ವಿಜಯಲಕ್ಷ್ಮಿ, ನಾಗೇಂದ್ರಪ್ಪ ಬಸಮ್ಮ ಸಜ್ಜನ್, ಮಲ್ಲಿಕಾರ್ಜುನ ಮೀನಾಕ್ಷಿ ಸಜ್ಜನ್, ಅಣ್ಣ ಬನಶಂಕರ್ ಸಜ್ಜನ್ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಶಿಲ್ಪ ಸಾಧನೆಯ ನಮ್ಮ ಕುಟುಂಬಕ್ಕೆ ಅಪಾರ ಹೆಮ್ಮೆಯನ್ನು ತಂದಿದೆ. ಇದು ಗೌರವದ ಕ್ಷಣ ನಮ್ಮ ಮನೆಯ ಹೆಮ್ಮೆ ತನ್ನ ಪರಿಶ್ರಮ ನಿಯಮಿತ ಅಧ್ಯಯನ ಹಾಗೂ ದೃಢ ಸಂಕಲ್ಪದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ಅವಳ ಮುಂದಿನ ವಿದ್ಯಾಭ್ಯಾಸದ ಪಯಣದಲ್ಲಿ ಇನ್ನಷ್ಟು ಯಶಸ್ಸುಗಳು ಲಭಿಸಲಿ ಎಂದು ಗ್ರಾಮದ ಜನರು ಮತ್ತು ಸಮಾಜದ ವತಿಯಿಂದ ಶುಭ ಹಾರೈಸಿದ್ದಾರೆ. ಈ ಸಂತಸದ ಕ್ಷಣದಲ್ಲಿ ಶಿಕ್ಷಕರಿಗೆ ಹಾಗೂ ಆಶೀರ್ವದಿಸಿದ ಬಂಧು ಬಳಗಕ್ಕೆ ಹೃತ್ಪೂರ್ವಕ ಧನ್ಯವಾದಗಳುನ್ನು ಅವರು ತಿಳಿಸಿದ್ದಾರೆ.

# ಉದ್ಯಮಶೀಲತಾಭಿವೃದ್ಧಿ ತರಬೇತಿಗಾಗಿ ಅರ್ಜಿ ಅಹ್ವಾನ

- ಮಲ್ಲಮ್ಮ ನುಡಿ ವಾರ್ತೆ, ಬೀದರ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ(ಸಿಡಾಕ್), ಬೀದರ ಇವರು ಬೀದರನಲಿ ಯುವ ನಿಧಿ ಪರಿಶಿಷ್ಟ ಪಂಗಡ ಮಹಿಳಾ ಫಲಾನಭವಿಗಳಿಗೆ ಸ್ವಂತ ಉದ್ಯಮ ಸ್ಥಾಪಿಸಲು 24 ದಿನಗಳ ಫ್ಯಾಶನ್ ಡಿಸೈನಿಂಗ್ ಮತ್ತು ಟೈಲರಿಂಗ್ ತರಬೇತಿ ಜೊತೆ–ಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಏಪ್ರಿಲ್.20 ರೊಳಗಾಗಿ ಕಚೇರಿಯಲ್ಲಿ ಅಥವಾ ಮೊಬೈಲ್: 9743012315 ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಕಾರ್ಯಕ್ರಮಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್: 9743012315 ಗೆ ಸಂಪರ್ಕಿಸಬಹುದು ಎಂದು ಜಂಟಿ ನಿರ್ದೇಶಕರು ಸಿಡಾಕ್, ಬೀದರ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶರಣ ಶ್ರೀಗಾದಿ ಲಿಂಗಪ್ಪ ತಾತನವರ ಪುರಾಣ ಪ್ರವಚನ

# ಪವಾಡ ಪುರುಷ ಶ್ರೀ ಗಾದಿ ಲಿಂಗಪ್ಪ ತಾತನವರ ಆದರ್ಶ,ತತ್ವ ಅಳವಡಿಸಿಕೊಳ್ಳಿ



- ಮಲ್ಲಮ್ಮ ನುಡಿ ವಾರ್ತೆ , ಕುರುಗೋಡು

13 ಪವಾಡಪುರುಷ, ಮಹಾಮಹಿಮ, ಶರಣಶ್ರೀಗಾದಿಲಿಂಗಪ್ಪತಾತನವರ ಆದರ್ಶ ತತ್ವಗಳನ್ನು ಪ್ರತಿಯೊಬ್ಬ ನಾಗರಿಕರು ಅಳವಡಿಸಿಕೊಳ್ಳಿರಿ ಎಂದು ಏಳುಬೆಂಚಿ ಗ್ರಾಮದ ಗವಾಯಿಗಳಾದ ಕರುಣಾಮೂರ್ತಿಸ್ವಾಮಿಗಳು ಹೇಳಿದರು.

ಅವರು ಸಮೀಪದ ಬಾದನಹಟ್ಟಿ ಗ್ರಾಮದಲ್ಲಿ ಸದ್ಗುರುಶ್ರೀಪಕ್ಕೀರೇಶ್ವರಸ್ವಾಮಿ ಮಠದಲ್ಲಿ ಊರಿನ ಭಕ್ತರಿಂದ ಹಮ್ಮಿಕೊಳ್ಳಲಾಗಿದ್ದ ಶರಣಶ್ರೀಗಾದಿಲಿಂಗಪ್ಪತಾತನವರ ಪುರಾಣ–ಪ್ರವಚನದಲ್ಲಿ ಪ್ರವಚನ ನೀಡಿ ಮಾತನಾಡಿದ ಅವರು, ಎಮ್ಮಿಗನೂರು ಜಡಿತಾತ, ಚೆಳ್ಳುಗುರ್ಕಿ ರ್ರಿತಾತ, ಸಿಂದಿಗೇರಿ ಮಲ್ಲಪ್ಪತಾತ, ಎಳ್ಳಾರಿ ಶೆಕ್ಷಾವಲಿತಾತ ನವರ ಸಮಕಾಲೀನರಾದ ಗೂಳ್ಯದ ಶ್ರೀಗಾದಿಲಿಂಗಪ್ಪತಾತನವರ ಪವಾಡಗಳು ಒಂದಲ್ಲ, ಎರಡಲ್ಲ, ಹಲವಾರು ಪವಾಡಗಳು ಇಂದಿಗೂ ನಿದರ್ಶನವಾಗಿವೆ. ಅಂಥಹ ಮಹಾಮಹಿಮ ಗೂಳ್ಯದ ಗಾದಿಲಿಂಗಪ್ಪತಾತನವರ ಪುರಾಣ–ಪ್ರವಚನವನ್ನು ಬಾದನಹಟ್ಟಿ ಗ್ರಾಮದ ಭಕ್ತರು ಏರ್ಪಡಿಸಿರುವುದು ನಮ್ಮ–ನಿಮ್ಮೆಲ್ಲರ ಸೌಭಾಗ್ಯ ಎಂದು ನುಡಿದರು. ಆದ್ದರಿಂದ ಪವಾಡಪುರುಷ ಗೂಳ್ಯದ ಗಾದಿಲಿಂಗಪ್ಪತಾತನವರ ಪುರಾಣ–ಪ್ರವಚನವನ್ನು ಕೇಳಲು ಗ್ರಾಮದ ಸದ್ಭಕ್ತರು ಪ್ರತಿನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀಗಾದಿಲಿಂಗಪ್ಪತಾತನವರ ಕೃಪೆಗೆ ಪಾತ್ರರಾಗಿರಿ ಎಂದು ನುಡಿದರು.

ಬಾದನಹಟ್ಟಿ ಗ್ರಾಮದ ಹಿರಿಯ ಕಲಾವಿದ ಕೆಪಿ. ಮಂಜುನಾಥ ಅವರು ತಮ್ಮ ಮಧುರಕಂಠದಿಂದ ಇಂಪಾಗಿ ಹಾಡುವುದರ ಮೂಲಕ ನೆರೆದ ಭಕ್ತರಿಗೆ ಸಂಗೀತದ ರಸದೌತಣವನ್ನು ಉಣಬಡಿಸಿದರು. ಬಾದನಹಟ್ಟಿ ಗ್ರಾಮದ ಕಲಾವಿದ ಜಗದೀಶ ಅವರು ಪುರಾಣದ ಇಂಪಾಗಿ ಪಠಣಮಾಡಿದರು.. ಜೊತೆಗೆ ಯುವಕಲಾವಿದ ಪಾಂಡುರಂಗ ಅವರು ತಬಲಾಸಾಥ್‌ನೀಡಿದರು. ಪುರಾಣಸೇವಾಸಮಿತಿಯ ಬಟ್ರಳ್ಳಿವೀರೇಶ, ದುರ್ಗಾತಿಮ್ಮಪ್ಪ, ದುರ್ಗಾಹನುಮಂತಪ್ಪ, ದುರ್ಗಾಸ್ವಾಮಿ, ದುರ್ಗಾಪುರಂದರ, ದುರ್ಗಾಕರೆಪ್ಪ, ಶ್ಯಾಪೂರುಶಿವರುದ್ರಪ್ಪ, ಮಾರುತಿಕ್ಯಾಂಪುಮಾಳಪ್ಪ, ಬಟ್ರಳ್ಳಿಮಲ್ಲಪ್ಪ, ದುರ್ಗಾಲಕ್ಷಣ, ಪುರುಗೈಪಾಂಡು ಸೇರಿದಂತೆ ಇತರೆ ಸೇವಾಸಮಿತಿ ಮುಖಂಡರು, ಊರಿನ ಎಲ್ಲಾ ಭಕ್ತರು,

ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರಸಾದ ಸ್ವೀಕರಿಸಿ ಗೂಳ್ಯದ ಗಾದಿಲಿಂಗಪ್ಪತಾತನವರ ಕೃಪೆಗೆ ಪಾತ್ರರಾದರು.

# ಸಿದ್ದರಾಮಯ್ಯ ಅಲ್ಲ, ಸಾಲದ ರಾಮಯ್ಯ: ಅಶೋಕ್ ವ್ಯಂಗ್ಯ

- ಮಲ್ಲಮ್ಮ ನುಡಿ ವಾರ್ತೆ, ಔರಾದ

2013 ರಲ್ಲಿ ರಾಜ್ಯದ ಪ್ರತಿಯೊಬ್ಬರ ಮೇಲೆ 13 ಸಾವಿರ ಸಾಲವಿತ್ತು. ಈಗ 1.13 ಲಕ್ಷಕ್ಕೆ ಏರಿದೆ. ಸಿದ್ದರಾಮಯ್ಯ ಒಬ್ಬರೇ 4.5 ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಶೇ.54 ರಷ್ಟು ಸಾಲ ಇವರೊಬ್ಬರಿಂದಲೇ ಆಗಿದೆ. ಇವರು ಸಿದ್ದರಾಮಯ್ಯ ಅಲ್ಲ. ಸಾಲದ ರಾಮಯ್ಯ ಎಂದು ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಅವರು ಕುಟುಕಿದರು.

ಭಾರತೀಯ ಜನತಾ ಪಕ್ಷ ಔರಾದ ಮಂಡಲದ ವತಿಯಿಂದ ಏಪ್ರಿಲ್ 12ರಂದು ಔರಾದ ಪಟ್ಟಣದಲ್ಲಿ ಏರ್ಪಡಿಸಿದ್ದ ಪಂಡಿತ ದೀನ ದಯಾಳ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ–2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆ.ಸಿ ರೆಡ್ಡಿಯಿಂದ ಬಸವರಾಜ ಬೊಮ್ಮಾಯಿಯವರೆಗೆ ಮಾಡಿರುವ ಸಾಲ ಒಂದು ಕಡೆಯಾದರೆ ಸಿದ್ದರಾಮಯ್ಯ ಮಾಡಿರುವ ಸಾಲವೇ ಒಂದು ಕಡೆ. ಉಳಿದವರು ಕೇವಲ ಶೇ.48 ರಷ್ಟು ಸಾಲ ಮಾಡಿದರೆ ಇವರೊಬ್ಬರೇ ಶೇ.54 ರಷ್ಟು ಸಾಲ ಮಾಡಿದ್ದಾರೆ. ಸಾಲ ಮಾಡಿ ಮಜಾ ಮಾಡುವುದು, ಸಾಲ ಮಾಡಿ ರಾಹುಲ ಗಾಂಧಿಗೆ ಹಣ ಕಳುಹಿಸುವುದು ಇವರ ಕಾಯಕವಾಗಿದೆ ಎಂದು ಕಿಡಿ ಕಾರಿದರು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಯಾವುದೇ ಒಳ್ಳೆಯ ಕೆಲಸ ಮಾಡಿಲ್ಲ. ಹೆಣ್ಣು ಮಕ್ಕಳಿಗೆ 2 ಸಾವಿರ ಕೊಡುತ್ತಿದ್ದಾರೆ. ಆದರೆ ಅವರ ಗಂಡನಿಂದ 6 ಸಾವಿರ ಕೀಳುತ್ತಿದ್ದಾರೆ. ನೀರು, ಮನೆ, ಈ ಕಾಗದ, ಪೆಟ್ರೋಲ್, ಡಿಸೇಲ್, ಹಾಲು, ಅಲ್ಕೋಹಾಲ್ ಸೇರಿದಂತೆ ಎಲ್ಲದರ ತೆರಿಗೆಗಳನ್ನು ಹೆಚ್ಚಿಸಿದ್ದಾರೆ. ಕಳೆದ ಬಜೆಟ್‌ನಲ್ಲಿ ತೆರಿಗೆ ಹಾಕಿರಲಿಲ್ಲ. ಆದರೆ ನಂತರ ಮೂರು ತಿಂಗಳಲ್ಲಿ ಎಲ್ಲ ರೀತಿಯ ತೆರಿಗೆಗಳನ್ನು ಹಾಕಿದ್ದಾರೆ.

ಸರ್ಕಾರ ಪಾಪರ್ ಆಗಿದೆ. ನೌಕರರಿಗೆ ಸಂಬಳ ಕೊಡಲು ಹಣ ಇಲ್ಲ. ಬಿಕ್ಷುಕರಿಗೆ 25 ಕೋಟಿ ಕೊಡಬೇಕಾಗಿತ್ತು. ಅವರಿಗೂ ಹಣ ಕೊಡುತ್ತಿಲ್ಲ. ಕೋವಿಡ್‌ನಲ್ಲಿ ತಂದೆ ತಾಯಿಯನ್ನು ಕಳೆದುಕೊಂಡಿರುವ 34 ಸಾವಿರ ಜನ ಅನಾಥ ಮಕ್ಕಳಿದ್ದಾರೆ. ಅವರಿಗೆ 75 ಕೋಟಿ ಹಣ ಕೊಡಬೇಕು. ಇನ್ನೂ ಕೊಟ್ಟಿಲ್ಲ. ಅನಾಥರು, ಬಿಕ್ಷುಕರಿಗೂ ಕೊಡಲು ಸರ್ಕಾರದ ಬಳಿ ಹಣವಿಲ್ಲ. ರಸ್ತೆಗಳು ಸರಿಯಿಲ್ಲ. ಆಸ್ಪತ್ರೆಗಳಲ್ಲಿ ಔಷಧ ಸಿಗುತ್ತಿಲ್ಲ. ಈ ಸಾಲದ ಸರ್ಕಾರವನ್ನು ತೊಲಗಿಸಲು ಜನತೆ ತೀರ್ಮಾನಿಸಿದ್ದಾರೆ ಎಂದರು.



ಕಾರ್ಯಕರ್ತರು ಬಲಿಷ್ಠರಾಗಬೇಕು. ಇಂತಹ ಪ್ರಶಿಕ್ಷಣ ವರ್ಗಗಳು ಸಹಕಾರಿಯಾಗಿ ಪರಿಣಮಿಸಲಿವೆ. ಮುಂದಿನ ದಿನಗಳಲ್ಲಿ ನಮ್ಮ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಗೆಲ್ಲಲ್ಲಿದ್ದು, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ. ಇವತ್ತೇ ಚುನಾವಣೆ ನಡೆದರೂ ರಾಜ್ಯದಲ್ಲಿರುವ ಭ್ರಷ್ಟ ಕಾಂಗ್ರೆಸ್ ಸರ್ಕಾರ ತೊಲಗಲಿದೆ ಎಂದು ಭವಿಷ್ಯ ನುಡಿದರು.

ಪ್ರಭು ಚವ್ಹಾಣರಿಂದ ದಾಖಲೆ ಸೃಷ್ಟಿ: ಪ್ರಭು ಚವ್ಹಾಣ ಅವರು ಪಶು ಸಂಗೋಪನೆ ಸಚಿವರಾಗಿದ್ದಾಗ ಗೋವುಗಳನ್ನು ರಕ್ಷಿಸುವ ಉದ್ದೇಶದಿಂದ ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೊಳಿಸುವ ಮೂಲಕ ವಿಧಾನಸಭೆಯಲ್ಲಿ ದಾಖಲೆಯನ್ನು ಸೃಷ್ಟಿ ಮಾಡಿದ್ದಾರೆ. ಮುಂಬರುವ ಚುನಾವಣೆಯಲ್ಲಿ ಅವರು ಸುಮಾರು 40 ಸಾವಿರ ಮತಗಳ ಅಂತರದಿಂದ ಗೆಲ್ಲಲಿದ್ದಾರೆ ಎಂದರು.

ಶಾಸಕರಾದ ಪ್ರಭು ಚವ್ಹಾಣ ಅವರು ಮಾತನಾಡಿ, ಜನಸಂಘ ನಂತರ ಭಾರತೀಯ ಜನತಾ ಪಕ್ಷವಾಗಿದೆ. ಪಂಡಿತ ದೀನದಯಾಳ ಉಪಾಧ್ಯಾಯ, ಶ್ಯಾಮಪ್ರಸಾದ ಮುಖರ್ಜಿ, ಅಟಲ ಬಿಹಾರಿ ವಾಜಪೇಯಿ, ಲಾಲಕೃಷ್ಣ ಅಡ್ವಾಣಿ, ಮುರುಳಿ ಮನೋಹರ ಜೋಶಿ, ಅಮಿತ ಶಾ, ಪ್ರಹ್ಲಾದ ಜೋಶಿ, ಯಡಿಯೂರಪ್ಪ ಹಾಗೂ ಇತರ ಮಹನೀಯರು ಪಕ್ಷದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ. ಹೊಸ ಅಧ್ಯಕ್ಷರಾದ ನಿತೀನ ನಬೀನ್, ರಾಜ್ಯದಲ್ಲಿ ಬಿ.ವೈ ವಿಜಯೇಂದ್ರ ಚುರುಕಿನಿಂದ ಕೆಲಸ ಮಾಡುತ್ತಿದ್ದಾರೆ. ಹಿಂದೆ ನಮ್ಮ ಸಂಸದರು ಬೆರಳೆಣಿಯಷ್ಟಿದ್ದರು. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ್ದು ದೇಶದ ಅಭಿವೃದ್ಧಿ ಉತ್ತುಂಗಕ್ಕೆ ಏರಿದೆ ಎಂದರು.

ರಾಜ್ಯದಲ್ಲಿರುವ ಕಾಂಗ್ರೆಸ್ ನೇತೃತ್ವದ ಜನವಿರೋಧಿ, ಗೋ ಮಾತೆಯ ವಿರೋಧಿಯಾಗಿದೆ. ಗೋವುಗಳು ಅಕ್ರಮವಾಗಿ ಕಸಾಯಿ ಖಾನೆಗಳಿಗೆ ಎಗ್ಗಿಲ್ಲದೇ ಸಾಗಿಸಲಾಗುತ್ತಿದೆ. ಹಿಂದೂ ವಿರೋಧಿ ಕೆಲಸ ಮಾಡುತ್ತಿದೆ. ಈ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಭಿವೃದ್ಧಿ ಕೆಲಸಗಳು ಕುಂಠಿತಗೊಂಡಿವೆ. ಔರಾದ ಪಟ್ಟಣಕ್ಕೆ ನೀರು ಪೂರೈಸುವ ಯೋಜನೆ ಸರಿಯಾಗಿ ನಡೆಯುತ್ತಿಲ್ಲ. ಪರಿಶಿಷ್ಟ ಪಂಗಡಕ್ಕೆ ಸೇರಿದ ಮುಖ್ಯಮಂತ್ರಿಯಿಂದ ಅವರ ಸಮುದಾಯದ ಹಿತ ಕಾಯಲು ಅಗುತ್ತಿಲ್ಲ. ಕೆಲ ದಿನಗಳ ಹಿಂದೆ ಬೋರಾಳ ಗ್ರಾಮದಲ್ಲಿ ಬೆಂಕಿ ಅವಘಡ ಸಂಭವಿಸಿ 45 ಮೇಕೆಗಳೊಂದಿಗೆ ರೈತ ಪ್ರಾಣ ಕಳೆದುಕೊಂಡಿದ್ದಾನೆ. ಅವರ ಕುಟುಂಬಸ್ಥರು ಬೀದಿಗೆ ಬಂದಿದ್ದಾರೆ. ಮುಖ್ಯಮಂತ್ರಿಗಳು ಜಿಲ್ಲೆಗೆ ಬಂದರೂ ರೈತನ ಮನೆಗೆ ಹೋಗಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರು ಕೂಡ ಭೇಟಿ ಕೊಟ್ಟಿಲ್ಲ. ಇವರಿಂದ ಸಮಾಜದ ಏಳಿಗೆ ನಿರೀಕ್ಷಿಸಲು ಹೇಗೆ ಸಾಧ್ಯ ಎಂದರು.

ಬಿಜೆಪಿ ಇಂದು ದೇಶದಲ್ಲಿಯೇ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಕಾರ್ಯಕರ್ತರು ಸಶಕ್ತರಾಗಬೇಕು. ಸಂಘಟಿತರಾಗಬೇಕು ಎಂಬ ಉದ್ದೇಶದಿಂದ ಪ್ರಶಿಕ್ಷಣ ಅಭಿಯಾನ ಹಮ್ಮಿಕೊಂಡಿದ್ದು, ಇದರಿಂದಾಗಿ

ಕಾರ್ಯಕರ್ತರ ಸಾಮರ್ಥ್ಯ ಹೆಚ್ಚುವುದಲ್ಲದೇ ಪಕ್ಷದ ಸಂಘಟನೆಯನ್ನು ಮತ್ತಷ್ಟು ಗಟ್ಟಿಗೊಳಿಸಲು ಸಹಕಾರಿಯಾಗಲಿದೆ. ಪಂಡಿತ ದೀನ ದಯಾಳ ಉಪಾಧ್ಯಾಯರ ಅಂತ್ಯೋದಯ ಪರಿಕಲ್ಪನೆ ಒಳಗೊಂಡು ಅವರ ಎಲ್ಲ ಚಿಂತನೆಗಳನ್ನು ಮತ್ತು ಪಕ್ಷದ ತತ್ವ ಸಿದ್ಧಾಂತಗಳ ಬಗ್ಗೆ ತಿಳಿಸಲಾಗುತ್ತದೆ. ಕಾರ್ಯಕರ್ತರು ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ನಾನು ಶಾಸಕನಾದ ನಂತರ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳ ಸಮಗ್ರ ಅಭಿವೃದ್ಧಿಗೆ ಹಲವಾರು ಕೆಲಸ ಕಾರ್ಯಗಳನ್ನು ಮಾಡಿದ್ದೇನೆ. ಎರಡು ರಾಷ್ಟ್ರೀಯ ಹೆದ್ದಾರಿಗಳಾಗಿವೆ. ಶಿಕ್ಷಣ, ರೈತರ ಅಭಿವೃದ್ಧಿ ಮತ್ತು ಸಂಪರ್ಕ ಸುಧಾರಣೆಗೆ ಹೆಚ್ಚಿನ ಆದ್ಯತೆ ಕೊಟ್ಟಿದ್ದೇನೆ. ಪವರ್ ಗ್ರಿಡ್ ಉಪ ಕೇಂದ್ರ, ಸೋಲಾರ್ ಪಾರ್ಕ್ ಯೋಜನೆ, ಕೆರೆಗಳನ್ನು ತುಂಬಿಸುವ ಯೋಜನೆ, ಸಿಪೆಟ್ ಕಾಲೇಜು, ಔರಾದ(ಬಿ) ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಯೋಜನೆ ಒಳಗೊಂಡು ಹತ್ತಾರು ಕೆಲಸಗಳಾಗುತ್ತಿವೆ. ಕೇಂದ್ರ ಸರ್ಕಾರದ ಸಾಧನೆಗಳು ಮತ್ತು ಕ್ಷೇತ್ರದಲ್ಲಿ ಆಗಿರುವ ಅಭಿವೃದ್ಧಿಯ ಬಗ್ಗೆ ಗ್ರಾಮಗಳ ಪ್ರತಿ ಕಟ್ಟೆಗಳ ಮೇಲೆ ಚರ್ಚೆಯಾಗಬೇಕು ಎಂದು ಕಾರ್ಯಕರ್ತರಿಗೆ ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಪ್ರಾಸ್ತಾವಿಕ ಮಾತನಾಡಿ, ಭಾರತೀಯ ಜನತಾ ಪಕ್ಷ 18 ಕೋಟಿ ಕಾರ್ಯಕರ್ತರೊಂದಿಗೆ ವಿಶ್ವದ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದು, ಅಧಿಕಾರಕ್ಕಾಗಿ ಕೆಲಸ ಮಾಡದೇ ಜನ ಸೇವೆಯ ಸಂಕಲ್ಪದೊಂದಿಗೆ ಕೆಲಸ ಮಾಡುವ ಮತ್ತು ಕಾಯಕರ್ತರ ಹಿತ ಬಯಸುವ

ಅಪರೂಪದ ಪಕ್ಷವಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಸಮೃದ್ಧ ಭಾರತ ನಿರ್ಮಾಣದ ಸಂಕಲ್ಪ ಸಾಕಾರಗೊಳ್ಳುತ್ತಿದೆ ಎಂದು ಹೇಳಿದರು. ಮಂಡಲ ಅಧ್ಯಕ್ಷರಾದ ರಾಮಶೆಟ್ಟಿ ಪನ್ನಾಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಬೀದರ ಉತ್ತರ ಶಾಸಕರು ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿಗಳಾದ ಡಾ.ಶೈಲೇಂದ್ರ ಬೆಲ್ದಾಳೆ, ಬಸವಕಲ್ಯಾಣ ಶಾಸಕ ಶರಣು ಸಲಗರ, ಹುಮನಾಬಾದ ಶಾಸಕ ಸಿದ್ದು ಪಾಟೀಲ, ವಿಧಾನ ಪರಿಷತ್ ಸದಸ್ಯ ಮಾರುತಿರಾವ ಮೂಳೆ, ವಿಭಾಗ ಸಹ ಪ್ರಭಾರಿ ಶರಣಪ್ಪ ತಳವಾರ, ಪ್ರಶಿಕ್ಷಣ ವರ್ಗ ರಾಜ್ಯ ಸಂಚಾಲಕ ರಾಜಶೇಖರ ನಾಗಮೂರ್ತಿ, ಮುಖಂಡರಾದ ಶಿವರಾಜ ಗಂದಗೆ, ಬಾಬುರಾವ ಮದಕಟ್ಟಿ, ಮಾರುತಿ ಚವ್ಹಾಣ, ಧೊಂಡಿಬಾ ನರೋಟೆ, ಗುಂಡಪ್ಪ ಬಿರಾದಾರ, ಸತೀಷ ಪಾಟೀಲ, ಗುರುನಾಥ ಜ್ಯಾಂತಿಕರ್, ಬಾಬುರಾವ ಕಾರಬಾರಿ, ಅರಹಂತ ಸಾವಳೆ, ಕಿರಣ ಪಾಟೀಲ, ಮಹಾದೇವ ಹೊಸೂರೆ, ಮಹೇಶ್ವರ ಸ್ವಾಮಿ, ಶಿವರಾಜ ಅಲ್ಮಾಜೆ, ಶಕುಂತಲಾ ಬೆಲ್ದಾಳೆ, ವಿಜಯಲಕ್ಷ್ಮೀ ಕೌಟಗೆ, ಬಸವರಾಜ ಕನ್ನಾಳೆ, ಖಂಡೋಬಾ ಕಂಗಟೆ, ಪ್ರವೀಣ ಕಾರಬಾರಿ, ಶಿವಾಜಿರಾವ ಪಾಟೀಲ ಮುಂಗನಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಾಲಾ ಮಕ್ಕಳಿಗೆ ವಚನ ಕಂಠಪಾಠ ಹಾಗೂ ವಚನ ಗಾಯನ ಸ್ಪರ್ಧೆ



• ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ

ಇದೇ 20ರಂದು ನಡೆಯಲಿರುವ ಬಸವ ಜಯಂತಿ ಕಾರ್ಯಕ್ರಮದ ನಿಮಿತ್ತವಾಗಿ ಶಾಲಾ ಮಕ್ಕಳಿಗೆ ವಚನ ಕಂಠಪಾಠ ಸ್ಪರ್ಧೆ ಹಾಗೂ ವಚನ ಗಾಯನ ಸ್ಪರ್ಧೆಯನ್ನು ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರದ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದೆ.

ನಾಲ್ಕನೇ ವರ್ಗದಿಂದ ಏಳನೇ ವರ್ಗದ ವಿದ್ಯಾರ್ಥಿಗಳು ವಚನ ಕಂಠ ಪಾಠ ಸ್ಪರ್ಧೆಯಲ್ಲಿ ಹಾಗೂ ಎಂಟನೇ ತರಗತಿಯಿಂದ ಹತ್ತನೇ ತರಗತಿ ವಿದ್ಯಾರ್ಥಿಗಳು ವಚನ ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.

ಆಸಕ್ತರು ತಮ್ಮ ಹೆಸರನ್ನು ಸುಭಾಷ ಹಡಪದ (8197709764) ಬಸವರಾಜ ನಂದಿಹಾಳ ( 9916402368) ಅಥವಾ ಬಸವೇಶ್ವರ ದೇವಸ್ಥಾನದಲ್ಲಿರುವ ಪ್ರಾಧಿಕಾರ ಕಚೇರಿಯಲ್ಲಿ ಹೆಸರನ್ನು ನೋಂದಾಯಿಸಬೇಕು.

ಎಲ್ಲಾ ಸ್ಪರ್ಧೆಗಳು ದೇವಾಲಯದ ಆವರಣದಲ್ಲಿರುವ ಪ್ರಾಧಿಕಾರದ ಕಚೇರಿಯಲ್ಲಿ ಎ 18ರಂದು ಬೆಳಿಗ್ಗೆ10ಗಂಟೆಗೆ ಹಮ್ಮಿಕೊಳ್ಳಲಾಗುವುದು ಎಂದು ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಬೇಕೆಂದು ಶ್ರೀ ಚನ್ನಬಸವೇಶ್ವರ ಪ್ರತಿಷ್ಠಾನದ ಸಂಚಾಲಕರು ಹಾಗೂ ಸಾಹಿತಿಗಳಾದ ವಿವೇಕಾನಂದ ಕಲ್ಯಾಣಶೆಟ್ಟಿ ಮನವಿ ಮಾಡಿಕೊಂಡಿದ್ದಾರೆ.

# ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಷಣ್ಮುಖಪ್ಪ ಅಂಬಲಿ ಭಾಜನ



• ಮಲ್ಲಮ್ಮ ನುಡಿ ವಾರ್ತೆ, ಬಸವನಬಾಗೇವಾಡಿ

ಕೋರವಾರದ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕೊಡ ಮಾಡುವ ರಾಜ್ಯ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕ ಷಣ್ಮುಖಪ್ಪ ಶ್ರೀ ಅಂಬಲಿ ಭಾಜನರಾಗಿದ್ದಾರೆ. ಪ್ರಶಸ್ತಿಯನ್ನು ಇದೇ 19ರಂದು ಕೊರವಾರ ಗ್ರಾಮದಲ್ಲಿ ಹಮ್ಮಿಕೊಂಡ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತೋತ್ಸವ ಸಮಾರಂಭದಲ್ಲಿ ಪ್ರದಾನ ಮಾಡಲಾಗುವುದು ಎಂದು ಎಂದು ಪ್ರಶಸ್ತಿ ಪ್ರದಾನ ಸಮಿತಿಯ ಅಧ್ಯಕ್ಷ ಅರುಣ ಕುರುವಾರ್ ತಿಳಿಸಿದ್ದಾರೆ.

# ಬೃಹತ್ ಮಧ್ಯಮ ಕೈಗಾರಿಕೆ ಸಚಿವರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಏಪ್ರಿಲ್ 14 ರಂದು ಬೆಳಿಗ್ಗೆ 4.45 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಬೆಳಿಗ್ಗೆ 6 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ವಿಜಯಪುರಕ್ಕೆ ಪ್ರಯಾಣಿಸುವರು.

# ಕೊಳೆತ ಸ್ಥಿತಿಯಲ್ಲಿ ಎರಡು ಮೃತದೇಹ ಪತ್ತೆ; ಕೊಲೆಯ ಶಂಕೆ



• ಮಲ್ಲಮ್ಮ ನುಡಿವಾರ್ತೆ, ಕುಕನೂರ

ತಾಲೂಕಿನ ಮಸಬಹಂಚಿನಾಳ ಗ್ರಾಮದ ಎನ್ ಎಚ್ 367 ಗೆ ಹೊಂದಿಕೊಂಡಿರುವ ಕುಡಿಯುವ ನೀರು ಪೈಪ್ ಲೈನ್ ಗಾಗಿ ತೆಗೆದಿರುವ ತಗ್ಗುಗಳಲ್ಲಿ ಕೊಳೆತ ಸ್ಥಿತಿಯಲ್ಲಿ ಎರಡು ಶವಗಳು ಪತ್ತೆಯಾಗಿದ್ದು ಕೊಲೆಯ ಶಂಕೆ ವ್ಯಕ್ತವಾಗಿದೆ.

ಸೋಮವಾರ ಬೆಳಿಗ್ಗೆ ಎರಡು ಅಪರಿಚಿತ ಪುರುಷರ ಶವಗಳು ಪತ್ತೆಯಾಗಿದ್ದು, ಸಾರ್ವಜನಿಕರಲ್ಲಿ ತೀವ್ರ ಆತಂಕ ಮೂಡಿಸಿದೆ. ಮೃತರ ದೇಹದ ಮೇಲೆ ತೀವ್ರ

ಸ್ವರೂಪದ ಗಾಯದ ಗುರುತುಗಳಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಬೇರೆಲ್ಲೋ ಕೊಲೆ ಮಾಡಿ ಸಾಕ್ಷ್ಯ ನಾಶಪಡಿಸುವ ಉದ್ದೇಶದಿಂದ ಇಲ್ಲಿ ತಂದು ಬಿಸಾಡಿರುವ ಸಾಧ್ಯತೆ ಹೆಚ್ಚಿದೆ,ಮಾಹಿತಿ ತಿಳಿಯುತ್ತಿದ್ದಂತೆಯೇ ಕುಕನೂರು ಠಾಣೆಯ ಪೊಲೀಸ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಶವಗಳು ಸುಮಾರು 3 ರಿಂದ 4 ದಿನಗಳಷ್ಟು ಹಳೆಯದಾಗಿರಬಹುದು ಎಂದು ಅಂದಾಜಿಸಲಾಗಿದೆ. ಮೃತರ ಗುರುತು ಪತ್ತೆಯಾಗಿದ್ದು, ಮೃತ ರುದ್ರೇಶ್ ಗಂಗಾವತಿ (ವಯಸ್ಸು –23ವರ್ಷ ) ರವಿ ರಾಮಣ್ಣ ತಟ್ಟಿ (ವಯಸ್ಸು –32ವರ್ಷ) ಇವರಿಬ್ಬರು ಕುಕನೂರು ನಿವಾಸಿಗಳೆಂದು ಎಂದು ತಿಳಿದು ಬಂದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಇಂದು ಬೆಳಿಗ್ಗೆ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಸ್ಥಳೀಯರು, ಗುಂಡಿಯಿಂದ ವಾಸನೆ ಬರುತ್ತಿರುವುದನ್ನು ಗಮನಿಸಿದ್ದಾರೆ. ಹತ್ತಿರ ಹೋಗಿ ನೋಡಿದಾಗ ಕೊಳೆತ ಸ್ಥಿತಿಯಲ್ಲಿದ್ದ ಎರಡು ಶವಗಳು ಕಂಡುಬಂದಿವೆ. ತಕ್ಷಣವೇ ಸಾರ್ವಜನಿಕರು ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಶಾಸಕ ಬಸವರಾಜ ರಾಯರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಂತರ ಮಾತನಾಡಿದವರು ಇದು ಒಂದು ಹೇಯ ಕೃತವಾಗಿದ್ದು ಪೊಲೀಸರು ತನಿಖೆಯನ್ನು ಚುರುಕುಗೊಳಿಸುವಂತೆ ತಿಳಿಸಿದ್ದು ಆದಷ್ಟು ಬೇಗನೇ ಆರೋಪಿಗಳನ್ನು ಹಿಡಿದು ತಪ್ಪಿತಸ್ತರಿಗೆ ಕಠಿಣ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದೇನೆ ಎಂದು ಹೇಳಿದರು.

ಇನ್ನು ಸುದ್ದಿ ತಿಳಿತಿದಂತೆ ಮೃತರ ಕುಟುಂಬದಲ್ಲಿ ದುಃಖದ ಕಟ್ಟೆಯು ಒಡೆದಿದ್ದು ಮೃತರ ಕುಟುಂಬಗಳ ಆಕ್ರಂದನ ಮುಗಿಲುಮುಟ್ಟಿದೆ.

# ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆ ನಾಮಪತ್ರ ಸಲ್ಲಿಕೆ



• ಮಲ್ಲಮ್ಮ ನುಡಿ ವಾರ್ತೆ, ಕುರುಗೋಡು

ಕುರುಗೋಡು ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆ ಏಪ್ರಿಲ್ 19 ರಂದು ಸರ್ಕಾರಿ ಬಾಲಕರ ಪ್ರೌಢ ಶಾಲೆ ಕುರುಗೋಡು ನಲ್ಲಿ ನಡೆಯಲಿದೆ.

ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ 2026–2031ರ ವರೆಗೆ ನಿರ್ದೇಶಕರ ಚುನಾವಣೆಗೆ ಇಂದು ಹಿತರಕ್ಷಣಾ ವೇದಿಕೆ ತಂಡದ ವತಿಯಿಂದ ಶಿಕ್ಷಕರಾದ ಸಿ. ನಿಂಗಪ್ಪ, ಗುಂಡಪ್ಪನವರ ನಾಗರಾಜ, ತುಕಾರಾಮ ಗೊರವ, ಶಿವಶಂಕರ ಜಿ, ಶೇಕ್ಷಾವಲಿ ಪಿ, ಮಹಿಳಾ

ಮೀಸಲಾತಿಯಲ್ಲಿ ಶಾಂತಕುಮಾರಿ, ನುಸ್ರತ್ ಉನ್ನಿಸಾ

ಪಾರ್ವತಮ್ಮ ಕೆ ಅವರು 135 ಕ್ಕೂ ಹೆಚ್ಚು ಶಿಕ್ಷಕರ ಸಮ್ಮುಖದಲ್ಲಿ ಚುನಾವಣೆ ಅಧಿಕಾರಿ ಡಿ. ಎಂ

ಮಲ್ಲಿಕಾರ್ಜುನ ಹಾಗೂ ಸಹಾಯಕ ಚುನಾವಣೆ ಅಧಿಕಾರಿ ಚಿನ್ನಬೋರನಾಯಕ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಚುನಾವಣೆ ಏಪ್ರಿಲ್ 19 ರಂದು ಬೆಳಿಗ್ಗೆ 9.00 ರಿಂದ ಸಂಜೆ 5.00 ಗಂಟೆಯವರೆಗೆ ನಡೆಯಲಿದೆ ಹಾಗೂ ಸಂಜೆ 5.00 ರ ನಂತರ ಎಣಿಕೆ ಪ್ರಕ್ರಿಯೆ ನಡೆದು ಫಲಿತಾಂಶ ಘೋಷಣೆ ಮಾಡಲಾಗುತ್ತದೆ ಎಂದು ಚುನಾವಣೆ ಅಧಿಕಾರಿ ಡಿ. ಎಂ. ಮಲ್ಲಿಕಾರ್ಜುನ ತಿಳಿಸಿದರು.

# ಪ್ರಧಾನ ಮಂತ್ರಿ 15 ಅಂಶ ಕಾರ್ಯಕ್ರಮದ ಅನುಷ್ಠಾನದಲ್ಲಿ ನಿರ್ಲಕ್ಷ್ಯ ಬೇಡ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಅಲ್ಪಸಂಖ್ಯಾತರ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಎಲ್ಲಾ ಇಲಾಖೆಗಳು ಹೆಚ್ಚಿನ ಆದ್ಯತೆ ನೀಡಬೇಕು. ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ನಿರ್ಲಕ್ಷ್ಯ ಬೇಡ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷ ಯು. ನಾಸೀರ್ ಅಹ್ಮದ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮವು ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಪಾರ್ಸಿ ಹಾಗೂ ಬೌದ್ಧ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ರೂಪಿಸಲಾದ ಪ್ರಮುಖ ಯೋಜನೆಯಾಗಿದೆ. ಈ ಯೋಜನೆಗಳಡಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಉಚಿತ ಪರೀಕ್ಷಾ ಪೂರ್ವ ತರಬೇತಿ, ಸ್ವಯಂ ಉದ್ಯೋಗಕ್ಕಾಗಿ ಸಾಲ ಸೌಲಭ್ಯ ಸೇರಿದಂತೆ ವಿವಿಧ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪುವಂತೆ



ಆಯಾ ಇಲಾಖಾ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಕೊಪ್ಪಳ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಸಾಧಿಸಿರುವ ಪ್ರಗತಿ ಪರಿಶೀಲಿಸಿದ ಅಧ್ಯಕ್ಷರು ನಿಗದಿತ ಗುರಿಯಂತೆ ಪ್ರಗತಿ ಸಾಧನೆಗೆ ವಿಳಂಬವಾಗುತ್ತಿರುವ ಯೋಜನೆಗಳನ್ನು ಆದ್ಯತೆ ಮೇರೆಗೆ ತ್ವರಿತವಾಗಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು. ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ವಿಶೇಷ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ನಿವೇಶನ, ಮನೆಗಳ ಹಂಚಿಕೆ, ಗಂಗಾ ಕಲ್ಯಾಣ, ಸ್ವಯಂ ಉದ್ಯೋಗ ಯೋಜನೆಗಳು ಸೇರಿದಂತೆ ವಿವಿಧ ಇಲಾಖೆಗಳ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸಲು ಇಲಾಖಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜೊತೆ ಸಮನ್ವಯ ಸಭೆ ನಡೆಸಿ 6 ವರ್ಷದ ಮಕ್ಕಳ ಸಮಗ್ರ ಸಮೀಕ್ಷೆ ನಡೆಸಬೇಕು. ಶಾಲೆಯಲ್ಲಿರುವ 6 ವರ್ಷದ ಮಕ್ಕಳ ಸಂಖ್ಯೆ ಲಭ್ಯವಿದ್ದರೂ ಶಾಲೆಯಿಂದ ಅನೇಕ ಮಕ್ಕಳು ಹೊರಗುಳಿದಿರುವ ಸಾಧ್ಯತೆಯನ್ನು ಅಲ್ಲಗಳೆಯುವಂತಿಲ್ಲ. ರಾಜ್ಯದಲ್ಲಿ ಆರು ವರ್ಷದ ಮಕ್ಕಳ ನಿಖರ ದತ್ತಾಂಶ ಸಂಗ್ರಹಣೆ ಇಲ್ಲದಿರುವ ಹಿನ್ನೆಲೆಯಲ್ಲಿ ಕಳೆದ ಒಂದು ವರ್ಷದಿಂದ ಮಾಹಿತಿ ಸಂಗ್ರಹಣೆಗೆ ಪ್ರಯತ್ನ ನಡೆಯುತ್ತಿದೆ. 100 ಮಕ್ಕಳಲ್ಲಿ 6 ವರ್ಷದವರು ಇದ್ದರೆ ಅದರಲ್ಲಿ ಸುಮಾರು 80 ಮಕ್ಕಳು ಮಾತ್ರ ಶಾಲೆಗೆ ಸೇರಿರುವ ಸಾಧ್ಯತೆ ಇದೆ. ಆದರೆ ಶಾಲೆಯಲ್ಲಿ ಇಲ್ಲದ ಉಳಿದ ಮಕ್ಕಳ ನಿಖರ ಸಂಖ್ಯೆಯ ಮಾಹಿತಿ ಇದುವರೆಗೆ ಲಭ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ಸಾಕ್ಷರತಾ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಿ ಅಗತ್ಯ ಕಾರ್ಯಯೋಜನೆ ರೂಪಿಸಿ ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಯೋಜನೆಗಳ ಅನುಷ್ಠಾನ ಹಾಗೂ ಸರ್ಕಾರದ ಸೌಲಭ್ಯಗಳು ಅಲ್ಪಸಂಖ್ಯಾತರಿಗೆ ಸಮರ್ಪಕವಾಗಿ ತಲುಪುತ್ತಿರುವ ಬಗ್ಗೆ ಸುದೀರ್ಘ ಸಭೆ ನಡೆಸಿ ಸಂಬಂಧಿಸಿದ ಇಲಾಖೆಗಳೊಂದಿಗೆ ಪರಾಮರ್ಶೆ ಮಾಡಲಾಗಿದೆ ಎಂದು ತಿಳಿಸಿದರು.

ಸಾಮಾಜಿಕ ಜಾಲತಾಣಗಳಲ್ಲಿ ಅಸಭ್ಯ ಅಥವಾ ಅಪ್ರಸ್ತುತ ಸಂದೇಶಗಳನ್ನು, ದ್ವೇಷ ಭಾಷಣದಂತಹ ವಿಡಿಯೋಗಳ ಬಗ್ಗೆ ಗಮನ ಹರಿಸಿ. ಸಮಾಜದ ಶಾಂತಿ ಕದಡುವ ಯಾವುದೇ ಸನ್ನಿವೇಶಗಳಿಗೆ ಆಸ್ಪದ ಕೊಡಬೇಡಿ. ಜಿಲ್ಲೆಯಲ್ಲಿ ಎಲ್ಲ ಧರ್ಮಗಳ ನಡುವಿನ ಸಾಮರಸ್ಯ, ಕೋಮು ಗಲಭೆ ರಹಿತ ಹಬ್ಬಗಳ ಆಚರಣೆ ಹೆಮ್ಮೆಯ ವಿಷಯ. ಈ ನಿಟ್ಟಿನಲ್ಲಿ ಜಿಲ್ಲೆಯ ಪೊಲೀಸರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಇದು ಹೀಗೆಯೇ ಮುಂದುವರೆಯಲಿ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ಭವಿಷ್ಯದಲ್ಲಿ ಉತ್ತಮ ಉದ್ಯೋಗಾವಕಾಶವಿರುವ ವೃತ್ತಿ ಆಧಾರಿತ ತರಬೇತಿಗಳನ್ನು ಅರ್ಹರಿಗೆ ನೀಡಿ. ಸಾಗರದಾಚೆಗಿನ ಉದ್ಯೋಗವಕಾಶಗಳ ಬಗ್ಗೆ ಜಾಗೃತಿ ಮೂಡಿಸಿ, ನಿಮ್ಮಲ್ಲಿ ಆ ಸೌಲಭ್ಯವಿಲ್ಲದಿದ್ದಲ್ಲಿ, ಸೌಲಭ್ಯವಿರುವೆಡೆ ಕಳಿಸಿ ವೃತ್ತಿ ಕೌಶಲ್ಯ ತರಬೇತಿ ನೀಡಿ. ಅಲ್ಪಸಂಖ್ಯಾತರು ಮಾತ್ರವಲ್ಲದೆ ಎಲ್ಲ ವರ್ಗದ ಅರ್ಹರಿಗೂ ಉದ್ಯೋಗವಕಾಶಗಳನ್ನು ಒದಗಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಬೇಕು. ಸ್ವ ಉದ್ದಿಮೆ ಸ್ಥಾಪಿಸಲು ತರಬೇತಿಯೊಂದಿಗೆ ಬ್ಯಾಂಕ್‌ಗಳಿಂದ ಸಾಲ ಸೌಲಭ್ಯವನ್ನೂ ಒದಗಿಸಬೇಕು ಎಂದು ಅವರು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರಿ, ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ, ಡಿಎಫ್‌ಓ ನಿರ್ಮಲಾ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ ಕೃಷ್ಣಮೂರ್ತಿ, ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮ ಜಿಲ್ಲಾ ಸ್ಥಾಯಿ ಸಮಿತಿ ಸದಸ್ಯರಾದ ಪ್ರಶಾಂತ ದೇಸಾಯಿ, ಮೊಹ್ಮದ ನಜಿರುದ್ದೀನ ಮೂಲಿಮನಿ, ಮಹಬೂಬ ಪಾಷಾ ಮಾನ್ವಿ, ಎಂ.ಡಿ.ಸಿರಾಜ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅಜ್ಮೀರ ಅಲಿ, ಡಿಎಚ್‌ಓ ಡಾ.ಲಿಂಗರಾಜು ಟಿ., ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ನಮಗೆ ವಾಸಿಸಲು ಮನೆ ನೀಡಿ ಇಲ್ಲ ವಿಷ ಕೊಡಿ

# ತಲೆಯ ಮೇಲೆ ಚಪ್ಪಲಿ ಇಟ್ಟು ವಿನೂತನ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ, ಕಾರವಾರ

ಜಿಲ್ಲಾಧಿಕಾರಿಯವರು ಹೋರಾಟ ಸಮಿತಿಯ ಬೇಡಿಕೆ ಬಗ್ಗೆ ಒಂದು ವಾರದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ದಾಂಡೇಲಿಗೆ ಕಳಿಸಿ ಕ್ರಮವಹಿಸಲಾಗುವುದು ಮತ್ತು ಮುಂದೆ ನಾನು ಭೇಟಿ ನೀಡುವ ಭರವಸೆ ನೀಡಿದರು.

ದಾಂಡೇಲಿ ಸಮಗ್ರ ಅಭಿವೃದ್ಧಿ ಹೋರಾಟ ಸಮೀತಿಯಿಂದ ನಿರಂತರ ಹೋರಾಟ ಮಾಡುವ ಮೂಲಕ ಜಿ+ಟು ಕೇಂದ್ರ ಸರ್ಕಾರದ ಪ್ರದಾನ ಮಂತ್ರಿ ಅವಾಜ ಯೋಜನೆ ಮತ್ತು ರಾಜ್ಯ ಸರ್ಕಾರದ ಆಶ್ರಯ ಯೋಜನೆ ಯಡಿಯಲ್ಲಿ 1106 ಮನೆಗಳಗಳ ಕಾಮಗಾರಿ ಪ್ರಾರಂಭ ವಾಗಿದ್ದು ಅದರಲ್ಲಿ ಕೇವಲ 108 ಮನೆಗಳನ್ನು ಕೊಟ್ಟು 84 ಮನೆಗಳ ಕಾಮಗಾರಿ ಮುಗೀದ್ದು ಮನೆ ಗಳನ್ನು ವಿತರಣೆ ಮಾಡುತ್ತಿಲ್ಲ. 998 ಇನ್ನುಳಿದ ಮನೆಗಳು ಇಲ್ಲಿಯವರೆಗೂ ಕಾಮಗಾರಿಯನ್ನು ಪ್ರಾರಂಭಿಸಿಲ್ಲ. ನಮ್ಮಂತ ಬಡವರಿಗೆ ಮನೆ ನೀಡದೆ ನಿರಂತರ ಅನ್ಯಾಯ ಮಾಡುತ್ತಿದ್ದಾರೆ. ಈ ದುರಹಂಕಾರದ ಅವ್ಯವಸ್ಥೆಯ ವಿರುದ್ಧ ಇಂದು ಕಾರವಾರ ಜಿಲ್ಲಾಧಿಕಾರಿ ಕಚೇರಿಯ ಮುಂದೆ ಪಾದರಕ್ಷೆ ತಲೆಯ ಮೇಲೆ ಹೊತ್ತು ವಿನೂತನ ಪ್ರತಿಭಟನೆ? ಬೇಡಿಕೆ ಈಡೇರಿಕೆಗೆ ಹೋರಾಟ ತೀವ್ರ ಕಾರವಾರದಲ್ಲಿ ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ತಾಲೂಕಿನ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದೆ ಇರುವ ಹಿನ್ನೆಲೆಯಲ್ಲಿ ದಾಂಡೇಲಿ ಸಮಗ್ರ ಹೋರಾಟ ಸಮಿತಿವತಿಯಿಂದ ಇಂದು



ಬೆಳಿಗ್ಗೆ ಇಂದ ಸಂಜೆಯವರೆಗೆ ಜಿಲ್ಲಾಧಿಕಾರಿ ಕಚೇರಿ ಎದುರು ವಿನೂತನ ರೀತಿಯಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಯಿತು. ಪ್ರತಿಭಟನಾಕಾರರು ತಲೆಯ ಮೇಲೆ ಪಾದರಕ್ಷೆಗಳನ್ನು ಹೊತ್ತು ಪ್ರತಿಭಟನೆ ನಡೆಸಿದರು. ಹಲವು ವರ್ಷಗಳಿಂದ ಸ್ಥಳೀಯ ಕಚೇರಿಗಳಿಗೆ ಅಲೆದಾಡಿ ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಸತತವಾಗಿ ಪ್ರಯತ್ನಿಸಿದರೂ ಫಲ ಸಿಗದೆ ಇದ್ದಾಗ ತಮ್ಮ ನೋವನ್ನು ತೋಡಿಕೊಂಡಿ–ದ್ದಾರೆ ವಿನೂತನ ಪ್ರತಿಭಟನೆ ಮಾಡಿ ಪಾದರಕ್ಷೆಗಳು ಹರಿದು ಹೋಗಿರುವುದನ್ನು ಸಂಕೇತವಾಗಿ ತೋರಿಸಲು ಈ ರೀತಿಯ ವಿಶಿಷ್ಟ ಪ್ರತಿಭಟನೆ ನಡೆಸಲಾಗಿದೆ ಎಂದು ಪ್ರತಿಭಟನಾ ಕಾರರು ತಿಳಿಸಿದರು ಈ ವೇಳೆ ಮಹಿಳೆಯರು ತೀವ್ರ ಆಕ್ರೋಶ ವ್ಯಕ್ತಪಡಿಸಿ ಜನರ ಸಮಸ್ಸೆಗಳನ್ನು ಕಡೆಗಣಿಸುತ್ತಿರುವ ರಾಜಕಾರಣಿಗಳ ವಿರುದ್ಧ ಶಾಪ ಹಾಕಿ ಆಕ್ರಂದನ.

ನಮಗೆ ವಾಸಿಸಲು ಮನೆ ಇಲ್ಲ ವಿಷ ಕೊಡಿ ಎಂದು ಜಿಲ್ಲಾಧಿಕಾರಿ ಮೇಡಮ್ ಅವರ ಹೇಳಿಕೊಂಡು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ತಮ್ಮ ಬೇಡಿಕೆಗಳನ್ನು ತಕ್ಷಣ ಈಡೇರಿಸದಿದ್ದರೆ ಅನಿರ್ದಿಷ್ಟಾವಧಿ ಹೋರಾಟ ನಡೆಸುವುದಾಗಿ ಎಚ್ಚರಿಸಿದರು

ಮುಖ್ಯ ಬೇಡಿಕೆಗಳು ಅಶ್ರೇಯ ಯೋಜನೆಯಡಿ ಮಂಜೂರಾದ 1106 ಮನೆಗಳ ಕಾಮಗಾರಿ ಸಂಪೂರ್ಣವಾಗಿ ನಿಂತಿದ್ದು ಅದನ್ನು ಪುನರಾರಂಭಿಸಲು ವಿಶೇಷ ಅನುದಾನ ಬಿಡುಗಡೆ ಮಾಡಬೇಕು.

ಗ್ರಹ ಮಂಡಳಿ ಯವರು ಜಿಲ್ಲೆಯಲ್ಲಿ ಸುಮಾರು 22, 525 ನಿವೇಶನ ರಹಿತರಿಗೆ ನಿವೇಶನ ಅರ್ಜಿ ಅದರ ಜೊತೆಗೆ ಸುಮಾರು ಎರಡು ಕೋಟಿ 40 ಲಕ್ಷ ರೂಪಾಯಿ 2013 ಸಂಗ್ರಹಿಸಿಕೊಂಡು ಇಲ್ಲಿಯವರೆಗೆ ನಿವೇಶ ನೀಡಲು ಯಾವುದೇ ಕ್ರಮವಹಿಸುತ್ತಿಲ್ಲ ದಾಂಡೇಲಿ ಗ್ರಹ ಮಂಡಳಿಗಾಗಿ ಹತ್ತು ಎಕರೆ ನೀಡುವ ಭೂಮಿಯ ವಿಕರಣ ಹುಡುಕಿದೆ ಹಲವಾರು ಬಾರಿ ನಗರ ಸಭೆಯವರಿಗೆ ಲಿಖಿತ ಮಾಹಿತಿ ನೀಡಿದರು ಕ್ರಮವಹಿಸುತ್ತಿಲ್ಲ. ಈ ಕುರಿತು ತಕ್ಷಣ ಕ್ರಮ ಕೈಗೊಳ್ಳಬೇಕು.

ದಾಂಡೇಲಿ ತಾಲೂಕಿನ ಭೂ ಹಗರಣ ಮತ್ತು ಆಸರೆಯ ಪಟಾ ಕುರಿತು ಲೋಕಾಯುಕ್ತ ತನಿಖೆ ನಡೆಸಬೇಕು. ಅನೇಕ ಬಾರಿ ನಗರಸಭೆಯವರ ಗಮನಕ್ಕೆ ತಂದ್ರು ಕ್ರಮವಹಿಸುತ್ತಿಲ್ಲ.

ಹೊಸದಾಗಿ ಘೋಷಿಸಿದ 55 ತಾಲೂಕುಗಳಿಗೆ ತಾಲೂಕು ಮಟ್ಟದ ಕಚೇರಿಗಳನ್ನು ಪ್ರಾರಂಭಿಸಬೇಕು.

ದಾಂಡೇಲಿಯ ಇ.ಎಸ್.ಐ ಆಸ್ಪತ್ರೆಯ ವೈದ್ಯರ ಕೊರತೆಯನ್ನು ನಿವಾರಿಸಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಬೇಕು.

ಈ ಸಂದರ್ಭದಲ್ಲಿ ದಾಂಡೇಲಿ ಹೋರಾಟ ಸಮೀತಿಯ ಅಧ್ಯಕ್ಷರಾದ ಅಕ್ರಂ ಖಾನ್, ಡಾ: ಎಸ್, ಎಸ್, ಪಾಟೀಲ್ (ಸಂಪಾದಕರು ವಿಶ್ವ ದರ್ಶನ ಪತ್ರಿಕೆ ಹಾಗು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ರಾಜ್ಯ ಉಪಾಧ್ಯಕ್ಷರು), ಸಂಗನಗೌಡ ಹೂವಣ್ಣವರ (ಅಧ್ಯಕ್ಷರು ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಧ್ವನಿಸಂಘ), ಶಿವಕುಮಾರ ಎಸ್. ಪಾಟೀಲ್ (ಪ್ರಧಾನ ಕಾರ್ಯದರ್ಶಿಗಳು), ಬಸವರಾಜು (ಬಿ. ವಿನ್ಯೂಸ್, ಬೆಳಗಾವಿ) ಸೇರಿದಂತೆ ಅಶೋಕ್ ಪಾಟೀಲ್ ಸಾಮಾಜಿಕ ಹೋರಾಟಗಾರರು, ಬಸವರಾಜ್ ಶಿವಾನಂದ್ ಗಗ್ಗರಿ, ಸಾಮಾಜಿಕ ಹೋರಾಟಗಾರರು, ಪ್ರವೀಣ್ ಕೊಠಾರಿ, ಶಹೆಜಾದಿ ಕುಲಶಾಪುರ, ಮುಜಿಬಾ ಛಬ್ಬಿ, ಮಂಜು ಪಂತೋಜಿ, ವಿನಾಯಕ ನಾಯಕ, ದುರ್ಗಮ್ಮ ಬಂಡೀವಡ್ಡರ ಶಮಿಮ್ ಕೊರ್ಪಲಿ, ಬಾಬು ಚಟ್ಟರ್ಗಿ ಇನಾಯತ್ ಶೇಖ್, ಗಣಪತಿ ಜೇಂಗ್ಡೆ, ರಾಜೇಶ್ ಪೈ, ಸೇರಿದಂತೆ ವಿವಿಧ ಸಂಘಟನೆಗಳ ಹೋರಾಟಗಾರರು ಮುಖಂಡರು ಹಾಗು ಮಹಿಳೆಯರು ಭಾಗವಹಿಸಿದ್ದರು.

# ಶ್ರೀ ಮಹಾಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವ



• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಇದೇ 12 ರಿಂದ 24 ರವರೆಗೆ ಜರುಗುವ ಮಹಾಲಕ್ಷ್ಮಿದೇವಿ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಜರುಗುವ ಕಾರ್ಯಕ್ರಮಗಳಿಗೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದರ ಮೂಲಕ ದೇವಿಯ ಕೃಪೆಗೆ ಪಾತ್ರರಾಗಬೇಕೆಂದು ತಾಲೂಕಿನ ಸುಕ್ಷೇತ್ರ ಉತ್ನಾಳ ಹಿರೇಮಠದ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಶಿವಪುತ್ರಯ್ಯ ಸ್ವಾಮೀಜಿಗಳು ಹೇಳಿದರು.

ಶ್ರೀ ಮಹಾಲಕ್ಷ್ಮಿ ದೇವಿ ಶಕ್ತಿ ಪೀಠದ ಆವರಣದಲ್ಲಿ ಶ್ರೀ ಮಹಾಲಕ್ಷ್ಮಿ ದೇವಿಯ ಜಾತ್ರಾ ಮಹೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಸಾನಿಧ್ಯ ವಹಿಸಿ ಹಾಗೂ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಗ್ರಾಮಸ್ಥರು ಹಾಗೂ ಸಮಸ್ತ ಸದ್ಭಕ್ತರು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಬೇಕು. ಸ್ವಚ್ಛತೆ ಹಾಗೂ ಶಿಸ್ತು ಪಾಲನೆಗೆ ಹೆಚ್ಚಿನ ಆಧ್ಯತೆಯನ್ನು ನೀಡಬೇಕು. ಜಾತ್ರೆಯು ಎಲ್ಲ ವರ್ಗದ ಜನರನ್ನು ಒಗ್ಗೂಡಿಸುವ ಧಾರ್ಮಿಕ ಸಾಂಸ್ಕೃತಿಕ ಹಬ್ಬ ವಾಗಬೇಕು ಎಂದರು. ಏ.12 ರಿಂದ ಏ.24 ರವರಿಗೆ ಪ್ರತಿ ದಿನ ಪ್ರವಚನಕಾರ ಬಸಯ್ಯ ಸ್ಥಾವರಮಠ ಶಾಸ್ತ್ರಿಗಳಿಂದ ಗರಗದ ಶ್ರೀ ಮಡಿವಾಳೇಶ್ವರ ಶಿವಯೋಗಿಗಳ ಜೀವನ ದರ್ಶನ ಪ್ರವಚನ ನಡೆದು ಬರುತ್ತಿದೆ. ನಿಜಗುಣೇಶ ಹೂಗಾರ ಹಾಗೂ ಚೆನ್ನಯ್ಯ ಸೋಲಾಪುರಮಠ ಇವರುಗಳು ಸಂಗೀತ ಸಾಥ್ ನೀಡುತ್ತಿದ್ದಾರೆ. ಏ.18 ರಂದು ಬಾಗಲಕೋಟೆಯ ಶ್ರೀ ಮಹಾಲಕ್ಷ್ಮಿ ದೇವಿ ಸದ್ಭಕ್ತ ಮಂಡಳಿಯಿಂದ ಸಂಗೀತ , ಸಾಂಸ್ಕೃತಿಕ ಹಾಗೂ ಹಾಸ್ಯ ರಸಮಂಜರಿ ಕಾರ್ಯಕ್ರಮಗಳು. ಏ.20 ರಂದು ಬಸವ ಜಯಂತಿ ಆಚರಣೆ. ಏ.21 ರಂದು ಚಿಕ್ಕ ಮಕ್ಕಳಿಂದ ಸಾಮಾಜಿಕ ಚಟುವಟಿಕಾ ಕಾರ್ಯಕ್ರಮಗಳು. ಏ.22 ರಂದು ಸಾಯಂಕಾಲ 6 ಗಂಟೆಗೆ ಕೃಷಿ ಮೇಳ–ಕೃಷಿ ವಸ್ತು ಪ್ರದರ್ಶನ. ಏ.23 ರಂದು ಬೆಳಿಗ್ಗೆ 8 ಗಂಟೆಗೆ ಜಂಗಮ ವಟುಗಳಿಗೆ ಅಯ್ಯಾಚಾರ ದೀಕ್ಷೆ ಹಾಗೂ ಸದ್ಭಕ್ತರಿಗೆ ಲಿಂಗ ದೀಕ್ಷೆ. ರಾತ್ರಿ 8ಕ್ಕೆ ಶರಣ ಚಿಂತನಾಗೋಷ್ಠಿ. ಏ.24 ರಂದು ಬೆಳಿಗ್ಗೆ ಶ್ರೀ ಮಹಾಲಕ್ಷ್ಮಿ ದೇವಿ ಮೂರ್ತಿಗೆ ಮಹಾರುದ್ರಾಭಿಷೇಕ, ಕುಂಕುಮಾರ್ಚನೆ, ಯಜ್ಞ ಯಾಗಾದಿಗಳು. ಬೆಳಿಗ್ಗೆ 10 ಗಂಟೆಗೆ ಮಹಾಲಕ್ಷ್ಮಿ ದೇವಿ ಪಲ್ಲಕ್ಕಿ ಉತ್ಸವ. ಮಧ್ಯಾಹ್ನ 12 ಗಂಟೆಗೆ ಮುತ್ತೈದೆಯರಿಗೆ ಉಡಿ ತುಂಬುವುದು ಹಾಗೂ ಧರ್ಮಸಭೆ ನಡೆಯಲಿದೆ. ಸಮಾರಂಭಕ್ಕೆ ನಾಡಿನ ನಾನಾ ಸ್ವಾಮೀಜಿಗಳು, ವಿದ್ವಾಂಸರು, ಕಲಾವಿದರು, ರಾಜಕಾರಣಿಗಳು ಆಗಮಿಸಲಿದ್ದಾರೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀಮಠದ ಪೂಜ್ಯ ಶ್ರೀ ಸಂಗಮೇಶ್ವರ ಹಿರೇಮಠ, ತಾಳಿಕೋಟೆಯ ಶ್ರೀ ಘನಮಠೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್. ಎಂ. ಸಜ್ಜನ, ಖ್ಯಾತ ಜಾನಪದ ಕಲಾವಿದೆ ಜ್ಯೋತಿ ಬಳ್ಳಾರಿ, ಸಾಹಿತಿ ಸುಮಂಗಲ ಕೋಳೂರು, ಅನಿತಾ ಸಜ್ಜನ, ಸೋಮಶೇಖರ್ ಸಜ್ಜನ, ವಿವೇಕಾನಂದ ಸಜ್ಜನ, ಬಸಮ್ಮ, ಆರ್ .ಸಿ. ಕಲಬುರ್ಗಿ, ರುದ್ರಮ್ಮ ದೇಸಾಯಿ, ಶೈಲಾ ಅಂಬಕ್ಕನವರ, ಸವಿತಾ ಸಜ್ಜನ ಸೇರಿದಂತೆ ಅನೇಕ ಸದ್ಭಕ್ತರು ಉಪಸ್ಥಿತರಿದ್ದರು. ಜಾತ್ರಾ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಲಾಯಿತು.

# ಕೆಆರ್‌ಎಸ್ ಪಕ್ಷದ ನಾಯಕರ ವಿರುದ್ಧ ಸುಳ್ಳು ಪ್ರಕರಣ : ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕರಾಷ್ಟ್ರಸಮಿತಿ(ಕೆಆರ್‌ಎಸ್) ಪಕ್ಷದಪದಾಧಿಕಾರಿಗಳ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಬಂಧಿಸಿರುವುದನ್ನು ಖಂಡಿಸಿ, ಪಕ್ಷದ ಮುಖಂಡರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್ ಅವರಿಗೆ ಮನವಿ ಸಲ್ಲಿಸಿದರು.

ಪಕ್ಷದಉಪಾಧ್ಯಕ್ಷರಾದಸೋಮಸುಂದರ್ ಅವರನ್ನು ಸುಳ್ಳು ಪ್ರಕರಣದಲ್ಲಿ ಬಂಧಿಸಿರುವುದಾಗಿ ಆರೋಪಿಸಿದ ಕೆಆರ್‌ಎಸ್ ಮುಖಂಡರು, ರಾಜ್ಯ ಉಪಾಧ್ಯಕ್ಷ ಜ್ಞಾನ ಸಿಂಧು ಸ್ವಾಮಿ ಹಾಗೂ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್ ಭಟ್ಟರಹಳ್ಳಿ ಅವರ ಮೇಲೂ ಅನ್ಯಾಯವಾಗಿ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದರು. ಈ ಕ್ರಮವನ್ನು ತೀವ್ರವಾಗಿ ಖಂಡಿಸಿದ ಅವರು, ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಸರ್ಕಾರವೇ ಕಾನೂನು ದುರುಪಯೋಗ ಮಾಡುತ್ತಿದೆ ಎಂದು ಆರೋಪಿಸಿದರು.

ಮನವಿಯಲ್ಲಿ ಮುಖ್ಯಮಂತ್ರಿ ಹಾಗೂ ಗೃಹಮಂತ್ರಿಗಳಿಗೆ ಹಲವು ಪ್ರಶ್ನೆಗಳನ್ನು ಉದ್ಧರಿಸಿ, ಸಾರ್ವಜನಿಕ ಸ್ಥಳಗಳಲ್ಲಿ ವಿಡಿಯೋ ಚಿತ್ರೀಕರಣ ಮಾಡುವುದು ಅಪರಾಧವೇ?, ಸುಳ್ಳು ದೂರು ಆಧರಿಸಿ ಪ್ರಕರಣ ದಾಖಲಿಸುವುದು ನ್ಯಾಯವೇ? ಎಂಬ ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ. ಜೊತೆಗೆ ಃಓಖ ಅಡಿಯಲ್ಲಿ ಪ್ರಕರಣ ದಾಖಲಿಸಲು ಪ್ರಾಥಮಿಕ ತನಿಖೆ ನಡೆಸದೇ ಕ್ರಮ ಕೈಗೊಳ್ಳುತ್ತಿರುವುದರ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ.

ಮಹಿಳಾ ಪೊಲೀಸರ ಮೂಲಕ ಸುಳ್ಳು ದೂರು ದಾಖಲಿಸುವುದಾಗಿ ಆರೋಪಿಸಿ, ಇದು ಸಮಾಜಕ್ಕೆ ತಪ್ಪು ಸಂದೇಶ ನೀಡುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.ಜನಪ್ರತಿನಿಧಿಗಳು ನಾಗರಿಕರ ಅಹವಾಲುಗಳಿಗೆ ಸ್ಪಂದಿಸುವ ಬದಲು ಹಕ್ಕು ಹರಣ ಮಾಡುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಈ ಸಂಬಂಧ ನ್ಯಾಯಸಮ್ಮತ ತನಿಖೆ ನಡೆಸಿ ನಿರಪರಾಧಿಗಳ ಮೇಲಿನ ಪ್ರಕರಣಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿರುವ ಕೆಆರ್‌ಎಸ್ ಪಕ್ಷದ ಮುಖಂಡರು, ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

# ಮೀಸಲಾತಿ ಪ್ರಮಾಣ ಹೆಚ್ಚಳಕ್ಕೆ ಆಗ್ರಹಿಸಿ ಸಿಪಿಐ(ಎಂ) ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪ್ರಮಾಣ ಹೆಚ್ಚಳ ಜಾರಿಗೆ ಒತ್ತಾಯಿಸಿ ಭಾರತ ಕಮ್ಯೂನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಜಿಲ್ಲಾ ಸಮಿತಿಯವರು ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಸಂಸದರ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ಬಳಿಕ ಸಂಸದರಾದ ಇ. ತುಕರಾಂ ಅವರಿಗೆ ಬರೆದ ಮನವಿ ಪತ್ರವನ್ನು ಸಂಸದರ ಕಚೇರಿಯಲ್ಲಿ ಸಿಬ್ಬಂದಿಗೆ ಸಲ್ಲಿಸಿದ ಪಕ್ಷದ ಮುಖಂಡರು, ನ್ಯಾ. ಹೆಚ್. ಎನ್. ನಾಗಮೋಹನ ದಾಸ್ ಆಯೋಗದ ಶಿಫಾರಸುಗಳನ್ನು ಜಾರಿಗೆ ತರುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಬೇಕೆಂದು ಆಗ್ರಹಿಸಿದರು. ಆಯೋಗದ ವರದಿ ಪ್ರಕಾರ ಪರಿಶಿಷ್ಟ ಜಾತಿಗಳಿಗೆ ಶೇ.17 ಹಾಗೂ ಪರಿಶಿಷ್ಟ ಪಂಗಡಗಳಿಗೆ ಶೇ.7 ರಷ್ಟು ಮೀಸಲಾತಿ ಹೆಚ್ಚಳಕ್ಕೆ ಶಿಫಾರಸು ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕರ್ನಾಟಕ ಸರ್ಕಾರ ಈಗಾಗಲೇ ಈ ಶಿಫಾರಸುಗಳನ್ನು ಅಂಗೀಕರಿಸಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿರುವುದರಿಂದ, ಸಂವಿಧಾನದ 9ನೇ ಅನುಸೂಚಿಗೆ ಸೇರಿಸಿ ತ್ವರಿತವಾಗಿ ಜಾರಿಗೆ ತರಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಜೊತೆಗೆ ಒಳ ಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಉಂಟಾಗಿರುವ ಸಮಸ್ಯೆಗಳನ್ನು ಶೀಘ್ರದಲ್ಲೇ ಪರಿಹರಿಸಿ, ಸಾಮಾಜಿಕ ನ್ಯಾಯ ಸಾಧನೆಗೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.

ಇನ್ನೂ, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು, ಬ್ಯಾಕ್‌ಲಾಗ್ ಹುದ್ದೆಗಳನ್ನು ಸಾಮಾನ್ಯ ವರ್ಗಕ್ಕೆ ವರ್ಗಾಯಿಸದಿರುವುದು ಹಾಗೂ ಖಾಸಗಿ ಕ್ಷೇತ್ರದಲ್ಲಿಯೂ ಮೀಸಲಾತಿ ಜಾರಿಗೆ ಕ್ರಮ ಕೈಗೊಳ್ಳಬೇಕೆಂಬ ಬೇಡಿಕೆಗಳನ್ನು ಮುಂದಿಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ಜೆ. ಸತ್ಯಬಾಬು, ಕಾರ್ಯದರ್ಶಿ ಮಂಡಳಿ ಸದಸ್ಯರಾದ ಹೆಚ್.ತಿಪ್ಪಯ್ಯ, ಶಿವಶಂಕರ್, ಜೆ. ಚಂದ್ರಕುಮಾರಿ, ಜೆ. ಚನ್ನಬಸಯ್ಯ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.


# ನಿಷ್ಟಿ ರುದ್ರಪ್ಪ ಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕನ್ನಡ ಸಾಹಿತ್ಯ ಪರಿಷತ್ ಅಖಂಡ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾಗಿರುವ ನಿಷ್ಠಿ ರುದ್ರಪ್ಪನವರ ಕನ್ನಡ ಸಾಹಿತ್ಯ ಕ್ಷೇತ್ರದ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಸಾಹಿತ್ಯ ಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಿರುವುದ ರಿಂದ ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿ ವತಿಯಿಂದ ಸೋಮವಾರ ಡಾಕ್ಟರ್ ರಾಜಕುಮಾರ್ ರಸ್ತೆಯಲ್ಲಿರುವ ಸಾಂಸ್ಕೃತಿಕ ಸಮುಚ್ಚಯದಲ್ಲಿರುವ ‘ನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಿಷ್ಠಿ ರುದ್ರಪ್ಪನವರನ್ನು ಸನ್ಮಾನಿಸ ಲಾಯಿತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ ಕೆ. ಎಂ. ಮಹೇಶ್ವರ ಸ್ವಾಮಿ ರುದ್ರಪ್ಪ ನವರು ಸತತ ಮೂರು ಸಾರಿ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸುವುದರ ಜೊತೆಗೆ ಸ್ವತಃ ಸಾಹಿತಿಗಳು ಕೂಡ ಆಗಿದ್ದಾರೆ ಅವರಿಗೆ ದೊರೆತ ಗೌರವ ಬಳ್ಳಾರಿ ಜಿಲ್ಲೆಗೆ ದೊರೆತ ಗೌರವ ಎಂದು ಅಭಿಪ್ರಾಯಪಟ್ಟರು ಸನ್ಮಾನ ಸಮಾರಂಭದಲ್ಲಿ ಕನ್ನಡ ಸಂಸ್ಕೃತಿ ಇಲಾಖೆಯ ಮಾಜಿ ಅಧಿಕಾರಿ ಚೋರ್ನೂರು ಕೊಟ್ರಪ್ಪ ವಿಶ್ರಾಂತ ಪ್ರಾಂಶುಪಾಲ ಮಲ್ಲಪ್ಪಸಿಎಂ ಗಂಗಾಧರಯ್ಯಯೋಗ ಪಟು ಬಾಣಪುರ ಮಹೇಶ್ ಗೌಡ ವಿ ಎಸ್ ಲಾ ಕಾಲೇಜಿನ ಆಡಳಿತ ಮಂಡಳಿಅಧ್ಯಕ್ಷ ನರೇಂದ್ರಬಾಬು ಸನ್ಮಾನಿತರನ್ನು ಕುರಿತು ಮಾತನಾಡಿದರು ಸಮಿತಿಯ ಪದಾಧಿಕಾರಿಗಳಾದ ಎಚ್ ಕೆ ಗೌರಿಶಂಕರ್ ಹಾಗೂ ಕೋಳೂರು ಚಂದ್ರಶೇಖರ್ ಗೌಡ ಕಾರ್ಯಕ್ರಮ ನಿರ್ವಹಿಸಿದರು ಹುಬ್ಬಳ್ಳಿ ರೈಲ್ವೇ ಯ ಡಿ ಆರ್ ಯು ಸಿ ಸಿ ಸದಸ್ಯ ಕೆಎಂ ಕೊಟ್ರೇಶ್ ಸೋಮಲಿಂಗನಗೌಡ ಪಿ ಬಂಡೆಗೌಡ ಬಿ ಎಂ. ಎರಿಸ್ವಾಮಿ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳಾದ ಚಂದ್ ಬಾಷಾ ಮಂಜುನಾಥ್ ಮುಂತಾದವರು ಭಾಗವಹಿಸಿದ್ದರು.ಸನ್ಮಾನ ಸ್ವೀಕರಿಸಿ ಮಾತನಾಡಿದ ನಿಷ್ಠಿ ರುದ್ರಪ್ಪನವರು ಹಿರಿಯ ಹೋರಾಟಗಾರ ಮಹೇಶ್ವರ ಸ್ವಾಮಿ ಹಾಗೂ ಚೋರ್ನೂರು ಕೊಟ್ರಪ್ಪನವರಿಂದ ಸನ್ಮಾನಿತನಾಗಿ ರುವುದು ಪ್ರಶಸ್ತಿ ಪಡೆದಷ್ಟೇ ಸಂತೋಷವಾಗಿದೆ ಎಂದು ತಿಳಿಸಿ ಸನ್ಮಾನ ಸಮಾರಂಭ ಆಯೋಜಿಸಿದ ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಗೆ ತಿಳಿಸಿದರು .ಎಚ್ ಕೆ ಗೌರಿಶಂಕರ ಸಮಿತಿಯ ಕಾರ್ಯದರ್ಶಿ

# ಹಲ್ಲೆ, ಜಾತಿ ನಿಂದನೆ ಆರೋಪ ಜೀವಭಯದಡಿ ನ್ಯಾಯಕ್ಕಾಗಿ ಮೊರೆ




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಹಲ್ಲೆ, ಜಾತಿ ನಿಂದನೆ ಹಾಗೂ ಜೀವಭಯಕ್ಕೆ ಸಂಬಂಧಿಸಿದ ಗಂಭೀರ ಆರೋಪವೊಂದನ್ನು ವ್ಯಕ್ತಪಡಿಸಿ ಟಿ. ತಿಮ್ಮಪ್ಪ ಅವರು ದೂರು ಸಲ್ಲಿಸಿರುವ ಘಟನೆ ಬೆಳಕಿಗೆ ಬಂದಿದೆ. ಈ ಕುರಿತು ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ದಲಿತ ಸೇನೆಯ ಜಿಲ್ಲಾ ಅಧ್ಯಕ್ಷ ಬಿ. ಮುರಳಿ ಕೃಷ್ಣ ಸುದ್ದಿಗೋಷ್ಠಿಯಲ್ಲಿ ವಿವರ ನೀಡಿದರು.ಟಿ. ತಿಮ್ಮಪ್ಪ ಅವರು ಏಪ್ರಿಲ್ 8ರಂದು ರಾತ್ರಿ ಸುಮಾರು 8:10 ಗಂಟೆಗೆ ಊಳೂರು ಗ್ರಾಮಕ್ಕೆ ಕುಟುಂಬ ಕಾರ್ಯಕ್ರಮದ ನಿಮಿತ್ತ ತೆರಳಿದ್ದರು. ಬಳಿಕ ತಮ್ಮ ಅಳಿಯನೊಂದಿಗೆ ಮಾಟಸೂಗೂರು ಕಡೆಗೆ ಹೊರಟಾಗ, ಊಳೂರು ಸಮೀಪದ ಮಾರಮ್ಮ ಗುಡಿಯ ಬಳಿ ಲಾರಿ (AP27TW 1089) ಅವರ ಕಾರಿನ ಹಿಂಭಾಗಕ್ಕೆ ಡಿಕ್ಕಿ ಹೊಡೆದಿದೆ ಎಂದು ಅವರು ತಿಳಿಸಿದ್ದಾರೆ.ಅಪಘಾತದ ಬಳಿಕ ಲಾರಿ ಚಾಲಕ ತಪ್ಪು ಒಪ್ಪಿಕೊಂಡಿದ್ದರೂ, ಹಾನಿ ಕುರಿತು ಪ್ರಶ್ನಿಸಿದಾಗ ಕೆಲವು ವ್ಯಕ್ತಿಗಳು ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ, ಜಾತಿ ಆಧಾರಿತ ಅವಹೇಳನಕಾರಿ ಪದಗಳನ್ನು ಬಳಸಿ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ. ತಿಮ್ಮಪ್ಪ ಅವರು ಈ ಘಟನೆಯನ್ನು ಮೊಬೈಲ್‌ನಲ್ಲಿ ದಾಖಲಿಸಲು ಯತ್ನಿಸಿದಾಗ, ಸುಮಾರು 5–6 ಜನರು ಸೇರಿ ಹಲ್ಲೆ ನಡೆಸಿ ಮೊಬೈಲ್ ಕಸಿದುಕೊಂಡು ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ.ದಾಳಿಗೆ ಸಂಬಂಧಿಸಿದಂತೆ ಮಲ್ಲಿಕಾ, ಕೊಲ್ಲಪ್ಪ, ಕರಿಮಂಚಪ್ಪ, ಪ್ರಶಾಂತ, ರಾಜೇಂದ್ರ ಸೇರಿದಂತೆ ಕೆಲವರನ್ನು ಗುರುತಿಸಲಾಗಿದೆ. ಹಳೆಯ ವೈಷಮ್ಯವೇ ಈ ಘಟನೆಯ ಮೂಲ ಕಾರಣವಾಗಿದ್ದು, ಹಿಂದೆ ಜಮೀನು ವಿಚಾರದಲ್ಲಿ ವಿವಾದ ಉಂಟಾಗಿತ್ತು ಎಂದು ತಿಮ್ಮಪ್ಪ ಹೇಳಿದ್ದಾರೆ.ಈ ಘಟನೆ ಬಳಿಕ ತಿಮ್ಮಪ್ಪ ಹಾಗೂ ಅವರ ಕುಟುಂಬ ಸದಸ್ಯರು ಜೀವಭಯದಲ್ಲಿದ್ದು, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ರಕ್ಷಣೆ ಒದಗಿಸಬೇಕೆಂದು ಅವರು ಸರ್ಕಾರ ಹಾಗೂ ಪೊಲೀಸ್ ಇಲಾಖೆ ಬಳಿ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ದಲಿತ ಸೇನೆಯ ಮುಖಂಡರಾದ ಮುರಳಿ, ಆನಂದ್ ಹಗರಿ, ಮುರಳಿಧರ್, ಎರ್ರಿಸ್ವಾಮಿ, ವೆಂಕಟೇಶ್ ಸೇರಿದಂತೆ ದಲಿತ ಸೇನೆಯ ಮುಖಂಡರು ಉಪಸ್ಥಿತರಿದ್ದರು.

# ಲಾರಿಗೆ ತಲೆಕೊಟ್ಟು ಅಪರಿಚಿತ ವ್ಯಕ್ತಿ ಆತ್ಮಹತ್ಯೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ರಾಘವೇಂದ್ರ ಥಿಯೇಟರ್ ಸರ್ಕಲ್ ಸಮೀಪ ವಿಷಾದಕರ ಘಟನೆ ಸಂಭವಿಸಿದ್ದು, ಅಪರಿಚಿತ ವ್ಯಕ್ತಿಯೊಬ್ಬರು ಲಾರಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವರದಿಯಾಗಿದೆ. ಇಚೆರ್ ಲಾರಿ (ನಂ. ಎಂ–34 ಅ 6770) ಬರುವುದನ್ನು ಗಮನಿಸಿದ ವ್ಯಕ್ತಿ, ಉದ್ದೇಶಪೂರ್ವಕವಾಗಿ ಲಾರಿ ಟೈರ್ ಕೆಳಗೆ ಬಿದ್ದು ಮೃತಪಟ್ಟಿದ್ದಾನೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಘಟನೆ ರಾಘವೇಂದ್ರ ಥಿಯೇಟರ್ ನಿಂದ ಸಂಗಮ ಸರ್ಕಲ್ ಹೋಗುವ ರಸ್ತೆಯಲ್ಲಿ ನಡೆದಿದೆ. ಕೆಲಕಾಲ ರಸ್ತೆಯ ಅಂಚಿನಲ್ಲಿ ಕುಳಿತಿದ್ದ ವ್ಯಕ್ತಿ, ಲಾರಿ ಬರುತ್ತಿರುವುದನ್ನು ಕಂಡು ಏಕಾಏಕಿ ಮುಂದೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂಬ ಮಾಹಿತಿ ಲಭ್ಯವಾಗಿದೆ. ಘಟನೆ ಸ್ಥಳದಲ್ಲಿ ರಕ್ತಸಿಕ್ತ ದೃಶ್ಯ ಕಂಡುಬಂದಿದ್ದು, ಸ್ಥಳೀಯರಲ್ಲಿ ಆತಂಕ ಉಂಟಾಗಿದೆ.

ಸ್ಥಳೀಯರು ವ್ಯಕ್ತಿಯನ್ನು ಗುರುತಿಸಲು ಯತ್ನಿಸಿದರೂ, ಆತ ಸುತ್ತಮುತ್ತಲಿನ ನಿವಾಸಿ ಅಲ್ಲ ಎಂಬುದು

ತಿಳಿದುಬಂದಿದೆ. ಹೀಗಾಗಿ ಮೃತ ವ್ಯಕ್ತಿ ಗುರುತು ಪತ್ತೆಯಾಗಿಲ್ಲ. ಈ ಸಂಬಂಧ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಘಟನಾ ಸ್ಥಳಕ್ಕೆ ಟ್ರಾಫಿಕ್ ಸ್ಟೇಶನ್ ಪಿ ಎಸ್ ಐ ಪ್ರಕಾಶ್ ಅವರು ದೌಡಾಯಿಸಿ, ಶವವನ್ನು ಆಂಬುಲೆನ್ಸ್ ಮೂಲಕ ವಿಮ್ಸ್ ಆಸ್ಪತ್ರೆಗೆ ರವಾನಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆಯನ್ನು ಪೊಲೀಸರು ಕೈಗೊಂಡಿದ್ದಾರೆ.

# ಭೀಕರ ಅಪಘಾತ: ಯುವಕ ಸ್ಥಳದಲ್ಲೇ ಸಾವು

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಬಳ್ಳಾರಿ ನಗರದಲ್ಲಿ ಸೋಮವಾರ ಬೆಳಿಗ್ಗೆ 11:40ರ ಸುಮಾರಿಗೆ ಸಂಗಮ್ ಸರ್ಕಲ್ ನಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿ, ದ್ವಿಚಕ್ರ ವಾಹನದಲ್ಲಿ ಸಂಚರಿಸುತ್ತಿದ್ದ ಯುವಕ ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡೆದಿದೆ.

ಮಾಹಿತಿಯ ಪ್ರಕಾರ, ಸರಕಾರಿ ಬಸ್ ಮತ್ತು ಲಾರಿ ನಡುವೆ ಸಾಗುತ್ತಿದ್ದ ವೇಳೆ, ಸುಮಾರು 18 ರಿಂದ 20 ವರ್ಷದೊಳಗಿನ ಯುವಕ ನಿಯಂತ್ರಣ ಕಳೆದುಕೊಂಡು ಅಪಘಾತಕ್ಕೀಡಾದನು. ಅಪಘಾತದ ತೀವ್ರತೆಗೆ ಯುವಕ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾನೆ ಎಂದು ತಿಳಿದುಬಂದಿದೆ.

ಘಟನೆಯ ನಂತರ ಸ್ಥಳಕ್ಕೆ ಪೊಲೀಸರು ಹಾಗೂ ಸಾರ್ವಜನಿಕರು ಆಗಮಿಸಿ, ಪರಿಶೀಲನೆ ನಡೆಸಿದರು. ಮೃತದೇಹವನ್ನು ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಲಾಗಿದೆ. ಯುವಕನ ಗುರುತು ಇನ್ನಷ್ಟೇ ಪತ್ತೆಯಾಗಬೇಕಿದ್ದು, ಸಂಬಂಧಿಕರನ್ನು ಸಂಪರ್ಕಿಸುವ ಕಾರ್ಯ ಮುಂದುವರಿದಿದೆ.

ಈ ಘಟನೆ ಸ್ಥಳೀಯರಲ್ಲಿ ಆತಂಕ ಹಾಗೂ ದುಃಖದ ವಾತಾವರಣವನ್ನುಂಟುಮಾಡಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

# ಉಚಿತ ಫ್ಯಾಷನ್ ಡಿಸೈನಿಂಗ್ ತರಬೇತಿ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸ್ವಯಂ ಉದ್ಯೋಗ ಆರಂಭಿಸಲು ಆಸಕ್ತಿ ಇರುವ ಪರಿಶಿಷ್ಟ ಪಂಗಡದ ಮಹಿಳೆಯರಿಗಾಗಿ ಬಳ್ಳಾರಿ ಮತ್ತು ಕುರುಗೋಡಿನಲ್ಲಿ 30 ದಿನಗಳ ಕಾಲ ‘ಫ್ಯಾಷನ್ ಡಿಸೈನಿಂಗ್’ ಕುರಿತು ಉಚಿತ ವಲಯಾಧಾರಿತ ಉದ್ಯಮಶೀಲತಾಭಿವೃದ್ಧಿ ತರಬೇತಿ ಆಯೋಜಿಸಲಾಗಿದ್ದು, ಆಸಕ್ತರು ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ, ಬಳ್ಳಾರಿಯ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಈ ತರಬೇತಿ ಹಮ್ಮಿಕೊಂಡಿದೆ.ಈ ತರಬೇತಿಯಲ್ಲಿ ಫ್ಯಾಷನ್ ಡಿಸೈನಿಂಗ್ ವೃತ್ತಿಯ ಪ್ರಾಯೋಗಿಕ ಮತ್ತು ಸಿದ್ಧಾಂತ ತರಬೇತಿಯೊಂದಿಗೆ ವಿವಿಧ ವಿಷಯಗಳ ಬಗ್ಗೆ ತಜ್ಞರಿಂದ ಮಾಹಿತಿ ನೀಡಲಾಗುವುದು.ಆಯಾ ವೃತ್ತಿಗಳಲ್ಲಿ ಪ್ರಾಯೋಗಿಕ ಹಾಗೂ ಸಿದ್ಧಾಂತದೊಂದಿಗೆ ಸ್ವಯಂ ಉದ್ಯಮಗಳ ಬಗ್ಗೆ ಮಾಹಿತಿ, ಉದ್ಯಮಶೀಲತೆ, ಯಶಸ್ವಿ ಉದ್ಯಮಶೀಲರ ಗುಣಲಕ್ಷಣಗಳು, ಉದ್ಯಮಗಳನ್ನು ಪ್ರಾರಂಭಿಸುವ ಹಂತಗಳು, ಸ್ವಯಂ ಉದ್ಯೋಗಕ್ಕೆ ಇರುವ ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ ಮಾಡುವ ಬಗ್ಗೆ, ಸಾಲ ಮತ್ತು ಹಣಕಾಸು ಮತ್ತು ಹಣಕಾಸೇತರ ಸೌಲಭ್ಯಗಳ ಬಗ್ಗೆ, ಲೆಕ್ಕ ಪತ್ರ ನಿರ್ವಹಣೆ, ಯೋಜನಾ ವರದಿ ತಯಾರಿಕೆ, ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಸಹಾಯ ನೀಡುವುದು ಮತ್ತು ಸಂಬಂಧಪಟ್ಟ ಇತ್ಯಾದಿ ವಿಷಯಗಳ ಕುರಿತು ಉಪನ್ಯಾಸ, ಮಾಹಿತಿ ನೀಡಲಾಗುವದು.18 ರಿಂದ 35 ವರ್ಷದೊಳಗಿರಬೇಕು. ಕನಿಷ್ಠ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಪರಿಶಿಷ್ಟ ಪಂಗಡದ ಮಹಿಳೆಯರು ಹಾಗೂ ‘ಯುವನಿಧಿ’ ಫಲಾನುಭವಿಗಳಿಗೆ ಆದ್ಯತೆ ಇರಲಿದೆ.ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಏ.17 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮತ್ತು ನೋಂದಣಿಗಾಗಿ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಹೊಸಪೇಟೆ ರಸ್ತೆ, ಬಳ್ಳಾರಿ 583102 ಅಥವಾ ಮೊ.9449226221, 7483538942, 9986332736 ಗೆ ಸಂಪರ್ಕಿಸಬಹುದು.ಅರ್ಹ ಮಹಿಳೆಯರು ಈ ಸೌಲಭ್ಯವನ್ನು ಸದುಪಯೋಗಪಡೆದುಕೊಳ್ಳಬೇಕು ಎಂದು ಸಿಡಾಕ್ ಜಂಟಿ ನಿರ್ದೇಶಕ ಜಿ.ಯು.ಹುಡೇದ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಏ.14 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ.ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್,

ರಾಜ್ಯಸಭೆ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್, ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರ ಮಹಾಮಂಡಳಿ ನಿಯಮಿತ(ಕಾವೇರಿ ಹ್ಯಾಂಡ್‌ಲೂಮ್ಸ್)ದ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಸಿರುಗುಪ್ಪ ಶಾಸಕ ಬಿ.ಎಂ ನಾಗರಾಜ, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಡಾ.ಬಿ.ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷ ಹೆಚ್.ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲೆಯ ಎಲ್ಲಾ ದಲಿತಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಇತರರು ಭಾಗವಹಿಸುವರು.

# ರತ್ನಗಿರಿಯ ರತ್ನ




## ಭಾರತದ ಬಡವರ ಬಾಳಿನ ಬೆಳಕು ಆದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್

ಅವರು 14ನೇ ಏಪ್ರಿಲ್ 1891 ಮಧ್ಯಪ್ರದೇಶದ ಮಾಹೂ ಎಂಬ ಮಿಲಿಟರಿ ಕ್ಯಾಂಪ್ ನಲ್ಲಿ ಹುಟ್ಟಿದರು ಅಂಬೇಡ್ಕರ್ ಅವರ ಅಜ್ಜ ಮಾಲೋಜಿ ಬ್ರಿಟಿಷ್ ಸರ್ಕಾರದ ಮಿಲಿಟರಿ ಸೇನೆಯಲ್ಲಿ ಅಂದರೆ ಈಸ್ಟ್ ಇಂಡಿಯಾ ಕಂಪನಿಯಲ್ಲಿ ಸೇವೆ ಸಲ್ಲಿಸುತ್ತಿದ್ದರು ಮುಂದೆ ಅವರ ಪೋಷಕರಾದ ರಾಮ್ ಜಿ ಮಾಲೋಜಿ ಸಕಪಾಲ್ ಬ್ರಿಟಿಷ್ ಸೇನೆಯಲ್ಲಿ ಸುಬೇದಾರರಾಗಿ ಕಾರ್ಯನಿರ್ವಹಿಸುತ್ತಿದ್ದರು ಹಾಗಾಗಿ ಅವರ ಜನನ ಮಿಲಿಟರಿ ಕ್ಯಾಂಪ್ನಲ್ಲಿ ಭೀಮಬಾಯಿಯವರ ಉದರದಲ್ಲಿ ಆಯಿತು, ಇವರು 14ನೇ ಮಗ ಮತ್ತು ಕೊನೆಯ ಮಗ ಇವರ ಮೂಲತಃ ಕುಟುಂಬವು ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಅಂಬೆವಾಡಿಗೆ ಸೇರಿದವರು ಅವರು ಮಹರ್ ಅಂದರೆ ಅಸ್ಪೃಶ್ಯ ಜಾತಿಗೆ ಸೇರಿದವರಾಗಿದ್ದರು ಭೀಮ್ ಜಿ ಅವರಿಗೆ ಆರು ವರ್ಷದವರಿದ್ದಾಗ ತಾಯಿ ನಿಧನರಾದರು ಅವರ ಮಲತಾಯಿ ಪೋಷಣೆಯಲ್ಲಿ ಬೆಳೆಯಲಾರಂಭಿಸಿದರು ಇವರ ತಂದೆಯವರಿಗೆ ಮರಾಠಿ ಹಿಂದಿ ಭಾಷೆಯನ್ನು ಪ್ರಬುದ್ಧರಾಗಿ ಬಲ್ಲವರಾಗಿದ್ದರು ಮಿಲಿಟರಿ ನೌಕರಿಯಿಂದ ನಿವೃತ್ತಿಯಾದ ನಂತರ ಮಿಲಿಟರಿ ಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿದ್ದರು ಜೊತೆಗೆ ಇಂಗ್ಲೀಷ್ ಭಾಷೆಯು ಬಲ್ಲವರಾಗಿದ್ದರು ಅಂಬೇಡ್ಕರ್ ಅವರಿಗೆ ದೇಶಭಕ್ತಿ ಜ್ಞಾನ ಧರ್ಮದ ಬಗ್ಗೆ ಉತ್ತಮ ಸಂಸ್ಕೃತಿಯ ಬಗ್ಗೆ ಹೇಳಿಕೊಡುವುದರಲ್ಲಿ ಅವರ ತಂದೆಯವರದೇ ಪ್ರಮುಖ ಪಾತ್ರವಿತ್ತು ರಾಮಾಯಣ ಮತ್ತು ಮಹಾಭಾರತ ಕಥೆಗಳನ್ನು ಹೇಳುತ್ತಿದ್ದರು.

ಶಾಲಾ ದಾಖಲಾತಿಯಲ್ಲಿ ಭೀಮ್ ಜಿ ರಾಮ್ ಜಿ ಸಕಪಾಲ್ ಅವರ ಹೆಸರು ಎಂದು ದಾಖಲಾಗಿತ್ತು ನಂತರ ದಿನಗಳಲ್ಲಿ ಅವರ ಗುರುಗಳಾದ ಬ್ರಾಹ್ಮಣ ಶಿಕ್ಷಕ ಅಂಬೇಡ್ಕರ್ ಅವರು ತಮ್ಮ ಹೆಸರನ್ನು ಅವರ ಕುಟುಂಬಕ್ಕೆ ನೀಡಿದರು ಹಾಗಾಗಿ ಸಕ್ಪಾಲ್ ಬದಲಾಗಿ ಭೀಮರಾವ್ ರಾಮ್ ಜಿ ಅಂಬೇಡ್ಕರ್ ಎಂದು ಬದಲಾಯಿತು. ಬಾಲ್ಯದಲ್ಲಿಯೇ ಬಹಳಷ್ಟು ಅವಮಾನ ಅಸ್ಪೃಶ್ಯತೆ ಅಸಮಾನತೆಯನ್ನು ಕಂಡಿದ ಅವರು ಅದರ ವಿರುದ್ಧ ಹೋರಾಡಲು ನಿಶ್ಚಯ ಮಾಡಿಕೊಂಡರು. ಪ್ರಾಥಮಿಕ ಶಿಕ್ಷಣ ಹಲವಾರು ನೋವು ಮತ್ತು ಅವಮಾನಗಳಿಂದ ಸತಾರದಲ್ಲಿ ಮುಗಿಸಿ ಬಾಂಬೆಯಲ್ಲಿ ಹೈಸ್ಕೂಲ್ ಶಿಕ್ಷಣ ಪಡೆಯುತ್ತಾರೆ. ಹಲವಾರು ಕಹಿ ಅನುಭವಗಳ ನಡುವೆ 1907ರಲ್ಲಿ 10ನೇ ತರಗತಿ ಪಾಸ್ ಆಗುತ್ತಾರೆ ಅವರ ಆತ್ಮೀಯ ಶಿಕ್ಷಕರು ಕೆಎ ಕೆಲಸಕರ್ ಅಂಬೇಡ್ಕರ್ ಅವರನ್ನು ತುಂಬು ಹೃದಯದಿಂದ ಅಭಿನಂದಿಸಿ ನೀವು ನಿಮ್ಮ ಸಮಾಜದ ಮತ್ತು ಭಾರತದ ಸುಧಾರಕರಾಗುವರೆಂದು ಹರಸುತ್ತಾರೆ ಮತ್ತು ಉನ್ನತ ವ್ಯಾಸಂಗಕ್ಕಾಗಿ ತಮ್ಮ ಕೈಲಾದ ಸಹಾಯ ಮಾಡುತ್ತೇನೆ ಎಂದು ಹೇಳಿ ಭಗವಾನ್ ಬುದ್ಧರ ಚರಿತ್ರೆಯನ್ನು ಕಾಣಿಕೆ–ಯಾಗಿ ನೀಡುತ್ತಾರೆ 10ನೇ ತರಗತಿ ಪಾಸಾದ ನಂತರ ಇವರಿಗೆ ರಮಬಾಯಿಯವರೊಂದಿಗೆ ವಿವಾಹ ಮಾಡುತ್ತಾರೆ ಆಗ ಭೀಮರಾವ್ ಅವರಿಗೆ 17 ವರ್ಷ ರಮಾಬಾಯಿಯವರಿಗೆ 9 ವರ್ಷ ವಯಸ್ಸಿತ್ತು ಮುಂದೆ ಪಿಯುಸಿ ಬಿಎ ವ್ಯಾಸಂಗಕ್ಕಾಗಿ ಬರೋಡ ಮಹಾರಾಜರಿಂದ ತಿಂಗಳಿಗೆ 25 ರೂಪಾಯಿ ಶಿಕ್ಷಣವೇತನ ಪಡೆ–ಯುತ್ತಾರೆ. ನಂತರದಲ್ಲಿ ಫೆಬ್ರುವರಿ 2 1913 ಕ್ಕೆ ತಂದೆಯವರ ನಿಧನವಾಗುತ್ತದೆ ಅಮೇರಿಕಾದಲ್ಲಿ ಉನ್ನತ ವ್ಯಾಸಂಗಕ್ಕಾಗಿ ತಮ್ಮ ಪ್ರಯಾಣವನ್ನು ಬೆಳೆಸುತ್ತಾರೆ ಎಂಎ ಪದವಿ ಮುಗಿಸಿದ ನಂತರ ಪಿ ಹೆಚ್ ಡಿ ಅಮೆರಿಕ ವಿಶ್ವವಿದ್ಯಾಲಯದಿಂದ ಪಡೆಯುತ್ತಾರೆ 1920 ರಲ್ಲಿ ಮೂಕ ನಾಯಕ ಎಂಬ ಪತ್ರಿಕೆಯನ್ನು ಪ್ರಕಟಿಸುತ್ತಾರೆ ಆರ್ಥಿಕ ಕಡುಬಡತರದಿಂದ ವ್ಯಾಸಂಗವನ್ನು ಮಧ್ಯದಲ್ಲಿ ನಿಲ್ಲಿಸಿ ಭಾರತಕ್ಕೆ ಬಂದು ವಕೀಲ ವೃತ್ತಿಯನ್ನು ಪ್ರಾರಂಭಿಸುತ್ತಾರೆ. ಸಾಮಾಜಿಕ ಸೇವೆಯಲ್ಲಿ ಕಾಳಜಿಯನ್ನ ಹೊಂದಿದವರು ಸಾಮಾಜಿಕಾಗಿ ತಮ್ಮ ಬದುಕನ್ನೇ ಮುಡುಪಾಗಿಡುತ್ತಾರೆ. ದಲಿತ ವರ್ಗದವರನ್ನು ಜಾಗೃತರನ್ನಾಗಿ ಮಾಡಲು ಅವರಲ್ಲಿ ಶಿಕ್ಷಣದ ಜಾಗೃತಿ ಮೂಡಿಸಲು ಅವರ ಸಮಸ್ಯೆಗಳಿಗೆ ಸ್ಪಂದಿಸಲು ಬಹಿಷ್ಕೃತ ಭಾರತ ಎಂಬ ಪತ್ರಿಕೆಯನ್ನು ಪ್ರಾರಂಭಿಸುತ್ತಾರೆ.1935ರಲ್ಲಿ ಅವರ ಪತ್ನಿ ರಮಾಬಾಯಿ ಅವರ ಅಗಲಿಕೆಯು ಅವರಿಗೆ ತುಂಬಲಾರದ ನಷ್ಟವಾಗುತ್ತದೆ ಇನ್ನೊಂದು ಸತ್ಯ ಏನೆಂದರೆ ಅವರಿಗೆ ಜನಿಸಿದ ಐದು ಮಕ್ಕಳಲ್ಲಿ ಬದುಕುಳಿದರು ಕೇವಲ ಯಶವಂತ ಒಬ್ಬರೇ, ಉಳಿದವರೆಲ್ಲ ತೀರಿಕೊಳ್ಳುತ್ತಾರೆ 1946ರಲ್ಲಿ ಸಂವಿಧಾನ ರಚನಾ ಸಭೆಗೆ ಬಂಗಾಳ ಪ್ರಾಂತ್ಯದಿಂದ ಆಯ್ಕೆಯಾಗಿ ಮುಂದೆ 1947ರಲ್ಲಿ ಕರಡು ಸಮಿತಿಯ ಅಧ್ಯಕ್ಷರಾಗಿ ಸತತ ಮೂರು ವರ್ಷಗಳವರೆಗೆ ಹಗಲು ರಾತ್ರಿ ಸಂವಿಧಾನ ಬರೆದು 1950 ರಲ್ಲಿ ಮುಗಿಸುತ್ತಾರೆ ಅದಕ್ಕಾಗಿ ಇವರನ್ನು ಸಂವಿಧಾನದ ಶಿಲ್ಪಿ ಎಂದು ಕರೆಯುತ್ತಾರೆ ಅಷ್ಟೇ ಅಲ್ಲದೆ ಕಾನೂನು ಮಂತ್ರಿಗಳಾಗಿದ್ದಾಗ ಮಹಿಳೆಯರಿಗಾಗಿ ರಚನೆ ಮಾಡಿ ಮಹಿಳೆಯರ ಸಮಾನತೆಗಾಗಿ ಹೋರಾಡುತ್ತಾರೆ ಪಾರ್ಲಿಮೆಂಟ್ ನಲ್ಲಿ ಮಹಿಳೆಯರ ಪರ ಕೇಳಲಾದ ಹಕ್ಕುಗಳನ್ನು ನಿರಾಕರಿಸಿದರಿಂದ ತಮ್ಮ ಕಾನೂನು ಮಂತ್ರಿ ಪದವಿಗೆ ರಾಜೀನಾಮೆ ನೀಡುತ್ತಾರೆ 1953 ರಲ್ಲಿ ಆಂಧ್ರಪ್ರದೇಶದ ವಿಸ್ಮನಿಯ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿಯನ್ನು ಪಡೆಯುತ್ತಾರೆ ನಂತರದ ದಿನಗಳಲ್ಲಿ ಬೌದ್ಧ ಧರ್ಮದ ಆಚಾರ ಮತ್ತು ಪ್ರಚಾರಕ್ಕಾಗಿ ಜೀವನವನ್ನು ಅರ್ಪಿಸಿಕೊಳ್ಳುತ್ತಾರೆ ಬದುಕಿನ ಕೊನೆಯ ದಿನಗಳಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಬೌದ್ಧ ಧರ್ಮ ಸ್ವೀಕರಿಸಿ 6, ಡಿ 1956 ರಲ್ಲಿ ತಮ್ಮ ಅಂತಿಮ ಯಾತ್ರೆ ಪೂರೈಸುತ್ತಾರೆ ಮುಂಬೈಯ ದಾದರಿನಲ್ಲಿ ಬೌದ್ಧ ಧರ್ಮದ ನಿಯಮದ ಪ್ರಕಾರ ಮಹಾನಿರ್ವಾಣದ ವಿಧಿಯನ್ನ ಅಂತ್ಯಕ್ರಿಯೆಯಲ್ಲಿ ಅನುಸರಿಸಲಾಯಿತು ಅವರ ಮಾರ್ಗದರ್ಶನ ಇಂದು ನಮ್ಮೆಲ್ಲರ ಪಾಲಿಗೆ ದಿವ್ಯ ಜ್ಯೋತಿಯಾಗಿದೆ ಅವರು ಎಂದು ಚಿರಸ್ಮರಣೀಯ ಅಮರ ಬಡವರ ಬಾಳಿಗೆ

ಬೆಳಕಾದ ರತ್ನಗಿರಿಯ ರತ್ನ.



ಶ್ರೀಮತಿ ಬಾಯಿ ಬಿ ರೆಡ್ಡಿ
ದೈಹಿಕ ಶಿಕ್ಷಣ ಶಿಕ್ಷಕರು
ಸರಕಾರಿ ಪ್ರೌಢಶಾಲೆ ಬೆನ ಚಿಂಚೋಳಿ

# ಬೇಸಿಗೆ ದಾಹ ಹೆಚ್ಚಾದರೂ ಕೆರೆ ಮುಕ್ತಗೊಳಸದ ಡಿಸಿ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ




ನಗರದಲ್ಲಿ 162ನೇ ದಿನದಲ್ಲಿ ಬಲ್ಡೋಟ ಹಟಾವೋ ಕೊಪ್ಪಳ ಬಚಾವೋ ಅನಿರ್ದಿಷ್ಟ ಧರಣಿ ಮುಂದುವರಿಯಿತು.

ಧರಣಿಯಲ್ಲಿ ಡಾ. ಮಂಜುನಾಥ ಸಜ್ಜನ್ ಮಾತನಾಡಿ, ಕೊಪ್ಪಳ ಬೇಸಿಗೆ ಬಿಸಿಲಿನಿಂದ ದಗದಗ ಉರಿಯುತ್ತಿದೆ. ಮನುಷ್ಯ ಎಲ್ಲಿಯಾದರೂ ನೀರಿನ ದಾಹ ತೀರಿಸಿಕೊಳ್ಳುತ್ತಾನೆ. ಬಸಾಪುರ ಸುತ್ತಲಿನ ಹಳ್ಳಿಗಳಲ್ಲಿ ಸಾವಿರಾರು ಜಾನುವಾರು ಸಾಕಾಣಿಕೆ ಇದೆ.

ಬಲ್ಡೋಟ ಅತಿಕ್ರಮಿಸಿಕೊಂಡ ಬಸಾಪುರ ಕೆರೆಗೆ ಕಾಂಪೌಂಡ್ ಕಟ್ಟಿ, ರಸ್ತೆ ಮುಚ್ಚಿದ್ದಾರೆ. ಇದರ ನೀರು ಕುಡಿಯಲು ಜಾನುವಾರುಗಳಿಗೆ ಮುಕ್ತವಾಗಿರಬೇಕು ಎಂದು ಹೈಕೋರ್ಟ್ ನಿರ್ದಿಷ್ಟವಾಗಿ ಆದೇಶ ಮಾಡಿದಾಗಲೂ ಜಿಲ್ಲಾಧಿಕಾರಿಗಳು ಜಾನುವಾರು ನೀರು ಕುಡಿಯಲು ಕೆರೆ ಮುಕ್ತಗೊಳಿಸುತ್ತಿಲ್ಲ. ಕೊಪ್ಪಳದಲ್ಲಿ ರೈತರು ಸಾಕುವ ಹಸುಗಳು ಅಪರೂಪದ ತಳಿಯಾಗಿದೆ. ಈ ತಳಿಯನ್ನು ಉಳಿಸಿಕೊಳ್ಳಲು ಇಲ್ಲಿನ ಜಿಲ್ಲಾಧಿಕಾರಿಗಳು ಇಂತಹ ಬಿರುಬಿಸಿಲಿನ ಸಂದರ್ಭದಲ್ಲಿ ದಗೆ ಹೆಚ್ಚಾಗಿ ವಿಲವಿಲ ಒದ್ದಾಡುತ್ತಿರುವ ಜಾನುವಾರುಗಳಿಗೆ ಪುಟ್ಟಿ, ತಟ್ಟೆಯಲ್ಲಿ ನೀರು ಕುಡಿಸುವುದು ಕಾಣುವುದಿಲ್ಲವೇ ಎಂದು ಆಕ್ರೋಶ ಹೊರ ಹಾಕಿದರು.

ಧರಣಿಯಲ್ಲಿ ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ. ಗೊಂಡಬಾಳ, ಸದಾನಂದಯ್ಯ ಬೀಳಗಿಮಠ, ನಿವೃತ್ತ ಪ್ರಾಚಾರ್ಯ ಎಸ್. ಬಿ. ರಾಜೂರು, ಪ್ರಕಾಶಕ ಡಿ. ಎಂ. ಬಡಿಗೇರ, ಮಹಿಳಾ ನಾಯಕಿಂ–ರಾದ ಜ್ಯೋತಿ ಎಂ. ಗೊಂಡಬಾಳ, ಪ್ರಕಾಶಕಿ ಮಾಲಾ ಬಡಿಗೇರ,

ಸರೋಜಾ ಬಾಕಳೆ, ಕಾವ್ಯಾ ಗಡಾದ, ಸುವರ್ಣಾ ತುಪ್ಪದ, ವಿದ್ಯಾ ನಾಲ್ವಾಡ, ಬಿ. ಜಿ. ಕರಿಗಾರ, ಶಂಭುಲಿಂಗಪ್ಪ ಹರಗೇರಿ, ರಾಜಶೇಖರ ಏಳುಬಾವಿ, ಶರಣು ಶೆಟ್ಟರ್, ಪಂಪಣ್ಣ ಚಿಂತಪಲ್ಲಿ, ಮಹಾದೇವಪ್ಪ

ಮಾವಿನಮಡು, ಶಿವಪ್ಪ ಕಲಕೇರಿ, ನಾಗರಾಜ ಕುಷ್ಟಗಿ, ಯಮನೂರಪ್ಪ ಹಾಲಳ್ಳಿ ಬಸಾಪುರ, ವಿಜಯಮಹಾಂತೇಶ ಹಟ್ಟಿ, ಶಿವಪ್ಪ ಜಲ್ಲಿ, ರತ್ನಮ್ಮ ದೊಡ್ಡಮನಿ, ಸುಂಕಮ್ಮ ಪಡಚಿಂತಿ ಇದ್ದರು.

# ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ದೂರು



• ಮಲ್ಲಮ್ಮ ನುಡಿ ವಾರ್ತೆ, ಕೊಟ್ಟೂರು

ಆರ್ ಎಸ್ ಎಸ್/ ಬಿಜೆಪಿ ವಿರುದ್ಧ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ರವರು ಅಸ್ಸಾಂ ಚುನಾವಣಾ ಪ್ರಚಾರದಲ್ಲಿ ಪ್ರಚೋದನಕಾರಿ ಭಾಷಣ ಮಾಡಿದ ಹಿನ್ನಲೆಯಲ್ಲಿ ಬಿಜೆಪಿ ಯುವ ಮೋರ್ಚಾ ವತಿಯಿಂದ ಕೊಟ್ಟೂರು ಪಟ್ಟಣದ ಪೊಲೀಸ್ ಠಾಣೆಗೆ ದೂರು ನೀಡಲಾಯಿತು.

ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರು ಅಸ್ಸಾಂ ಚುನಾವಣಾ ಪ್ರಚಾರದಲ್ಲಿ ಭಾಷಣ ಮಾಡುತ್ತಾ ಕುರಾನ್ ನಲ್ಲಿ ಬರೆದಿದೆ, ನಮಾಜ್ ಮಾಡುವ ಸಂದರ್ಭದಲ್ಲಿ ವಿಷಸರ್ಪ ಕಂಡರೆ ಅದನ್ನು ಕೊಲ್ಲಬೇಕು. ಆರ್ ಎಸ್ ಎಸ್/ಬಿಜೆಪಿ ಅದೇ ರೀತಿ ವಿಷಸರ್ಪವು ನೀವು ಅದನ್ನು ಕೊಲ್ಲದಿದ್ದರೆ ಬದುಕುವುದಿಲ್ಲ ಎಂದು ಮುಸಲ್ಮಾನರಿಗೆ ಆರ್ ಎಸ್ ಎಸ್/ಬಿಜೆಪಿ ಸದಸ್ಯರನ್ನು ಕೊಲ್ಲಬೇಕು ಎಂದು ಪ್ರಚೋದಿಸಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರು ಅತ್ಯಂತ ಪ್ರಮುಖ ಜವಾಬ್ದಾರಿಯನ್ನು ಹೊಂದಿದ್ದಾರೆ ಮತ್ತು ಅಲ್ಪಸಂಖ್ಯಾತರ ಓಲೈಕೆಯನ್ನು ಸದಾ ಮಾಡುವವರು ಇಂತಹ ವ್ಯಕ್ತಿ ಮಾಡಿರುವ ಬೇಜವಾಬ್ದಾರಿ ಪ್ರಚೋದನೆಯು ದೇಶದಲ್ಲಿರುವ ಲಕ್ಷಾಂತರ ಆರ್ ಎಸ್ ಎಸ್/ಬಿಜೆಪಿ ಸದಸ್ಯರ ಜೀವಕ್ಕೆ ಅಪಾಯವೊಡ್ಡಿದೆ ಇವರನ್ನು ಕೂಡಲೇ ಬಂಧಿಸಬೇಕು ಎಂದು ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಸಚಿನ್ ಕುಮಾರ್ ಒತ್ತಾಯಿಸಿದರು.

ಅಸ್ಸಾಂ ನಲ್ಲಿ ಪ್ರಚೋದನಕಾರಿ ಭಾಷಣ ಮಾಡಿರುವ ಮಲ್ಲಿಕಾರ್ಜುನ ಖರ್ಗೆಯವರು ದೇಶಾದ್ಯಂತ ಇರುವ ಸಂಘ ಪರಿವಾರದ ಮೇಲೆ ಮಾಡಿರುವ ದಾಳಿಯಾಗಿದೆ. ಇದರ ಪರಿಣಾಮ ದೇಶವ್ಯಾಪಿ ಬೀರುವ ಸಂಭವವನ್ನು ತಳ್ಳಿ ಹಾಕಲಾಗದು ಇವರ ಹೇಳಿಕೆ ಮತಿಗೇಡಿಗಳಿಗೆ ಉತ್ತೇಜನ ನೀಡಿ ನಮ್ಮ ಕಾರ್ಯಕರ್ತರ ಮೇಲೆ ದಾಳಿ ಸಂಭವಿಸುವ ಸಂದರ್ಭ ತಂದೊಡಿದ್ದಾರೆ ಆದ್ದರಿಂದ ಇವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಹಾಶಕ್ತಿ ಕೇಂದ್ರ ಯುವ ಮೋರ್ಚಾ ಅಧ್ಯಕ್ಷ ಮಣಿಕಂಠ ರವರು ಆಗ್ರಹಿಸಿದರು.

# ಸರಕಾರಿ ಪ.ಪೂ. ಕಾಲೇಜು ಕಲಾ ವಿಭಾಗದಲ್ಲಿ ಬಸವಶ್ರೀ ಪ್ರಥಮ ಸ್ಥಾನ



• ಮಲ್ಲಮ್ಮ ನುಡಿ ವಾರ್ತೆ, ಹುಣಸಗಿ

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಬಸವಶ್ರೀ ಅವರು ಪಿಯುಸಿ ಪರೀಕ್ಷೆಯಲ್ಲಿ ವಿಶಿಷ್ಟ ಸಾಧನೆ ಮಾಡಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಬಸವಶ್ರೀ (ತಂದೆ: ಶಿವಕುಮಾರ ಬಂಡೋಳಿ) ಅವರು ಕಲಾ ವಿಭಾಗದಲ್ಲಿ 600ರಲ್ಲಿ 564 ಅಂಕಗಳನ್ನು (94%) ಗಳಿಸಿ ಸರಕಾರಿ

ಪ.ಪೂ. ಕಾಲೇಜು, ಹುಣಸಗಿ ಕಲಾ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಅವರ ಈ ಸಾಧನೆಗೆ ಕಾಲೇಜಿನ ಉಪನ್ಯಾಸಕರು, ಪೋಷಕರು ಹಾಗೂ ಸ್ನೇಹಿತರು ಸಂತೋಷ ವ್ಯಕ್ತಪಡಿಸಿದ್ದಾರೆ.

ವಿದ್ಯಾರ್ಥಿನಿಯ ಸಾಧನೆಗೆ ಹುಣಸಗಿ ಪಟ್ಟಣದ ಹಿರಿಯರು ಹಾಗೂ ವಿವಿಧ ಮುಖಂಡರು ಅಭಿನಂದನೆಗಳನ್ನು ಸಲ್ಲಿಸಿದ್ದು, ಅವರ ಪರಿಶ್ರಮ ಮತ್ತು ಶಿಕ್ಷಕರ ಮಾರ್ಗದರ್ಶನವನ್ನು ಮೆಚ್ಚಿದ್ದಾರೆ.

ಮಗಳ ಈ ಸಾಧನೆಗೆ ತಂದೆ–ತಾಯಿ ಸಿಹಿ ತಿನಿಸಿ ಸಂತೋಷ ಹಂಚಿಕೊಂಡು ಖುಷಿ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಶಿಕ್ಷಕರಾದ ಬಸವರಾಜ ತೆಗ್ಗಳ್ಳಿ, ಕಾಂತೇಶ ಹಲಗಿಮನಿ, ಬಸವರಾಜ ಮರೋಳ, ರವಿ ಬಂಟನೂರು, ನುಚ್ಚಿ ಶಿಕ್ಷಕರ ಹಾಗೂ ಉಪನ್ಯಾಸಕರಾದ ರುದ್ರಗೌಡ ಬಿರಾದಾರ ಉಪಸ್ಥಿತರಿದ್ದರು.

# ಕಲಾಂ ವಸತಿ ಕಾಲೇಜಿಗೆ ಶೇ.99 ಫಲಿತಾಂಶ: ವಿದ್ಯಾರ್ಥಿನಿಯರ ಅಮೋಘ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಹೊರವಲಯದ ಅಲ್ಲೀಪುರದಲ್ಲಿರುವ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.99 ರಷ್ಟು ಅತ್ಯುತ್ತಮ ಗುಣಾತ್ಮಕ ಫಲಿತಾಂಶ ದಾಖಲಿಸುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ.

*ಫಲಿತಾಂಶದ ವಿವರ:*

ಕಾಲೇಜಿನ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಿಂದ ಒಟ್ಟು 108 ವಿದ್ಯಾರ್ಥಿನಿಯರು ಪರೀ–ಕ್ಷೆಗೆ ನೋಂದಾಯಿಸಿಕೊಂಡಿದ್ದರು. ಇವರಲ್ಲಿ 107 ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ.

ಉತ್ತೀರ್ಣರಾದವರಲ್ಲಿ 57 ವಿದ್ಯಾರ್ಥಿನಿಯರು ಅತ್ಯುತ್ತಮ ದರ್ಜೆ, 47 ವಿದ್ಯಾರ್ಥಿನಿಯರು ಉತ್ತಮ ದರ್ಜೆ ಹಾಗೂ ಇಬ್ಬರು ದ್ವಿತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ.

*ವಿಜ್ಞಾನ ವಿಭಾಗದಲ್ಲಿ ಶೇ.100 ಸಾಧನೆ:*

ವಿಜ್ಞಾನ ವಿಭಾಗದ ಒಟ್ಟು 56 ವಿದ್ಯಾರ್ಥಿನಿಯರು ಪರೀಕ್ಷೆ ಬರೆದಿದ್ದು, ಎಲ್ಲರೂ ಉತ್ತೀರ್ಣರಾಗುವ ಮೂಲಕ ಶೇ.100 ರಷ್ಟು ಫಲಿತಾಂಶ ತಂದಿದ್ದಾರೆ. ಈ ವಿಭಾಗದಲ್ಲಿ 36 ವಿದ್ಯಾರ್ಥಿನಿಯರು ಅತ್ಯುತ್ತಮ ದರ್ಜೆಯಲ್ಲಿ ತೇರ್ಗಡೆಯಾಗಿದ್ದು, 20ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ್ದಾರೆ.

*ವಿಜ್ಞಾನ ವಿಭಾಗದ ಟಾಪರ್ಸ್:*

ದಾನೇಶ್ವರಿ (ಶೇ.97.33), ಫ್ರೀದೋಷ್.ಬಿ (ಶೇ.96.50), ಕೆ.ಎಂ.ಚಂದನ (ಶೇ.96.16), ಸವಿತಾ (ಶೇ.96.16), ಸಂಗೀತ (ಶೇ.95.66) ಮತ್ತು ಕೆ.ಪೂರ್ಣಿಮಾ (ಶೇ.95.33) ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿನಿಯರು.

*ವಾಣಿಜ್ಯ ವಿಭಾಗ:*

ವಾಣಿಜ್ಯ ವಿಭಾಗದಲ್ಲಿ 52 ವಿದ್ಯಾರ್ಥಿನಿಯರು ಪರೀಕ್ಷೆ ಎದುರಿಸಿದ್ದು, ಇವರಲ್ಲಿ 21 ವಿದ್ಯಾರ್ಥಿನಿಯರು ಅತ್ಯುತ್ತಮ ದರ್ಜೆ ಹಾಗೂ 28 ವಿದ್ಯಾರ್ಥಿನಿಯರು ಉತ್ತಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಈ ವಿಭಾಗದಲ್ಲಿ ಕಾಲೇಜು ಶೇ.98 ರಷ್ಟು ಫಲಿತಾಂಶ ಪಡೆದಿದೆ.

*ವಾಣಿಜ್ಯ ವಿಭಾಗದ ಟಾಪರ್ಸ್:*

ಪವಿತ್ರಾ (ಶೇ.96), ಲೀಲಾವತಿ.ಎಂ. (ಶೇ.95.83), ಸಿಂಚನ (ಶೇ.95.50), ರೋಷನ್.ಬಿ (ಶೇ.93.83) ಮತ್ತು ಎಂ.ಸಹನಾ (ಶೇ.93.50) ವಿಭಾಗಕ್ಕೆ ಕೀರ್ತಿ ತಂದಿದ್ದಾರೆ.

# ನಿರಂತರ ಅಭ್ಯಾಸದಿಂದಲೇ ಯಶಸ್ಸು ವೇಣುಗೋಪಾಲ್ ಕರೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಪಟ್ಟಣದ ಶ್ರೀ ಖಾಸಗತೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ವಿಶಿಷ್ಟ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕಾರ್ಯಕ್ರಮವನ್ನು ಅದ್ದೂರಿಯಾಗಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಅತಿಥಿಗಳು, ಭವಿಷ್ಯದಲ್ಲಿ ಇನ್ನಷ್ಟು ಉನ್ನತ ಗುರಿಗಳನ್ನು ಸಾಧಿಸಲು ಪ್ರೇರೇಪಿಸಿದರು.

ಪ್ರಾಚಾರ್ಯ ಆರ್.ಎನ್.ಹೂಗಾರ ಪ್ರಾಸ್ತಾವಿಕವಾಗಿ ಮಾತನಾಡಿ, 2022[illegible]23ರಲ್ಲಿ ಹುಣಸಗಿ ಭಾಗದಲ್ಲಿ ಮೊದಲ ಬಾರಿಗೆ ವಿಜ್ಞಾನ ವಿಭಾಗ ಆರಂಭಿಸಲು ಆಡಳಿತಾಧಿಕಾರಿ ವಿಜಯಕುಮಾರ ದೇಸಾಯಿ ಅವರ ದೂರದೃಷ್ಟಿ ಮತ್ತು ಪರಿಶ್ರಮವೇ ಕಾರಣವಾಗಿದೆ ಎಂದು ಹೇಳಿದರು. ಇದರ ಫಲವಾಗಿ ಕಾಲೇಜು ಮೊದಲ ಪ್ರಯತ್ನದಲ್ಲೇ ಶೇಕಡಾ 95 ಫಲಿತಾಂಶ ಸಾಧಿಸಿ, ಯಾದಗಿರಿ ವಿಭಾಗದಲ್ಲಿ ಗಮನಸೆಳೆದಿದೆ ಎಂದರು.

ಈ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದ 55 ವಿದ್ಯಾರ್ಥಿಗಳಲ್ಲಿ 26 ಮಂದಿ ಡಿಸ್ಟಿಂಕ್ಷನ್ ಹಾಗೂ 28 ಮಂದಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು ಗಮನಾರ್ಹವಾಗಿದೆ. ಕಲ್ಪನಾ ಕನ್ನಳ್ಳಿ ಅವರು 97.33% ಅಂಕಗಳನ್ನು ಪಡೆದು ಹುಣಸಗಿ ಹಾಗೂ ಸುರಪುರ ತಾಲೂಕಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಐಶ್ವರ್ಯ ಚಂದ್ರಶೇಖರ ಅವರು 96.3% ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಗಳಿಸಿದ್ದು, ಕಡು ಬಡತನದಲ್ಲಿಯೂ ಸಾಧನೆ ಮಾಡಿರುವುದು ವಿಶೇಷವಾಗಿದೆ.

ಗಣಿತದಲ್ಲಿ ಐದು ವಿದ್ಯಾರ್ಥಿಗಳು ಶೇಕಡಾ 100 ಅಂಕ ಗಳಿಸಿದ್ದು, ಭೌತಶಾಸ್ತ್ರ ಮತ್ತು ಕನ್ನಡ ವಿಷಯಗಳಲ್ಲಿ ತಲಾ ಒಬ್ಬರು ಶತಪ್ರತಿಶತ ಅಂಕ ಪಡೆದಿದ್ದಾರೆ. ಒಟ್ಟು 42 ವಿದ್ಯಾರ್ಥಿಗಳು 80% ಕ್ಕಿಂತ ಹೆಚ್ಚು ಅಂಕ ಗಳಿಸಿರುವುದು ಕಾಲೇಜಿನ ಶೈಕ್ಷಣಿಕ ಮಟ್ಟವನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಪಿ. ವೇಣುಗೋಪಾಲ್ (ರಾಮಕೃಷ್ಣ ಆಶ್ರಮ, ಮಾನ್ವಿ) ಮಾತನಾಡಿ, "ನಿರಂತರ ಅಭ್ಯಾಸ, ದೃಢ ಸಂಕಲ್ಪ ಮತ್ತು ಏಕಾಗ್ರತೆ ಇದ್ದಾಗ ಮಾತ್ರ ಯಶಸ್ಸು ಸಾಧ್ಯ. ಗುರಿ ಸ್ಪಷ್ಟವಾಗಿಟ್ಟು ಪರಿಶ್ರಮಿಸಿದರೆ ಯಾವುದೇ ಸಾಧನೆ ಅಸಾಧ್ಯವಲ್ಲ" ಎಂದು ವಿದ್ಯಾರ್ಥಿಗಳಿಗೆ ಸಂದೇಶ ನೀಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಮುರುಗಣ್ಣ ಎನ್. ದೇಸಾಯಿ, ವಿಜಯಕುಮಾರ ದೇಸಾಯಿ, ಮಹಾದೇವಿ ದೇಸಾಯಿ, ಸುನೀತಾ ಪಾಟೀಲ್, ಸುರೇಶ ರೆಡ್ಡಿ, ಬಸವನಗೌಡ ಪಾಟೀಲ್, ಸುರೇಶ ಬಾಬು ರೆಡ್ಡಿ, ಹಿರಿಯ ಪತ್ರಕರ್ತ ರಾಘವೇಂದ್ರ ಕಾಮನಟಗಿ, ಕವಿತಾ ಬಿ. ದೇಸಾಯಿ, ಅಕಾಡೆಮಿಕ್ ಡೈ–ರೆಕ್ಟರ್ ಪಾಲಾಕ್ಷಯ್ಯ ಹಿರೇಮಠ, ಸಂತೋಷ್ ಮಾರ್ಟಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾಲೇಜಿನ ಉಪನ್ಯಾಸಕರು ಹಾಗೂ ಸಾಧನೆ ಮಾಡಿದ ವಿದ್ಯಾರ್ಥಿಗಳ ಪಾಲಕರು ಸಹ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಈರಮ್ಮ ನಿರೂಪಿಸಿದರು. ಕೊನೆಯಲ್ಲಿ ವಿಜಯಕುಮಾರ ದೇಸಾಯಿ ಅಧ್ಯಕ್ಷೀಯ ಭಾಷಣದೊಂದಿಗೆ ಸಮಾರೋಪ ನೀಡಿದರು.

# ಭಾರತ ಸ್ಕೌಟ್ಸ್, ಗೈಡ್ಸ್ ಸೇವಾ ಮನೋಭಾವ ಬೆಳೆಸುತ್ತವೆ: ದಳವಾಯಿ



• ಮಲ್ಲಮ್ಮ ನುಡಿ ವಾರ್ತೆ , ಬಾಗಲಕೋಟೆ

ಸಾಮಾಜಿಕ ಕ್ಷೇತ್ರದಲ್ಲಿಂದು ಸೇವಾ ಮನೋಭಾವದ ಅವಶ್ಯಕತೆಯಿದ್ದು, ಸೇವೆಯಿಂದ ಪ್ರಾಮಾಣಿಕ ವ್ಯಕ್ತಿತ್ವ ಬೆಳೆಯುತ್ತದೆ ಎಂದು ಬಾಗಲಕೋಟೆ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಎಸ್.ಎಸ್. ದಳವಾಯಿ ಹೇಳಿದರು. ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಆಶ್ರಯದಲ್ಲಿ ಸೋಮವಾರ ಕಾಲೇಜಿನ ವಿಶ್ವಮ

# ಇಂದು ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ–2026ರ ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ನೀತಿ ಸಂಹಿತೆ ಜಾರಿಯಾಗಿರುವದರಿಂದ ಎಪ್ರೀಲ್ 14 ರಂದು ಆಚರಿಸಲ್ಪಡುವ ಡಾ.ಬಿ.ಆರ್.ಅಂಬೇಡ್ಕರವರ ಜಯಂತಿಯನ್ನು ಸರಳವಾಗಿ ಆಚರಿಸಲಾಗುತ್ತಿದೆ. ಅಂದು ಇಲಕಲ್ಲ ತಹಶೀಲ್ದಾರ ಕಚೇರಿಯಲ್ಲಿ ಬೆಳಿಗ್ಗೆ 9.30ಕ್ಕೆ ಹಾಗೂ ಹುನಗುಂದ ತಹಶೀಲ್ದಾರ ಕಚೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸುವ ಮೂಲಕ ಸರಳವಾಗಿ ಆಚರಿಸಲಾಗುವುದೆಂದು ಇಲಕಲ್ಲ ಹಾಗೂ ಹುನಗುಂದ ತಹಶೀಲ್ದಾರರು ಹಾಗೂ ಡಾ.ಬಿ.ಆರ್. ಅಂಬೇಡ್ಕರ ಜಯಂತಿ ಆಚರಣಾ ಸಮಿತಿಯ ಅಧ್ಯಕ್ಷರು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಷ್ಠಿತ ಶಾಲೆ : 6ನೇ ತರಗತಿ ಪ್ರವೇಶಕ್ಕೆ ಅರ್ಜಿ

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಾದ ಹೋಲಿಸೆಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಶಾಲೆ, ಬೀಳಗಿ, ನೆಹರೂ ಇಂಟರ್ ನ್ಯಾಷನಲ್ ಶಾಲೆ, ಗುಳೇದಗುಡ್ಡ, ಶ್ರೀ ಲಕ್ಷ್ಮೀ ರಂಗನಾಥ ಪ್ರಾಥಮಿಕ ಶಾಲೆ ಸೂಳಿಕೇರಿ ಹಾಗೂ ಎಕ್ಸಪರ್ಟ ಆಂಗ್ಲ ಮಾಧ್ಯಮ ಶಾಲೆ ಲೋಕಾಪೂರ ಶಾಲೆಗೆ ಪರಿಶಿಷ್ಟ ಪಂಗಡದ 5ನೇ ತರಗತಿ ಪಾಸಾದ ವಿದ್ಯಾರ್ಥಿಗಳನ್ನು 2026–27ನೇ ಸಾಲಿಗೆ 6ನೇ ತರಗತಿ ಸೇರ್ಪಡೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ಕುಟುಂಬದ ವಾರ್ಷಿಕ ಆದಾಯ 2 ಲಕ್ಷ ಮೀರಬಾರದು. 5ನೇ ತರಗತಿಯಲ್ಲಿ ಕನಿಷ್ಟ ಶೇ.60 ಅಂಕ ಪಡೆದಿರಬೇಕು. ಆಯ್ಕೆಯಲ್ಲಿ ಬಾಲಕಿಯರಿಗೆ ಶೇ.50 ಹಾಗೂ ಗ್ರಾಮೀಣ ವಿದ್ಯಾರ್ಥಿಗಳಿಗೆ ಶೇ.50 ರಷ್ಟು ಮೀಸಲಿರಿಸಿದೆ. ಪ್ರವೇಶ ಪರೀಕ್ಷೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಎಪ್ರೀಲ್ 15 ರಿಂದ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಕೊನೆಯ ದಿನ ಮೇ 4 ಆಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬಾಗಲಕೋಟೆ, ಬಾದಾಮಿ, ಹುನಗುಂದ, ಬೀಳಗಿ, ಮುಧೋಳ, ಜಮಖಂಡಿ ಕಚೇರಿಗಳನ್ನು ಹಾಗೂ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಬಾಗಲಕೋಟೆ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಬ್ಯೂಟಿ ಪಾರ್ಲರ್, ಹಪ್ಪಳ, ಉಪ್ಪಿನಕಾಯಿ ತಯಾರಿಕಾ ತರಬೇತಿ

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಕೆನರಾ ಬ್ಯಾಂಕ್ ಆರ್‌ಸೆಟಿ ಸಂಸ್ಥೆ ಹಳಿಯಾಳದಿಂದ 18 ರಿಂದ 50 ವರ್ಷದೊಳಗಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರಿಗೆ ಮೇ ತಿಂಗಳಲ್ಲಿ ಬ್ಯೂಟಿ ಪಾರ್ಲರ್ ಹಾಗೂ ಹಪ್ಪಳ, ಉಪ್ಪಿನಕಾಯಿ ಮತ್ತು ಮಸಾಲಾ ಪೌಡರ ತಯಾರಿಕಾ ಉಚಿತ ತರಬೇತಿ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿ ಊಟ ವಸತಿಯೊಂದಿಗೆ ಸಂಪೂರ್ಣವಾಗಿ ಉಚಿತವಾಗಿದ್ದು, ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳೊಂದಿಗೆ ನೋಂದಾಯಿಸಲು ಎಪ್ರೀಲ್ 30 ರೊಳಗಾಗಿ ಮೊನಂ.8217236973, 9483485489, 9482188780ಗೆ ಕರೆ ಮಾಡಿ ಮಾಡಬಹುದಾಗಿದೆ ಎಂದು ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ್ಯೋತಿ ಕ್ರೆಡಿಟ್ ಬ್ಯಾಂಕಿನ ಅಧ್ಯಕ್ಷರಾಗಿ ಅಶೋಕ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ



ನಗರದ ಜ್ಯೋತಿ ಕೋ–ಆಫ್ ಕ್ರೆಡಿಟ್ ಸೊಸೈಟಿ(ಬ್ಯಾಂಕಿನ) ಅಧ್ಯಕ್ಷರಾಗಿ ಅಶೋಕ ಲಾಗಲೋಟಿ, ಉಪಾಧ್ಯಕ್ಷರಾಗಿ ಮುತ್ತಪ್ಪ ಕೆಂಪಣ್ಣವರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿರ್ದೇಶಕರಾಗಿ ಮಲ್ಲನಗೌಡ ನಾಡಗೌಡರ, ಬಸಲಿಂಗಪ್ಪ ಹೊಕ್ರಾಣಿ, ಸಿದ್ದಣ್ಣ ಕಾಖಂಡಕಿ, ನಿಂಗಣ್ಣ ಗೋಡಿ, ಧರಿಯಪ್ಪ ಯಳ್ಳಿಗುತ್ತಿ, ಸಂಗಪ್ಪ ಕೊಪ್ಪದ, ಚಂದ್ರಕಾಂತ ಕೇಸನೂರ, ಪ್ರಭಾವತಿ ಹೆರಕಲ್, ಕವಿತಾ ಏಳೆಮ್ಮಿ, ಪರಸಪ್ಪ ಮಾದರ ಆಯ್ಕೆಯಾಗಿದ್ದಾರೆ ಎಂದು ಬ್ಯಾಂಕಿನ ವ್ಯವಸ್ಥಾಪಕ ಬಾಬು ನಾಡಗೌಡ ತಿಳಿಸಿದ್ದಾರೆ.

# ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ , ಬಳ್ಳಾರಿ

ನಗರದ ಕೌಲ್ ಬಜಾರ್ ಪೊಲೀಸ್ ಠಾಣೆಯ ವ್ಯಾಪ್ತಿಯ ಬಿಎಂಸಿಆರ್‌ಸಿ ಆಸ್ಪತ್ರೆಯ ಸ್ತ್ರೀ ರೋಗ ಮತ್ತು ಪ್ರಸೂತಿ ವಿಭಾಗದ ವಾರ್ಡ್ ಹತ್ತಿರ ಸುಮಾರು 45 ವರ್ಷದ ಅನಾಮಧೇಯ ವ್ಯಕ್ತಿಯು ಮಲಗಿದ್ದು, ಸ್ಥಳದಲ್ಲಿಯೇ ಮೃತಪಟ್ಟಿರುತ್ತಾನೆ. ಈ ಕುರಿತು ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಬಗ್ಗೆ ಮಾಹಿತಿ ಇರುವುದಿಲ್ಲ. ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 5.8 ಅಡಿ, ಕೋಲುಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಕಪ್ಪು–ಬಿಳಿ ಕೂದಲು, ಕುರುಚಲು ಗಡ್ಡ ಬಿಟ್ಟಿರುತ್ತಾನೆ. ಹಸಿರು ಬಣ್ಣದ ತುಂಬು ತೋಳಿನ ಅಂಗಿ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ಇದ್ದಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ಪಿಐ ಮೊ.9480803047, ಪಿಎಸ್‌ಐ ಮೊ.9480803084, ದೂ.08392–240731 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕರ್ನಾಟಕ ರಾಜ್ಯ ರೈತ ಸಂಘ ತಾಲೂಕ ಘಟಕ ಉದ್ಘಾಟನೆ



**ಹಗರಿಬೊಮ್ಮನಹಳ್ಳಿ:** ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಈ ದಿನ ಹಗರಿಬೊಮ್ಮನಹಳ್ಳಿ ತಾಲೂಕು, ಮರಬ್ಬಿಹಾಳ ತಾಂಡ ಗ್ರಾಮ ಘಟಕ ಉದ್ಘಾಟನೆ ಮಾಡಲಾಯಿತು ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಧ್ಯಕ್ಷರಾದ ಜೆ.ಎಂ. ವೀರ ಸಂಗಯ್ಯ ಮತ್ತು ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಗೋಣಿಬಸಪ್ಪ. ಹ.ಬೊ.ಹಳ್ಳಿ ತಾಲೂಕ ಅಧ್ಯಕ್ಷ ಬಸವನಗೌಡ. ತಾಲೂಕು ಪ್ರಧಾನ ಕಾರ್ಯದರ್ಶಿ. ಎ. ನಾಗರಾಜ್. ವಿಜಯನಗರ ಜಿಲ್ಲಾ ಯುವ ಘಟಕದ ಜಿಲ್ಲಾಧ್ಯಕ್ಷ ರವಿಕುಮಾರ್ ತಂಬ್ರಹಳ್ಳಿ.ಇನ್ನು ಇತರರು ಉಪಸ್ಥಿತಿಯಲ್ಲಿದ್ದರೂ.

**ಗ್ರಾಮ ಘಟಕದ ಪದಾಧಿಕಾರಿಗಳ ಪಟ್ಟಿ**

ಗೌರವಾಧ್ಯಕ್ಷರಾಗಿ ಪರಶುರಾಮ್ ನಾಯಕ್, ಅಧ್ಯಕ್ಷರಾಗಿ ಸೇವಾ ನಾಯಕ್, ಕಾರ್ಯಧ್ಯಕ್ಷರಾಗಿ ಚಂದ್ರ ನಾಯಕ್, ಪ್ರಧಾನ ಕಾರ್ಯದರ್ಶಿಯಾಗಿ ಯಂಕಾ ನಾಯ್ಕ, ಸಂಘಟನಾ ಕಾರ್ಯದರ್ಶಿಯಾಗಿ ಪ್ರಕಾಶ್ ನಾಯಕ, ಖಜಾಂಚಿಯಾಗಿ ರಾಮ ನಾಯ್ಕ, ಉಪಾಧ್ಯಕ್ಷರಾಗಿ ಪೂಜಾರಿ ಚಂದ್ರನಾಯಕ್, ಷಣ್ಮುಖ ನಾಯ್ಕ, ಯಮುನಾ ನಾಯ್ಕ, ಶಂಕರ್ ನಾಯ್ಕ, ಕಾರ್ಯದರ್ಶಿಯಾಗಿ. ರಮೇಶ್ ನಾಯ್ಕ, ಸಹ ಕಾರ್ಯದರ್ಶಿಯಾಗಿ ಟೀಕೆ ನಾಯ್ಕ, ಸೂರ್ಯನಾಯ್ಕ, ರಣಧೀರ ನಾಯಕ, ಜಗ್ಗು ನಾಯಕ, ಸಂಚಾಲಕರಾಗಿ ಶಂಕರ್ ನಾಯ್ಕ, ಮೂರ್ತಿ ನಾಯ್ಕ, ಯಂಕಾನಾಯ್ಕ, ಸಣ್ಣ ರಾಮ ನಾಯಕ, ಅರ್ಜುನ್ ನಾಯಕ, ಮುನ್ನಿ ನಾಯಕ,ಅನಿಲ್ ಕುಮಾರ್, ಸೋಮ್ಲಿ ನಾಯ್ಕ ಇವರನ್ನು ಮರಬ್ಬಿಹಾಳ ತಾಂಡದ ಗ್ರಾಮ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

## ನೂತನ ರಥೋತ್ಸವದ ತೇರು ಎಳೆಯಲು ಸಜ್ಜಾಗಿರುವ ಭಟಪನಹಳ್ಳಿಯ ಭಕ್ತರು



**ಕುಕನೂರ:** ನಮ್ಮ ಊರು ಮಾದರಿ ಗ್ರಾಮವಾಗಿ ,ಧಾರ್ಮಿಕ ಕೇತ್ರವಾಗಿ ಬೆಳೆಯಲಿ ,ನಾವೆಲ್ಲರು ಧರ್ಮದ ಹಾದಿಯಲ್ಲಿಸಾಗಿ ಭಯ ಭಕ್ತಿಯಿಂದ ಜಾತ್ರೆಯನ್ನು ಯಶಸ್ವಿಗೋಳಿಸೋಣ ಎಂದು ಕರ್ನಾಟಕ ಲೋಕಸೇವಾ ಆಯೋಗದ ಮಾಜಿ ಸದಸ್ಯ ಎಚ್.ಡಿ ಪಾಟೀಲ್ ಅವರು ಮಾತನಾಡಿ ಸರ್ವರ ಸಹಕಾರದಿಂದ ಕಾರ್ಯಕ್ರಮ ಯಶಸ್ವಿಗೋಳಿಸಲು ಸಾದ್ಯ ಎಂದರು. ಕುಕನೂರಿನ ಅನ್ನದಾನೇಶ್ವರ ಮಠದ ಮಹಾದೇವ ಸ್ವಾಮೀಜಿ ಅವರು ಸಾನಿದ್ಯವಹಿಸಿ ಮಾತನಾಡಿ ,ಭಟಪನಳ್ಳಿಯ ಭಕ್ತರ ಸೇವೆ ಅಪಾರವಾದದು ತಾವೆಲ್ಲರೂ ನೂತನ ತೇರನ್ನು ಒಂದು ವರ್ಷದಲ್ಲಿ ನಿರ್ಮಾಣ ಮಾಡಿ ತಾವು ಭಕ್ತಿಯಿಂದ ತೇರು ಎಳೆಯುವದಕ್ಕೆ ಕಂಕಣ ಬದ್ದರಾಗಿ ಶ್ರಮಿಸಿದ್ದಿರಿ ತಮ್ಮ ಕಾರ್ಯ ಶ್ಯಾಘನೀಯವಾದದು ಎಂದು ತಾಲೂಕಿನ ಭಟಪನಹಳ್ಳಿ ಗ್ರಾಮದ ಶ್ರೀ ಭೀಮಾಂಬಿಕಾ ದೇವಿಯ ಮಠದಲ್ಲಿ 29 ನೇಯ ಜಾತ್ರಾ ಹಾಗು ಪುರಾಣ ಹಾಗು ಸಾಮೂಹಿಕ ವಿವಾಹ ಕಾರ್ಯಕ್ರಮ ಮತ್ತು ನೂತನ ಮಹಾರಥೋತ್ಸವದಂಗವಾಗಿ ಪುರಾಣ ಕಾರ್ಯಕ್ರಮದಲ್ಲಿ ಮಾತನಾಡಿದರು. ಪುರಾಣದಲ್ಲಿ ಶ್ರೀ ಭೀಮಾಂಬಿಕಾದೇವಿಯ ನಾಮಕರಣದ ತೋಟ್ಟಿಲು ಕಾರ್ಯಕ್ರಮ, ಶ್ರೀ ಭೀಮಾಂಬಿಕಾ ದೇವಿಯ ಮದುವೆ ಸಮಾರಂಭ, ಸಿಮಂತ ಕಾರ್ಯಕ್ರಮ ಹಾಗು ಉಡಿ ತುಂಬುವ ಕಾರ್ಯಕ್ರಮಗಳು ವಿಜೃಂಭಣೆಯಿಂದ ಸಾಗಿಬಂದವು, ಕಲ್ಲೂರಿನ ಕಲ್ಲಯ್ಯ ಶಾಸ್ತ್ರೀ, ಅವರು ಅಮ್ಮನ ಜೀವನ ಚರಿತ್ರೆಯ ಬಗ್ಗೆ ಪ್ರವಚನ ನೀಡಿದರು. ಸಂಗೀತಾ ಬಳಗದ ಹಾಲಕೇರಿಯ ಬಡಿಗೇರ ದ್ಯಾಮಣ್ಣ ಗವಾಯಿ, ಸಿದ್ನೇಕೊಪ್ಪದ ಖಾದರಸಾಬ ಇವರಿಂದ ಸಂಗೀತ ಕಾರ್ಯಕ್ರಮ ಜರುಗಿತು .ಈ ವೇಳೆ ಹಿರಿಯರಾದ ವೀರಯ್ಯಸ್ವಾಮಿ ಭದ್ರಾಪೂರಮಠ, ಹಂಚ್ಯಾಳಪ್ಪ ಕಲ್ಲಗೋಡಿ,ಮಲ್ಲಿಕಾರ್ಜುನ ರಡ್ಡೇರ,ಮಲ್ಲಪ್ಪಗುಡಿಹಿಂದಲ,ರಾಜಶೇಖರ ಕರಮುಡಿ, ಮಹೇಶ ದೊಡ್ಡಮನಿ, ಲಕ್ಷ್ಮೀ ಕುಡಗುಂಟಿ ಸೇರಿದಂತೆ ಇತರರು ಇದ್ದರು.

## ಅರ್ಹತೆ ಇಲ್ಲದವರಿಗೆ ಅಧಿಕಾರ

**ಕಲಬುರಗಿ:** ಅರ್ಹತೆ ಇಲ್ಲದವರನ್ನು ಅಧಿಕಾರ ನೀಡುತ್ತಿರುವ ಶಾಸಕ ಎಂ.ವೈ.ಪಾಟೀಲ ಮತ್ತು ಅವರ ಸುಪುತ್ರ ಅರುಣಕುಮಾರ ಪಾಟೀಲ ನಡುವಳಿಕೆ ವಿರುದ್ಧ ನಮ್ಮ ಹೋರಾಟ ಮುಂದುವರುತ್ತದೆ ಎಂದು ಮಾಜಿ ಸಚಿವ ಮಾಲಿಕಯ್ಯಾ ಗುತ್ತೇದಾರ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಎಂ.ವೈ.ಪಾಟೀಲ ಅವರನ್ನು ಮೂಲೆಗುಂಪು ಮಾಡಿ ಪುತ್ರ ಅರುಣಕುಮಾರ ಪಾಟೀಲ ಅವರೇ ತಾಲ್ಲೂಕಿನಲ್ಲಿ ರಾಜ್ಯಭಾರ ಮಾಡುತ್ತಿದ್ದಾರೆ. ಹಿಂದುಳಿದ ವರ್ಗಗಳ ಮುಖಂಡರನ್ನು ಗುರುತಿಸಿ ಅಧಿಕಾರ ನೀಡಬೇಕು. ಅರುಣಕುಮಾರ ಪಾಟೀಲ ಮುನಿಮನಾಗಿ ಕೆಲಸ ಮಾಡ್ತಿಲ್ಲ. ಶಾಸಕರೇ ಅರುಣಕುಮಾರ ಪಾಟೀಲ ಕೈಯಲ್ಲಿ ಮುನಿಮನಾಗಿ ಕೆಲಸ ಮಾಡುತ್ತಿರುವುದು ಇಡೀ ಕ್ಷೇತ್ರದ ಜನರಿಗೆ ಗೊತ್ತಿರುವ ವಿಷಯ ಎಂದು ಗುತ್ತೇದಾರ ತಿಳಿಸಿದರು.

ಶಾಸಕ ಮತ್ತು ಪುತ್ರ ಅರುಣಕುಮಾರ ಪಾಟೀಲ ಅವರಿಗೆ ಅಷ್ಟೇ ಕಾರ್ಯಕತರು, ಅಭಿಮಾನಿಗಳು ಮತ್ತು ಮುಖಂಡರು ಇಲ್ಲ. ನಮಗೂ ಕೂಡಾ ಸಾವಿರಾರು ಹಿರಿಯ ಮುಖಂಡರು, ಕಾರ್ಯಕರ್ತರು ಇದ್ದಾರೆ. ಮಾಲಿಕಯ್ಯಾ ಗುತ್ತೇದಾರಗೆ ಯಾರು ಮೂಲೆಗುಂಪು ಮಾಸಲು ಸಾಧ್ಯವಿಲ್ಲ ಎಂದು ಗುಡುಗಿದರು. ಶಾಸಕರ ಚೇಲಾಗಳು ನಾವು ಯಾವ ಪಕ್ಷದಲ್ಲಿ ಇದ್ದಾರೆ ಎಂದು ಪ್ರಶ್ನೆ ಮಾಡುತ್ತಾರೆ. ನನ್ನ ರಕ್ತದಲ್ಲೇ ಕಾಂಗ್ರೆಸ್ ಪಕ್ಷದ ರಕ್ತ ಹರಿಯುತ್ತಿದೆ ಎಂದು ಶಾಸಕರ ಆಪ್ತರಿಗೆ ತಿರುಗೇಟು ನೀಡಿದರು.

# ಗ್ಯಾರಂಟಿಗಳೂ ಒಂದು ವಿಧದ ಅಭಿವೃದ್ಧಿಯೇ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಮಗಳೂರು

ಜನಕಲ್ಯಾಣಕ್ಕೆ ಒತ್ತಾಸೆಯಾಗಿರುವ ಸರ್ಕಾರದ ಗ್ಯಾರಂಟಿ ಯೋಜನೆಗಳೂ ಒಂದು ವಿಧದ ಅಭಿವೃದ್ಧಿಯಾಗಿದ್ದು, ಗ್ಯಾರಂಟಿಗಳ ನಡುವೆಯೂ ರಾಜ್ಯದ ಆರ್ಥಿಕ ಸ್ಥಿತಿ ಕೇಂದ್ರಕ್ಕಿಂತ ಉತ್ತಮವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಚಿಕ್ಕಮಗಳೂರಿನ ಹಂದೂರು ಗ್ರಾಮದಿಂದ ನರಸಿಂಹರಾಜಪುರಕ್ಕೆ ಸಂಪರ್ಕಿಸುವ ಭದ್ರಾ ಹಿನ್ನೀರಿನಲ್ಲಿ ನಿರ್ಮಿಸಿರುವ ಸೇತುವೆ ಮತ್ತು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಉದ್ಘಾಟನೆ ಶಂಕುಸ್ಥಾಪನೆ ಹಾಗೂ ಸವಲತ್ತುಗಳ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದು 36 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗಿರುವ ಸೇತುವೆಯೂ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಇಂದು ಚಾಲನೆ ನೀಡಲಾಗಿದೆ. ವಿರೋಧಪಕ್ಷದವರು ಅಭಿವೃದ್ಧಿ ಕೆಲಸಗಳಿಗೆ ಹಣವಿಲ್ಲ , ಗ್ಯಾರಂಟಿಗಳ ನಂತರ ಖಜಾನೆ ಖಾಲಿಯಾಗಿವೆ, ಅಭಿವೃದ್ಧಿ ಶೂನ್ಯ ಎಂದು ಟೀಕಿಸುತ್ತಾರೆ. ಆದರೆ ಗ್ಯಾರಂಟಿಗಳ ಜೊತೆಗೆ ಅಭಿವೃದ್ಧಿಯನ್ನೂ ನಮ್ಮ ಸರ್ಕಾರ ಸಾಧ್ಯವಾಗಿಸಿದೆ ಎಂದರು.

**ಸಮಸಮಾಜವನ್ನು ನಿರ್ಮಿಸುವುದೇ ಸಂವಿಧಾನದ ಆಶಯ:** ಗ್ಯಾರಂಟಿಗಳೂ ಒಂದು ವಿಧದ ಅಭಿವೃದ್ಧಿಯಾಗಿದೆ.



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ರಾಜಕೀಯ ಸ್ವಾತಂತ್ರ್ಯ ಯಶಸ್ವಿಯಾಗಲು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸ್ವಾತಂತ್ರ್ಯ ಅತ್ಯಗತ್ಯ ಎಂದಿದ್ದರು. ವಿರೋಧಪಕ್ಷದವರು ಅಂಬೇಡ್ಕರ್ ರವರ ಈ ಚಿಂತನೆಯ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು ಎಂದರು.

**ಕೇಂದ್ರದಿಂದ ರಾಜ್ಯದ ಜನರಿಗೆ ಅನ್ಯಾಯ**

ಮೈಸೂರು ಮಹಾರಾಜರಾಗಿದ್ದ ನರಸಿಂಹರಾಜ ಒಡೆಯರ್ ಅವರ ಕಾಲದಲ್ಲಿ ಎಡಳ್ಳಿಯಾಗಿದ್ದ ಈ ಪ್ರದೇಶಕ್ಕೆ ನರಸಿಂಹರಾಜಪುರ ಎಂದು ನಾಮಕರಣವಾಯಿತು. ಈ ಭಾಗದ ಅಭಿವೃದ್ಧಿಯ ಉದ್ದೇಶದಿಂದ ಇಲ್ಲಿನ ಶಾಸಕರ ಒತ್ತಾಸೆಯಿಂದ ಇಂದು ಸೇತುವೆ ನಿರ್ಮಾಣ ಸಾಧ್ಯವಾಗಿದೆ. ಉಳಿದಂತೆ ರಸ್ತೆ ಅಗಲೀಕರಣ, ಬ್ಯಾರೇಜ್ ಕಂ ಬ್ರಿಡ್ಜ್ ನಿರ್ಮಾಣ, ಪ್ರವಾಸೋದ್ಯಮವೂ ಸೇರಿದಂತೆ ಹಲವು ಬೇಡಿಕೆಗಳ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರವು 2023-24ರ ಆಯವ್ಯಯದಲ್ಲಿ 5300 ಕೋಟಿಗಳನ್ನು ಘೋಷಿಸಿತು. ಆದರೆ ಇದುವರೆಗೆ ಈ ಅನುದಾನ ನೀಡಿಲ್ಲ. ಈ ಮೂಲಕ ರಾಜ್ಯದ ಜನರಿಗೆ ಕೇಂದ್ರ ದ್ರೋಹವೆಸಗಿದೆ ಎಂದರು.

ಕಾಂಗ್ರೆಸ್ ಗ್ಯಾರಂಟಿಗಳನ್ನು ಬಿಜೆಪಿ ಅನುಕರಿಸುತ್ತಿದೆ. ಕಾಂಗ್ರೆಸ್ ಸರ್ಕಾರವೊಂದೇ ಕೊಟ್ಟ ಮಾತಿನಂತೆ ನಡೆಯುವ ಸರ್ಕಾರವಾಗಿದೆ ಎಂದರು. ನಮ್ಮ ಸರ್ಕಾರದಿಂದ ಗ್ಯಾರಂಟಿಗಳಿಗೆ ಇದುವರೆಗೆ 1.30 ಲಕ್ಷ ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ರಾಜ್ಯದ ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿಯವರು ಇತರೆ ರಾಜ್ಯಗಳಲ್ಲಿ ಅವುಗಳನ್ನೇ ಅನುಸರಿಸುತ್ತಿದ್ದಾರೆ. ಕೇಂದ್ರಕ್ಕಿಂತ ರಾಜ್ಯದ ಆರ್ಥಿಕ ಸ್ಥಿತಿ ಉತ್ತಮವಾಗಿದೆ ಎಂದರು.

**ರಾಜ್ಯದ ಆರ್ಥಿಕತೆ ಬಗ್ಗೆ ಬಿಜೆಪಿ ಅಪಪ್ರಚಾರ**

ಕೇಂದ್ರದ ಜಿಡಿಪಿ ದರ 7.14 ರಷ್ಟಿದ್ದರೆ, ರಾಜ್ಯದ ಜಿಡಿಪಿ 8.1 ರಷ್ಟಿದೆ. ದೇಶದಲ್ಲಿ 53.11 ಲಕ್ಷ ಕೋಟಿಗಳಿದ್ದ ಸಾಲದ ಮೊತ್ತ, ಪ್ರಸ್ತುತ ಪ್ರಧಾನಿ ಮೋದಿಯವರ ಅಧಿಕಾರಾವಧಿಯಲ್ಲಿ 218 ಲಕ್ಷ ಕೋಟಿರೂ.ಗೆ ತಲುಪಿದೆ. ರಾಜ್ಯದ ಆರ್ಥಿಕ ಬೆಳವಣಿಗೆ ಕೇಂದ್ರಕ್ಕಿಂತ ಗಣನೀಯವಾಗಿ ಹೆಚ್ಚಿದೆ. ಕರ್ನಾಟಕದ ಆರ್ಥಿಕ ಸ್ಥಿತಿಯು ಸದೃಢವಾಗಿದ್ದು, ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳಿಗೆ ಪೂರಕವಾಗಿದೆ. ಆದರೆ ರಾಜ್ಯದ ಆರ್ಥಿಕ ಪರಿಸ್ಥಿತಿಯ ಬಗ್ಗೆ ಅಪಪ್ರಚಾರ ನಡೆಸುವ ಬಿಜೆಪಿಯವರಿಗೆ ಸುಳ್ಳೇ ಮನೆದೇವರಾಗಿದೆ ಎಂದರು.

**ನಮ್ಮ ಸರ್ಕಾರ ನುಡಿದಂತೆ ನಡೆದಿದೆ**

ಬಿಜೆಪಿಯ ರಾಜ್ಯಾಧ್ಯಕ್ಷ ವಿಜಯೇಂದ್ರರವರು ರಾಜ್ಯದ ಆರ್ಥಿಕತೆ ವಸ್ತುಸ್ಥಿತಿಯ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಟೀಕಿಸಿದ್ದಾರೆ. ಅವರು ಬಜೆಟ್ ನ ಅಂಶಗಳ ಬಗ್ಗೆ ಮನನ ಮಾಡಿಕೊಳ್ಳದೇ, ಕೇವಲ ಪ್ರಚಾರಕ್ಕಾಗಿ ಹೇಳಿಕೆ ನೀಡುತ್ತಿದ್ದಾರೆ. 15ನೇ ಹಣಕಾಸಿನ ಆಯೋಗದಲ್ಲಿ ಶಿಫಾರಸ್ಸು ಮಾಡಿದ್ದ ಅನುದಾನವನ್ನು ಕೇಂದ್ರ ನೀಡದೇ, ರಾಜ್ಯದ ಜನರಿಗೆ ಅನ್ಯಾಯ ಮಾಡಲಾಗಿದೆ. ಬಿಜೆಪಿಯ ಪ್ರಧಾನಿ ಮೋದಿಯವರು ನೀಡಿದ ಯಾವುದೇ ಭರವಸೆಗಳನ್ನು ಈಡೇರಿಸಿಲ್ಲ. ಅವರ ಒಳ್ಳೆಯ ದಿನಗಳು ಬರಲೇ ಇಲ್ಲ. ಆದರೆ ನಮ್ಮ ಸರ್ಕಾರ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ, ನುಡಿದಂತೆ ನಡೆದಿದೆ. ಜನರ ದಾರಿತಪ್ಪಿಸುವ ಬಿಜೆಪಿಯನ್ನು ನಂಬಬಾರದು ಎಂದರು.

## ಪತ್ರಕರ್ತರ ರಾಜ್ಯ ಸಮ್ಮೇಳನ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ರಾಜ್ಯದ ಶಿರಭಾಗದ ಬೀದರ ಸರ್ವಧರ್ಮಗಳ ಹಾಗೂ ಶರಣರ ನೆಲೆವೀಡು. ಇಲ್ಲಿ ಎರಡು ದಿನಗಳ ಪತ್ರಕರ್ತರ ರಾಜ್ಯ ಸಮ್ಮೇಳನ ಯಶಸ್ವಿ ಆಗಿ ನಡೆಯಿತು. (ಏ.11-12) ರಾಜ್ಯದ ಎಲ್ಲ ಜಿಲ್ಲೆಗಳ ಸಾವಿರಾರು ಪತ್ರಕರ್ತರು ಭಾಗವಹಿಸಿದ್ದರು. ವಿವಿಧ ಗೋಷ್ಠಿಗಳಲ್ಲಿ ಅನುಭವಿ ಪತ್ರಕರ್ತರು ಪ್ರಬಂಧ ಮಂಡಿಸಿದರು. ಕೆಲವು ಪ್ರಬಂಧಗಳಂತು ಅನೇಕ ಹೊಸ ಮಾಹಿತಿ ಒಳಗೊಂಡಿದ್ದವು. ಅದರಲ್ಲು ಪತ್ರಿಕೋದ್ಯಮಕ್ಕೆ ಸವಾಲಾಗಿರುವ AI - ಕೃತಕ ಬುದ್ಧಿಮತ್ತೆ, ಪತ್ರಕರ್ತರಿಗೆ ಅಗತ್ಯವಾದ ಮಾಹಿತಿ ತಂತ್ರಜ್ಞಾನ, ಗಡಿಭಾಗದ ಭಾಷೆ, ಸಾಂಸ್ಕೃತಿಕ ಸಮಸ್ಯೆ ಹಾಗೂ ಸವಾಲುಗಳು, ಗಾಂಧಿ - ಅಂಬೇಡ್ಕರ್ ಪತ್ರಕರ್ತರಾಗಿ ಸಾಮಾಜಿಕ ಅರಿವು ಮೂಡಿಸಿದ ಬಗೆಗಿನ ಹೊಸ ಒಳವುಗಳು ನಿಜ ಪತ್ರಕರ್ತ ಹಾಗೂ ಜನ ಸಾಮಾನ್ಯನಿಗೆ ಅರಿವು ಮೂಡಿಸುವಂತಿದ್ದವು. ಪತ್ರಕರ್ತರು ಬದಲಾದ



ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು. ಇಲ್ಲವಾದರೆ ಮುಂದೆ ಕೆಲಸ ಕಳೆದುಕೊಳ್ಳುವ ಆತಂಕವೂ ವ್ಯಕ್ತವಾಯಿತು.

ನನಗಂತೂ ಈ ಉಪನ್ಯಾಸಗಳು ಉಪಯುಕ್ತ ಮಾಹಿತಿ ಒದಗಿಸಿದವು. ಬೀದರದಲ್ಲಿ ಈ ಸಮ್ಮೇಳನ ಯಶಸ್ವಿ ಆಗಲು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರ ಸಹಕಾರ, ಪತ್ರಕರ್ತರ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹಾಗೂ ಅವರ ತಂಡದ ಶ್ರಮ ಕಾರಣ. ವೈವಿಧ್ಯಮಯ ಮತ್ತು ರುಚಿಕರವಾದ ಊಟ, ತಿಂಡಿ, ಚಹಾ, ನೀರಿನ ವ್ಯವಸ್ಥೆ, ಸಮಾರಂಭ ನಡೆದ ಪ್ರದೇಶ ತುಂಬಾ ಚೆನ್ನಾಗಿತ್ತು.

## ಸಂಪರ್ಕ ರಸ್ತೆ ಕಾಮಗಾರಿಗೆ ಭೂಮಿ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ. ಖಂಡ್ರೆ ಅವರ ಸುಮಾರು ₹1 ಕೋಟಿ 70 ಲಕ್ಷ ಅನುದಾನದಡಿ ಲಖನಗಾವ್ ಗ್ರಾಮದಿಂದ ಹೊರಂಡಿ ಸಂಪರ್ಕಿಸುವ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಉತ್ತಮ ರಸ್ತೆ ಸಂಪರ್ಕ ಅತ್ಯಂತ ಅಗತ್ಯವಾಗಿದ್ದು, ಈ ರಸ್ತೆ ನಿರ್ಮಾಣದಿಂದ ಲಖನಗಾವ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಸುಗಮ ಸಂಚಾರ ಸೌಲಭ್ಯ ದೊರೆಯಲಿದೆ ಎಂದು ತಿಳಿಸಿದರು. ವಿಶೇಷವಾಗಿ ರೈತ ಬಾಂಧವರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಹೆಚ್ಚಿನ ಅನುಕೂಲವಾಗಲಿದೆ ಎಂದರು.

ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳ ಜೊತೆಗೆ ಸಮಗ್ರ ಅಭಿವೃದ್ಧಿಗೂ ಆದ್ಯತೆ ನೀಡುತ್ತಿದೆ. ಗ್ಯಾರಂಟಿಗಳಿಂದ ಅಭಿವೃದ್ಧಿ ಸಾಧ್ಯವಿಲ್ಲ ಎಂದು




ವಿರೋಧ ಪಕ್ಷದವರು ಟೀಕಿಸುತ್ತಿದ್ದರು. ಆದರೆ ಇಂದು ಗ್ಯಾರಂಟಿಗಳ ಜೊತೆಗೆ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುತ್ತಿರುವುದು ಸರ್ಕಾರದ ಬದ್ಧತೆಯಾಗಿದೆ ಎಂದು ಹೇಳಿದರು.

ಗ್ರಾಮೀಣ ಭಾಗಗಳ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗೆ ಉತ್ತೇಜನ ನೀಡುವ ದಿಸೆಯಲ್ಲಿ ಸರ್ಕಾರ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಸಚಿವರು ತಿಳಿಸಿದರು.

# ಕೇಂದ್ರ ಸಚಿವ ಜತೆ ಚರ್ಚೆ, 500 ಎಕರೆ ಗುರುತಿಸಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕೇಂದ್ರ ಸರಕಾರ, ಮಂಡ್ಯ ಜಿಲ್ಲೆಯಲ್ಲಿ ಎ.ಆರ್.ಎ.ಐ. (ಆಟೊಮೋಟೋವ್ ರೀಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ) ಕೇಂದ್ರ ಸ್ಥಾಪನೆಗೆ ಆಸಕ್ತಿ ತೋರಿದ್ದು ಅದಕ್ಕೆ ನಿಗದಿಪಡಿಸಿರುವ 100 ಎಕರೆಗಿಂತ ಪರ್ಯಾಯವಾಗಿ ಕನಿಷ್ಠ 500 ಎಕರೆಯಲ್ಲಿ ಪೂರಕ ಕೈಗಾರಿಕಾಭಿವೃದ್ಧಿ ಪಾರ್ಕ್ ಸ್ಥಾಪನೆ ಬಗ್ಗೆ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹಾಗೂ ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕಾ ಸಚಿವ ಎಚ್. ಡಿ. ಕುಮಾರಸ್ವಾಮಿ ಅವರು ಇಂದು ಚರ್ಚಿಸಿ, ಸೂಕ್ತ ಸ್ಥಳ ಹುಡುಕಲು ಅಧಿಕಾರಿಗಳಿಗೆ ಸೂಚಿಸಿದರು.

ವಿಧಾನಸೌಧದ ಸಮಿತಿ ಸಭಾಂಗಣದಲ್ಲಿ ಇಬ್ಬರೂ ಸಚಿವರು ಸೋಮವಾರ ಅಧಿಕಾರಿಗಳ ಜತೆ ವಿಸ್ತೃತ ಮಾತುಕತೆ ನಡೆಸಿದರು.

'ಬರೇ 100 ಎಕರೆಯಲ್ಲಿ ಎ ಆರ್ ಎ ಐ ಕೇಂದ್ರ ಸ್ಥಾಪಿಸಿದರೆ ಅದು ಕೇವಲ ಒಂದು ಕೇಂದ್ರವಾಗಿ



ಇರುತ್ತದೆ. ಅದರ ಬದಲು ಪೂರಕ ಆಟೊಮೊಬೈಲ್ ಕ್ಷೇತ್ರದ ಅಭಿವೃದ್ಧಿಗೆ ಬೇಕಾಗುವ ಹಾಗೆ ಕನಿಷ್ಠ 500 ಎಕರೆಯಲ್ಲಿ ಆ ಕೇಂದ್ರವನ್ನೂ ಸೇರಿಸಿಕೊಂಡು ಕೈಗಾರಿಕಾ ಹಬ್ ಅಭಿವೃದ್ಧಿಪಡಿಸುವುದು ಸೂಕ್ತ. ಇದನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಕೂಡ ಒಪ್ಪಿದ್ದಾರೆ. ಈ ಉದ್ದೇಶಕ್ಕಾಗಿ ಮಂಡ್ಯ ಜಿಲ್ಲೆಯಲ್ಲಿ ಇರುವ ಸರಕಾರಿ/ಖಾಸಗಿ ಜಮೀನನ್ನು ಗುರುತಿಸುವಂತೆ ವಿಶೇಷ ಜಿಲ್ಲಾಧಿಕಾರಿಗೆ ಸೂಚಿಸಲಾಗಿದೆ ಎಂದು ಸಚಿವ ಪಾಟೀಲ ತಿಳಿಸಿದ್ದಾರೆ.

ಕುಮಾರಸ್ವಾಮಿಯವರು ವಾಹನಗಳ ಪರೀಕ್ಷೆ ನಡೆಸಿ, ಪ್ರಮಾಣಪತ್ರ ಕೊಡುವ ಎ.ಆರ್.ಎ.ಐ ಕೇಂದ್ರ ಸ್ಥಾಪನೆಗೆ ಮಂಡ್ಯ ಜಿಲ್ಲೆಯಲ್ಲಿ 100 ಎಕರೆ ಕೇಳಿದ್ದರು. ನಾವು ಬಸರಾಳು ಬಳಿ 105 ಎಕರೆ ತೋರಿಸಿದ್ದೇವೆ. ಇದು ಬಹುಮಟ್ಟಿಗೆ ಅವರಿಗೆ ಒಪ್ಪಿಗೆಯಾಗಿದೆ. ಆದರೆ ಈಗ ಕೈಗಾರಿಕಾ ಹಬ್ ಅಭಿವೃದ್ಧಿಪಡಿಸುವ ಚಿಂತನೆ ಬಂದಿದ್ದು ಪರ್ಯಾಯ ಜಾಗಕ್ಕೆ ಸಲಹೆ ನೀಡಲಾಗಿದೆ. ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಅಂಟಿಕೊಂಡಿರುವ ಬೆಳ್ಳೂರಿನ ಬಳಿ 2021ರಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ 425 ಎಕರೆ ಸ್ವಾಧೀನ ಪಡಿಸಿಕೊಳ್ಳಲಾಗಿದ್ದು, ಅದಕ್ಕೆ ಪರಿಹಾರ ವಿತರಣೆ ಮಾತ್ರ ಬಾಕಿ ಇದೆ. ಈ ಜಾಗವನ್ನೂ ನೋಡುವಂತೆ ಕೇಂದ್ರ ಸರಕಾರವನ್ನು ಕೋರಲಾಗಿದೆ ಎಂದು ಅವರು ಹೇಳಿದ್ದಾರೆ. ಇದಲ್ಲದೆ, ಮಂಡ್ಯ ಸಮೀಪದ ತೂಬಿನಕೆರೆ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡಿರುವ ಪಾಂಡವಪುರ ಹಾಗೂ ಮಂಡ್ಯ ತಾಲ್ಲೂಕುಗಳ ಅಂಚಿನಲ್ಲಿಯೂ ಕೈಗಾರಿಕಾ ಹಬ್ ಸ್ಥಾಪಿಸಬಹುದು ಎಂದು ಸಭೆಯಲ್ಲಿ ಹಾಜರಿದ್ದ ಕೆಲವರು ಸಲಹೆ ನೀಡಿದರು.

ಅಧಿಕಾರಿಗಳ ವರದಿ ಬಳಿಕ ಮತ್ತೊಂದು ಸುತ್ತು ಸಭೆ ಸೇರಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಕೈಗಾರಿಕಾ ಹಬ್ ಬಂದರೆ ಬಂಡವಾಳ ಹೂಡಿಕೆ, ಆರ್ಥಿಕ ವಹಿವಾಟು ಮತ್ತು ಉದ್ಯೋಗ ಸೃಷ್ಟಿ ಎರಡೂ ಸಾಧ್ಯವಾಗುತ್ತದೆ ಎಂದು ಪಾಟೀಲ ವಿವರಿಸಿದ್ದಾರೆ.

# ಅಧಿಕಾರಿಗಳೇ, ಫೋನ್ ರಿಸೀವ್ ಮಾಡಿ



**ವರ್ತಮಾನ-ವಿಜಯ**
● ಮಧೂರ ತಿಳಗೂಳಕರ
ಜಿಲ್ಲಾ ವರದಿಗಾರರು

ಅಧಿಕಾರಿಗಳೇ, ಫೋನ್ ರಿಸೀವ್ ಮಾಡಿ ಇದು ಜನಸೇವೆಯ ಮೊದಲ ಹೆಜ್ಜೆ...

ಸಾರ್ವಜನಿಕ ಮತ್ತು ಆಡಳಿತ ಯಂತ್ರದ ನಡುವಿನ ಸಂಪರ್ಕ ಸೇತುವೆಯೇ ಸಂವಹನ, ಹೌದು ವಿಜಯಪುರ ಜಿಲ್ಲೆಯ ಬಹುತೇಕ ಇಲಾಖೆಯ ಸಿಬ್ಬಂದಿಯಿಂದ ಹಿಡಿದು ಮೇಲಾಧಿಕಾರಿಗಳು ಸಾರ್ವಜನಿಕರ ಕರೆಗಳಿಗೆ ಸ್ಪಂದಿಸುವುದೇ ಇಲ್ಲಾ, ಸ್ಪಂದಿಸುವುದು ಬಿಡಿ ಕರೆಗಳು ಸಂಪರ್ಕಕ್ಕೆ ಬರುವುದೇ ಇಲ್ಲಾ ಕರೆ ಮಾಡಿದರೆ "ಒಂದು ನಾಟ್ ರೀಚೆಬಲ್" ಇಲ್ಲಾ "ನೀವು ಕರೆ ಮಾಡುತ್ತಿರುವ ವ್ಯಕ್ತಿಯು ನಿಮ್ಮ ಕರೆಯನ್ನು ಉತ್ತರಿಸಿಲಸುತ್ತಿಲ್ಲಾ " ಎಂದು ಕೇಳಿ ಮತ್ತೆ ಕರೆ ಮಾಡಿದರೆ ನಾಟ್ ರೀಚೆಬಲ್, ಇಂದಿನ ಡಿಜಿಟಲ್ ಯುಗದಲ್ಲಿ ಮೊಬೈಲ್ ಫೋನ್ ಈ ಸಂವಹನದ ಅತ್ಯಂತ ವೇಗದ ಮಾಧ್ಯಮವಾಗಿದೆ ಆದರೆ, ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಎದುರಿಸುತ್ತಿರುವ ಒಂದು ದೊಡ್ಡ ಸಮಸ್ಯೆ ಎಂದರೆ ಅಧಿಕಾರಿಗಳು ಸಕಾಲಕ್ಕೆ ಫೋನ್ ಕರೆಗಳನ್ನು ಸ್ವೀಕರಿಸದಿರುವುದು ಸರ್ಕಾರ ನಿಮಗೆ ಸಂಬಳ ಕೊಟ್ಟು ಸರ್ಕಾರಿ ಸಿಮ್ ಕಾರ್ಡ್ ನೀಡಿರುವುದು







ಸಾರ್ವಜನಿಕರ ಸಂಪರ್ಕಕ್ಕೆ ದೊರಕಿ ಸಮಸ್ಯೆಗಳನ್ನು ಆಲಿಸಲು ಆದರೆ ಈ ಅಧಿಕಾರಿಗಳು ತಮ್ಮ ವೈಯಕ್ತಿಕ ಮೊಬೈಲ್ ಜೊತೆಗೆ ಇನ್ನೊಂದು ಮೊಬೈಲ್ ಇರಲಿ ಎಂದು ಶೋಕಿಗಾಗಿ ಹಿಡಿದುಕೊಂಡು ಓಡಾಡಲು ಕಾರಣವಾಗಿದೆ ಅಷ್ಟೇ...

**ಸಂಪರ್ಕದ ಕೊರತೆ; ಸಾಮಾನ್ಯರ ಪರದಾಟ**

ಒಬ್ಬ ಸಾಮಾನ್ಯ ವ್ಯಕ್ತಿ ಅಧಿಕಾರಿಗೆ ಫೋನ್ ಮಾಡುತ್ತಿದ್ದಾನೆ ಎಂದರೆ ಅದರ ಹಿಂದೆ ಒಂದು ತುರ್ತು ಅಗತ್ಯ ಅಥವಾ ಗಂಭೀರವಾದ ಸಮಸ್ಯೆ ಇರುತ್ತದೆ. ದೂರದ ಹಳ್ಳಿಯಿಂದ ನಗರದ ಕಚೇರಿಗೆ ಬರಲಾಗದ ಅಸಹಾಯಕರು, ಮಾಹಿತಿ ಅಥವಾ ಸೌಲಭ್ಯಗಳ ಬಗ್ಗೆ ವಿಚಾರಿಸುವವರು ಫೋನ್ ಮೂಲಕವೇ ಪರಿಹಾರ ನಿರೀಕ್ಷಿಸುತ್ತಾರೆ. ಆದರೆ ಕರೆ ಮಾಡಿದಾಗ "ಬಿಜಿ" ಬರುವುದು ಅಥವಾ ರಿಂಗ್ ಆದರೂ ಸ್ವೀಕರಿಸದಿರುವುದು ಜನರಲ್ಲಿ ಆಡಳಿತದ ಬಗ್ಗೆ ಅಸಮಾಧಾನ ಮೂಡಿಸುತ್ತದೆ.

**ಅಧಿಕಾರಿಗಳು ಫೋನ್ ಸ್ವೀಕರಿಸುವುದು ಏಕೆ ಮುಖ್ಯ?**

**ತುರ್ತು ನಿರ್ವಹಣೆ:** ಅಗ್ನಿ ಅವಘಡ, ಪ್ರವಾಹ ಅಥವಾ ಕಾನೂನು ಸುವ್ಯವಸ್ಥೆಯಂತಹ ಸಂದರ್ಭಗಳಲ್ಲಿ ಒಂದು ಫೋನ್ ಕರೆ ದೊಡ್ಡ ಅನಾಹುತವನ್ನು ತಪ್ಪಿಸಬಹುದು ಆದರೆ ವಿಜಯಪುರ ಜಿಲ್ಲೆಯ ಹೆಸ್ಕಾಂ ಅಧಿಕಾರಿಗಳಿಂದ ಹಿಡಿದು ಮೇಲಾಧಿಕಾರಿಗಳು ಬಹುತೇಕ ಎಲ್ಲಾ ಇಲಾಖೆಗಳ ಅಧಿಕಾರಿಗಳು ಕರೆಗಳಿಗೆ ಸ್ಪಂದಿಸುವುದು ಅನುಮಾನವೇ ಸರಿ, ಕೇಳಿದ್ರೆ ಮಿಟಿಂಗೂ , ಅದು ಇದು ನೆಪ ಬೇರೆ ಇನ್ನು ಕೆಲ ಅಧಿಕಾರಿಗಳಂತೂ ನೋಡಿ ಸರ್ ಪ್ರತಿನಿತ್ಯ ನೂರಾರು ಕೆರೆಗಳು ಬರುತ್ತವೆ ನಾನು ಒಬ್ಬನೇ ಎಷ್ಟು ಕರೆಗಳಿಗೆ ಸ್ಪಂದಿಸಲು ಸಾಧ್ಯ ನೀವೇ ಹೇಳಿ ಎಂದು ಉಡಾಫೆ ಬೇರೆ...

**ಪಾರದರ್ಶಕತೆ:** ಅಧಿಕಾರಿಗಳು ನೇರವಾಗಿ ಮಾತನಾಡಿದಾಗ ಮಧ್ಯವರ್ತಿಗಳ ಹಾವಳಿ ತಪ್ಪುತ್ತದೆ ಮತ್ತು ಸಾರ್ವಜನಿಕರಲ್ಲಿ ನಂಬಿಕೆ ಹೆಚ್ಚುತ್ತದೆ.

ಸಮಯದ ಉಳಿತಾಯವೂ ಆಗುತ್ತದೆ. ಒಂದು ಸಣ್ಣ ಮಾಹಿತಿಗಾಗಿ ಸಾರ್ವಜನಿಕರು ಕಿಲೋಮೀಟರ್‌ಗಟ್ಟಲೆ ಪ್ರಯಾಣಿಸಿ ಕಚೇರಿಗೆ ಬರುವ ಶ್ರಮ ಮತ್ತು ಹಣ ಉಳಿಯುತ್ತದೆ.

**ಜವಾಬ್ದಾರಿಯುತ ಆಡಳಿತ:** ಜನಪ್ರತಿನಿಧಿಗಳು ಮತ್ತು ಉನ್ನತ ಅಧಿಕಾರಿಗಳು ಜನಸಾಮಾನ್ಯರ ಧ್ವನಿಗೆ ಓಗೊಡುವುದು ಪ್ರಜಾಪ್ರಭುತ್ವದ ಆಶಯ , ಸರ್ಕಾರಿ ಅಧಿಕಾರಿಗಳು ಜನರ ಸೇವಕರು ಅಧಿಕಾರ ಎಂಬುದು ಕೇವಲ ಆಸನವಲ್ಲ, ಅದು ಜವಾಬ್ದಾರಿ. ಒಂದು ಫೋನ್ ಕರೆ ಸ್ವೀಕರಿಸುವ ಮೂಲಕ ನೀವು ಒಬ್ಬ ಬಡವನ ಕಣ್ಣೀರು ಒರೆಸಬಹುದು ಅಥವಾ ಒಂದು ದೊಡ್ಡ ಸಮಸ್ಯೆಗೆ ತಕ್ಷಣದ ಪರಿಹಾರ ನೀಡಬಹುದು. ಆದ್ದರಿಂದ "ಅಧಿಕಾರಿಗಳೇ, ಸಾರ್ವಜನಿಕರ ಕರೆಗಳಿಗೆ ಸ್ಪಂದಿಸಿ, ಉತ್ತಮ ಆಡಳಿತವನ್ನು ಜನರ ಹತ್ತಿರಕ್ಕೆ ತನ್ನಿ ಎಂಬುದೇ ನಮ್ಮ ಆಶಯ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)